

# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 | Issue: 238 | ₹ ಬೆಲೆ: 4 | Tuesday, 14, November,2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23

ನಾಡಿನ ಸಮಸ್ತ ಜನತೆಗೆ

ದೀಪಾವಳಿ ಹಬ್ಬದ ಹಾರ್ದಿಕ



ಶುಭಾಶಯಗಳು

## ಬಿ.ವೈ. ವಿಜಯೇಂದ್ರ ಮೂರು ವರ್ಷ ಮಾತ್ರ ರಾಜ್ಯಾಧ್ಯಕ್ಷ: ಪ್ರಹ್ಲಾದ್ ಜೋಶಿ

ಹುಬ್ಬಳ್ಳಿ: ಬಿಜೆಪಿ ರಾಜ್ಯಾಧ್ಯಕ್ಷ ರನ್ನಾಗಿ ಬಿ.ವೈ.ವಿಜಯೇಂದ್ರ ನೇಮಕವನ್ನು ನಾನು ಹರ್ಷದಿಂದ ಸ್ವಾಗತಿಸುತ್ತೇನೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹೇಳಿದ್ದಾರೆ.



ಹುಬ್ಬಳ್ಳಿಯಲ್ಲಿ ಸುದ್ದಿಗಾರ ರೊಂದಿಗೆ ಮಾತನಾಡಿದ ಸಚಿವ ಪ್ರಹ್ಲಾದ್ ಜೋಶಿ, ಬಿ.ವೈ.ವಿಜಯೇಂದ್ರ 3 ವರ್ಷ ಮಾತ್ರ ಅಧ್ಯಕ್ಷರಾಗಿರುತ್ತಾರೆ. ಬಳಿಕ ಮತ್ತೊಬ್ಬ ಕಾರ್ಯಕರ್ತ ಅಧ್ಯಕ್ಷರಾಗುತ್ತಾರೆ ಎಂದು ಹೇಳಿದ್ದಾರೆ.

ವಿಜಯೇಂದ್ರ ಅವರನ್ನು ರಾಜ್ಯಾಧ್ಯಕ್ಷರನ್ನಾಗಿ ನೇಮಕ ಮಾಡಿ ಹೈಕಮಾಂಡ್ ಸೂಕ್ತ ನಿರ್ಧಾರ ಕೈಗೊಂಡಿದೆ. ಯುವ ನಾಯಕತ್ವಕ್ಕೆ ಅವಕಾಶ ಕೊಡಬೇಕು ಎಂದು ಪಕ್ಷ ಅತೀರ್ಮಾನಿಸಿದೆ. ನಮ್ಮ ಸಹಕಾರ ವಿಜಯೇಂದ್ರಗಿದೆ ಎಂದು ಹೇಳಿದರು. ಮಾಜಿ ಸಿಎಂ ಯಡಿಯೂರಪ್ಪ ಮಾರ್ಗದರ್ಶನದಲ್ಲಿ ವಿಜಯೇಂದ್ರ ಕೆಲಸ ಮಾಡಲಿದ್ದಾರೆ. ನಮ್ಮಲ್ಲಿ ಯಾವುದೇ ಬಣ ಇಲ್ಲ, ವಿಜಯೇಂದ್ರ 15 ವರ್ಷಗಳಿಂದ ಪಕ್ಷದಲ್ಲಿ ಕೆಲಸ ಮಾಡಿದ್ದಾರೆ ಎಂದರು.ಇನ್ನು ವಿಜಯೇಂದ್ರ ನೇಮಕಕ್ಕೆ ಸಿ.ಟಿ.ರವಿ, ಅರವಿಂದ್ ಬೆಲ್ಲದ್ ಅಸಮಾಧಾನ ವಿಚಾರವಾಗಿ ಪ್ರತಿಕ್ರಿಯಿಸಿದ ಪ್ರಹ್ಲಾದ್ ಜೋಶಿ, ನಾನು ಬೆಲ್ಲದ್ ಅವರ ಜೊತೆ ಮಾತನಾಡುತ್ತೇನೆ. ಸಣ್ಣಪುಟ್ಟ ಅಸಮಾಧಾನವಿದೆ ನಾವೆಲ್ಲರೂ ಸೇರಿ ಸರಿ ಮಾಡುತ್ತೇವೆ ಎಂದಿದ್ದಾರೆ.

## ಇದು ಕರ್ನಾಟಕ, ಡಿಕೆಶಿ ರಿಪಬ್ಲಿಕ್ ಅಲ್ಲ: ಕುಮಾರಸ್ವಾಮಿ ತಿರುಗೇಟು

ಬೆಂಗಳೂರು: ಗ್ಯಾರಂಟಿಗಳಿಗೂ ಕುಮಾರಸ್ವಾಮಿಗೂ ಏನು ಸಂಬಂಧ ಎಂದಿದ್ದ ಡಿಸಿಎಂ ಡಿ.ಕೆ.ಶಿವಕುಮಾರ್ ಅವರಿಗೆ ತೀಕ್ಷ್ಣ ತಿರುಗೇಟು ಕೊಟ್ಟಿರುವ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರು; 'ಇದು ಕರ್ನಾಟಕ, ಡಿಕೆಶಿ ರಿಪಬ್ಲಿಕ್ ಅಲ್ಲ' ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಎಕ್ಸ್ ಜಾಲತಾಣದಲ್ಲಿ ಕಿಡಿಕಾರಿರುವ ಅವರು; ಜನರು ಆಡಳಿತ ಪಕ್ಷದಲ್ಲಿ ಕೂರಿಸಿದ್ದಾರೆ ಎಂದಷ್ಟಕ್ಕೇ ಇವರ ತಲೆ ನಿಲ್ಲುತ್ತಿಲ್ಲ.

ಚಕ್ರ ತಿರುಗಲು ಶುರು ಮಾಡಿದೆ. ಅದು ಕೆಳಕ್ಕೆ ಬಂದೇ ಬರುತ್ತದೆ. ಸ್ವಲ್ಪ ಸಮಯ ಬೇಕಷ್ಟೇ, ಆಗ ತಿರುಗುವ ತಲೆ ತಾನಾಗಿಯೇ ನಿಲ್ಲುತ್ತದೆ ಎಂದು ಮಾರ್ಮಿಕವಾಗಿ ಚುಚ್ಚಿದ್ದಾರೆ.

ಡೂಪ್ಲಿಕೇಟ್ ಸಿಎಂ ಬಹಳ ಆವೇಶದಲ್ಲಿದ್ದಾರೆ. ಅತಿಯಾದ ಆವೇಶ ಆರೋಗ್ಯಕ್ಕೆ ಹಾನಿಕಾರಕ! ಈ ಎಚ್ಚರಿಕೆ ನೆನಪಿದ್ದರೆ ಕ್ಷೇಮ. ಹೆಚ್.ಡಿ.ಕುಮಾರಸ್ವಾಮಿಗೂ ಗ್ಯಾರಂಟಿಗಳಿಗೂ ಏನು ಸಂಬಂಧ? ಎಂಬ ಆಣಿಮುತ್ತು ಉದುರಿಸಿದ್ದಾರೆ. ಅಧಿಕಾರದ ಪಿತ್ತ ನೆತ್ತಿಗೇರಿ ಮಿದುಳು ಕೆಲಸ ಮಾಡದಿದ್ದರೆ ನಾಲಿಗೆ ಹೀಗೆ ಮಾತನಾಡುತ್ತದೆ. ಅಚ್ಚರಿಯೇನೂ ಇಲ್ಲ ಎಂದು ಅವರು ಹೇಳಿದ್ದಾರೆ.

ಇದು ಕರ್ನಾಟಕ, ಡಿಕೆಶಿ ರಿಪಬ್ಲಿಕ್ ಅಲ್ಲ. ಪ್ರಜಾಪ್ರಭುತ್ವದಲ್ಲಿ ಆಡಳಿತ ಪಕ್ಷ, ಪ್ರತಿಪಕ್ಷ ಇರುತ್ತವೆ. ಇದು ಗೊತ್ತಿಲ್ಲದಷ್ಟು ಅಜ್ಞಾನವೇ? ಪ್ರಶ್ನೆ ಮಾಡಬೇಕು ಎಂತಲೇ ಜನ ನನ್ನನ್ನು ವಿರೋಧಪಕ್ಷದಲ್ಲಿ ಕೂರಿಸಿದ್ದಾರೆ. ಇವರನ್ನು ಆಡಳಿತ ಪಕ್ಷದಲ್ಲಿ ಕೂರಿಸಿದ್ದಾರೆ ಎಂದಷ್ಟಕ್ಕೇ ತಲೆ ನಿಲ್ಲುತ್ತಿಲ್ಲ. ಚಕ್ರ ತಿರುಗಲು ಶುರು ಮಾಡಿದೆ.

ಅದು ಕೆಳಕ್ಕೆ ಬಂದೇ ಬರುತ್ತದೆ. ಸ್ವಲ್ಪ ಸಮಯ ಬೇಕಷ್ಟೇ, ಆಗ ತಿರುಗುವ ತಲೆ ತಾನಾಗಿಯೇ ನಿಲ್ಲುತ್ತದೆ



ಎಂದು ಅವರು ಡಿಕೆಶಿಗೆ ಕುಟುಕಿದ್ದಾರೆ.

**ಚೀಫ್ ಗಿಮಿಕ್ ಎಂದಿದ್ದರು ಸಚಿವರು:**

ಪಂಚರತ್ನಗಳು ರಾಜ್ಯದ ಸಮಗ್ರ ಅಭಿವೃದ್ಧಿಗೆ ನಾನು ರೂಪಿಸಿದ್ದ ಪಂಚಸೂತ್ರಗಳು. ಕಾಂಗ್ರೆಸ್ ಗ್ಯಾರಂಟಿಗಳು ಜನರನ್ನು ಶಾಶ್ವತ 'ಆರ್ಥಿಕವೈಕಲ್ಯ'ರನ್ನಾಗಿಸುವ ತಾತ್ಕಾಲಿಕ ತಂತ್ರಗಳಷ್ಟೇ. 75 ವರ್ಷಗಳಿಂದಲೂ ಇದನ್ನೇ ಮಾಡಿದೆ. ಜನರ ಕೈಲಿ ಭಿಕ್ಷಾಪಾತ್ರೆ ಇದ್ದರೆ.

ವೋಟಿನ ಜೋಳಿಗೆ ಭರ್ತಿ ಆಗುತ್ತದೆ ಎನ್ನುವ ದುಷ್ಟಬುದ್ಧಿ ಇವರದ್ದು. ಜನರು ಸ್ವಾವಲಂಬಿಗಳಾಗಿ ಗೌರವಯುತ ಜೀವನ ನಡೆಸಬೇಕು ಎನ್ನುವ ಹಂಬಲ ನನ್ನದಾಗಿತ್ತು. ಡೂಪ್ಲಿಕೇಟ್ ಸಿಎಂ ಸಹೋದ್ಯೋಗಿ ಸಚಿವರೊಬ್ಬರೇ ಹೇಳಿದ್ದರಲ್ಲ;

"ಎಲೆಕ್ಷನ್ ಗೆಲ್ಲಬೇಕಾದರೆ ಗ್ಯಾರಂಟಿಗಳಂಥ ಚೀಫ್ ಗಿಮಿಕ್ ಮಾಡಲೇಬೇಕು" ಎಂದು. ಗ್ಯಾರಂಟಿಗಳು ಚೀಫ್ ಗಿಮಿಕ್ ಎನ್ನುವ ಆ ಸಚಿವರ ಮಾತಿಗೆ ನನ್ನ ಸಹಮತವಿದೆ ಡಿಕೆಶಿಗೆ ಟಾಂಗ್ ನೀಡಿದ್ದಾರೆ.

**ಗ್ಯಾರಂಟಿಗಳ ಬಗ್ಗೆ ಶ್ವೇತಪತ್ರ ಹೊರಡಿಸಿ:**

ಗ್ಯಾರಂಟಿಗಳು ಹಳ್ಳ ಹಿಡಿದು ವಿಫಲವಾಗಿವೆ. ಅನುಮಾನವೇ ಇಲ್ಲ. ಯಾವ ಗ್ಯಾರಂಟಿಯೂ ಸಮರ್ಪಕ ಜಾರಿ ಆಗಿಲ್ಲ. ಎಷ್ಟು ಜನರಿಗೆ ಫಲ ಸಿಕ್ಕಿದೆ? ಆರ್ಥಿಕವಾಗಿ ಹೊರೆ ಎಷ್ಟು ಬಿದ್ದಿದೆ? ಹೊರಡಿಸಿ ಶ್ವೇತಪತ್ರವನ್ನು. ಬನ್ನಿ ಚರ್ಚೆಗೆ, ನಾನು ತಯಾರಿದ್ದೇನೆ. ಅಧಿವೇಶನದಲ್ಲೂ ದಾಖಲೆ ಸಮೇತ ಚರ್ಚೆಗೆ ಸಿದ್ಧನಿದ್ದೇನೆ, ಉತ್ತರಿಸಿ. ಚನ್ನಪಟ್ಟಣದ ನನ್ನ ಜನರೂ ಮಾಹಿತಿ ನೀಡಿದ್ದಾರೆ, ರಾಜ್ಯದ ಉಳಿದ 223 ಕ್ಷೇತ್ರಗಳ ಜನರು ಕೊಟ್ಟ ವಿವರವೂ ನನ್ನಲ್ಲಿದೆ. ನೀವು ಒಳಗೊಳಗೆ ಮಾಡುತ್ತಿರುವ ಗಿಲೀಟುಗಳ ಮಾಹಿತಿಯೂ ಇದೆ. ಚರ್ಚೆ ಮಾಡೋಣಂತೆ ಎಂದು ಉಪ ಮುಖ್ಯಮಂತ್ರಿಗಳಿಗೆ ನೇರ ಸವಾಲು ಹಾಕಿದ್ದಾರೆ ಕುಮಾರಸ್ವಾಮಿ ಅವರು.

**ರಾಮನ ಹೆಸರಿಗೂ ಗ್ಯಾರಂಟಿ ಇಲ್ಲ:**

ಕೋಟಿ ರೂಪಾಯಿ ಕೊಟ್ಟು ಗ್ಯಾರಂಟಿ ಸ್ಕೀಮುಗಳ ಬಗ್ಗೆ ಸಮೀಕ್ಷೆ ಮಾಡಿಸಿಕೊಂಡರಲ್ಲ, ಚನ್ನಪಟ್ಟಣದ ಜನರು ಏನು ಹೇಳಿದ್ದಾರೆಯೇ ಎಂಬ ಮಾಹಿತಿ ಅದರಲ್ಲಿ ಇದೆಯಾ? ಕೂಸು ಹುಟ್ಟುವ ಮುನ್ನವೇ ಕುಲಾವಿಯೇ? ಗ್ಯಾರಂಟಿ ಜಾರಿಗೆ ಮೊದಲೇ ಸಮೀಕ್ಷೆ ಪ್ಲ್ಯಾನ್ ಮಾಡಿಕೊಂಡಿದ್ದರಲ್ಲ, ಯಾಕೆ? ನಿಮ್ಮ ಯೋಗ್ಯತೆಗೆ ಇನ್ನು 'ಯುವನಿಧಿ' ಬಂದೇ ಇಲ್ಲ. ಅದು ಬರುತ್ತೋ ಇಲ್ಲವೋ ಗೊತ್ತಿಲ್ಲ. ಅದನ್ನು ಚನ್ನಪಟ್ಟಣದ ಜನರನ್ನೇ ಕೇಳಬೇಕೆ? ಇವರ ರಾಜಕೀಯ ಸ್ವಾರ್ಥಕ್ಕೆ ರಾಮನಗರ, ಚನ್ನಪಟ್ಟಣ, ಮಾಗಡಿ ಕ್ಷೇತ್ರಗಳನ್ನು ಬಲಿಗೊಟ್ಟು, 'ರಾಮನಗರ' ಹೆಸರಿಗೇ ಕೊಕ್ ಕೊಡಲು ಹೊರಟಿದ್ದಾರೆ. ಅಯ್ಯೋ ದೇವರೇ, ಈ ಸರಕಾರದಲ್ಲಿ ರಾಮನ ಹೆಸರಿಗೂ ಗ್ಯಾರಂಟಿ ಇಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ಶಿಕ್ಷಣ ಸಚಿವರ ಫೇಸ್‌ಬುಕ್ ಖಾತೆ ಹ್ಯಾಕ್; ದೂರು ದಾಖಲು



ಬೆಂಗಳೂರು: ಶಿಕ್ಷಣ ಖಾತೆ ಸಚಿವ ಎಸ್. ಮಧು ಬಂಗಾರಪ್ಪ ಅವರ ಫೇಸ್‌ಬುಕ್ ಖಾತೆಯನ್ನು ಕಿಡಿಗೇಡಿಗಳು ಹ್ಯಾಕ್ ಮಾಡಿದ್ದಾರೆ.

ಸಚಿವರ ಆಪ್ತ ಸಹಾಯಕ ಚಿನ್ಮಯಿ ದೇವಧರ್ ಅವರು ಕೇಂದ್ರ ಸಿಇಎನ್ ಠಾಣೆಗೆ ಈ ಕುರಿತು ದೂರು ನೀಡಿದ್ದಾರೆ.

2012ರಲ್ಲಿ ಮಧು ಬಂಗಾರಪ್ಪ ಫೇಸ್ಬುಕ್ ಖಾತೆ ತೆರೆದಿದ್ದರು. ಆ ಖಾತೆಯನ್ನು ಚಿನ್ಮಯಿ, ಅನಿಲ್ ಬಿ. ನಾಯಕ್, ಸಂತೋಷ್ ನಿರ್ವಹಿಸುತ್ತಿದ್ದರು. ನ. 8 ಬುಧವಾರದಂದು ಅಪರಿಚಿತ ವ್ಯಕ್ತಿ ಸಚಿವರ ಫೇಸ್ಬುಕ್ ಖಾತೆ ಹ್ಯಾಕ್ ಮಾಡಿದ್ದಾನೆ.

ಅಷ್ಟೇ ಅಲ್ಲದೇ ಖಾತೆ ನಿರ್ವಹಿಸುತ್ತಿದ್ದ ಮೂವರನ್ನು ನಿರ್ವಹಣಾ ಸ್ಥಾನದಿಂದ ಡಿಲೀಟ್ ಮಾಡಿದ್ದಲ್ಲದೇ, ಸಚಿವರ ಅಧಿಕೃತ ಫೇಸ್ ಬುಕ್ ಅಕೌಂಟನ್ನು ತನ್ನ ವಶಕ್ಕೆ ಪಡೆದಿದ್ದಾನೆ. ಸೈಬರ್ ಕ್ರೈಂ ವಿಭಾಗದ ಪೊಲೀಸರು ಈ ಕುರಿತು ಸೂಕ್ತ ತನಿಖೆ ನಡೆಸಿ ಆರೋಪಿಯನ್ನು ಪತ್ತೆ ಹಚ್ಚುವಂತೆ ಸೈಬರ್ ಕ್ರೈಂ ಇಲಾಖೆ ಪೊಲೀಸರಿಗೆ ದೂರು ಸಲ್ಲಿಸಲಾಗಿದೆ. ತನಿಖೆ ಆರಂಭಗೊಂಡಿದ್ದು ಶೀಘ್ರದಲ್ಲೇ ಆರೋಪಿಯನ್ನು ಪತ್ತೆ ಹಚ್ಚುವುದಾಗಿ ಪೊಲೀಸರು ಭರವಸೆ ನೀಡಿದ್ದಾರೆ.

## ಎಸ್.ಎಂ.ಕೃಷ್ಣರನ್ನು ಭೇಟಿ ಮಾಡಿದ ವಿಜಯೇಂದ್ರ

ಬೆಂಗಳೂರು: ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಇಂದು ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣರನ್ನು ಅವರ ನಿವಾಸದಲ್ಲಿ ಭೇಟಿ ಮಾಡಿ ಆಶೀರ್ವಾದ ಮತ್ತು ಮಾರ್ಗದರ್ಶನ ಪಡೆದರು.

ಇದೇವೇಳೆ ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಎಸ್.ಎಂ.ಕೃಷ್ಣ ಅವರು, ಬಿಜೆಪಿ ರಾಜ್ಯ ಅಧ್ಯಕ್ಷರಾಗಿ ಆಯ್ಕೆಯಾದ ವಿಜಯೇಂದ್ರರನ್ನು ಹಾರ್ದಿಕವಾಗಿ ಅಭಿನಂದಿಸುತ್ತೇನೆ. ಹತ್ತಾರು ವರ್ಷಗಳಿಂದ ಬಿಜೆಪಿಯನ್ನು ಕರ್ನಾಟಕದಲ್ಲಿ ಭದ್ರವಾದ ಬುನಾದಿಯ ಮೇಲೆ ಕಟ್ಟಲು ಯಡಿಯೂರಪ್ಪನವರು ಶ್ರಮಿಸಿದ್ದಾರೆ ಎಂದು ತಿಳಿಸಿದರು.



ಅವರು ಕಟ್ಟಿದ ಅಸ್ಥಿಭಾರದ ಮೇಲೆ ವಿಜಯೇಂದ್ರ ಅವರು ಬೃಹತ್ ಪಕ್ಷವನ್ನು ಕಟ್ಟುವ ಹಾಗೂ ಮುಂದಿನ ಲೋಕಸಭಾ ಚುನಾವಣೆ, ನಂತರ ಬರುವ ಸ್ಥಳೀಯ ಚುನಾವಣೆಗಳಲ್ಲಿ ತಮ್ಮ ಛಾಪನ್ನು ಒತ್ತಿ ತೋರಿಸುವ ದೊಡ್ಡ ಜವಾಬ್ದಾರಿ ಹೊರಲಿದ್ದಾರೆ. ಈ ಯುವ ಹೆಗಲಿನ ಮೇಲೆ ಅಂಥ ಹೊಣೆ ನೀಡಲಾಗಿದೆ. ಈ ಪ್ರತಿಭೆಯನ್ನು ಗುರುತಿಸಿ ಪ್ರಧಾನಿ ನರೇಂದ್ರ ಮೋದಿಯವರು, ಗೃಹ ಸಚಿವ ಅಮಿತ್ ಶಾ ಮತ್ತು ಜೆ.ಪಿ.ನಡ್ಡಾರವರು ಮಹತ್ವದ ಹೊಣೆಯನ್ನು ನೀಡಿದ್ದಾರೆ. ವಿಜಯೇಂದ್ರರಿಗೆ ಎಲ್ಲ ವಿಧದ ಯಶಸ್ಸು ಸಿಗಲಿ ಎಂದು ಹಾರೈಸುವುದಾಗಿ ತಿಳಿಸಿದರು. ಯುವಕರಿಗೆ ಅಧ್ಯಕ್ಷ ಸ್ಥಾನ ಕುರಿತ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಅವರು, ಇಂದಲ್ಲ ನಾಳೆ ಯುವ ಪ್ರತಿಭೆಗಳು ಹೊರಹೊಮ್ಮಬೇಕು. ಅವರ ಜೊತೆ ಹಿರಿಯರು ಸಮನ್ವಯದಿಂದ ಕಾರ್ಯ ನಿರ್ವಹಿಸಬೇಕು. ಅದಕ್ಕೆ ನಾವು ಅನುವು ಮಾಡಿಕೊಟ್ಟು ಅವರ ಕೈಗಳನ್ನು ಬಲಪಡಿಸಬೇಕು; ಅವರಿಗೆ ಮಾರ್ಗದರ್ಶನ ನೀಡಬೇಕು ಎಂದು ತಿಳಿಸಿದರು. ಶಾಸಕರಾದ ಕೃಷ್ಣಪ್ಪ, ಸಿ.ಕೆ.ರಾಮಮೂರ್ತಿ ಅವರು ಈ ಸಂದರ್ಭದಲ್ಲಿ ಇದ್ದರು.

## ಬೆಂಕಿ ಅವಘಡ; ಮೀನುಗಾರಿಕಾ ಬೋಟ್ ಗಳು ಬೆಂಕಿಗಾಹುತಿ; 5-6 ಕೋಟಿ ನಷ್ಟ

ಉಡುಪಿ: ದೀಪಾವಳಿ ಹಬ್ಬದ ಸಂದರ್ಭದಲ್ಲಿಯೇ ಮತ್ತೊಂದು ಅಗ್ನಿ ಅವಘಡ ಸಂಭವಿಸಿದೆ. ಲಂಗರು ಹಾಕಿದ್ದ ಮೀನುಗಾರಿಕಾ ಬೋಟ್ ಗಳು ಬೆಂಕಿಗಾಹುತಿಯಾಗಿರುವ ಘಟನೆ ಉಡುಪಿ ಜಿಲ್ಲೆಯ ಗಂಗೊಳ್ಳಿ ಬಂದರಿನಲ್ಲಿ ನಡೆದಿದೆ.



ದೀಪಾವಳಿ ಹಿನ್ನೆಲೆಯಲ್ಲಿ ಗಂಗೊಳ್ಳಿ ಬಂದರಿನಲ್ಲಿ ಬೋಟ್ ಗಳಿಗೆ ಪೂಜೆ ನೆರವೇರಿಸಲಾಗುತ್ತಿತ್ತು. ಈ ವೇಳೆ ಪಟಾಕಿ ಸಿಡಿಸಿದ್ದರಿಂದ ಪಟಾಕಿಯ ಕಿಡಿ ಬೋಟ್ ಗಳಿಗೆ ತಗುಲಿ ಬೆಂಕಿ ಹೊತ್ತಿಕೊಂಡಿದೆ ಎಂದು ತಿಳಿದುಬಂದಿದೆ. ನೋಡನೋಡುತ್ತಿದ್ದಂತೆ ಹಲವು ಬೋಟ್ ಗಳು ಬೆಂಕಿಗಾಹುತಿಯಾಗಿವೆ. ವಿಷಯ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಧಾವಿಸಿದ ಅಗ್ನಿಶಾಮಕ ಸಿಬ್ಬಂದಿಗಳು ಬೆಂಕಿ ನಂದಿಸಿದ್ದಾರೆ. ಗಂಗೊಳ್ಳಿ ಗ್ರಾಮದ ಮ್ಯಾಂಗನೀಸ್ ರೋಡ್ ನ ವಾರ್ಫ್ ನಲ್ಲಿ ಬೋಟ್ ಕಟ್ಟುವ ಹಾಗೂ ರಿಪೇರಿ ಮಾಡುವ ಸ್ಥಳದಲ್ಲಿ ರಿಪೇರಿಗೆ ನಿಲ್ಲಿಸಲಾಗಿದ್ದ ಬೋಟ್ ಗಳಲ್ಲಿ 8 ಪರ್ಷಿಯನ್ ಬೋಟ್ , 1 ಪಿಶಿಂಗ್ ಬೋಟ್, 1 ನಾಡ ದೋಣಿ, 1 ಡಿಂಗ್ರಿ(ಚಿಕ್ಕ ಬೋಟ್) , 8 ಜೊತೆ ಮಾಟುಬಲೆ, ಒಂದು ಬೋಟ್ ಕ್ಯಾಬಿನ್ ಹಾಗೂ 2 ಬೈಕ್ ಗಳು ಬೆಂಕಿ ತಗುಲಿ ಸುಟ್ಟು ಹೋಗಿವೆ.

ಸ್ಥಳಕ್ಕೆ ಅಗ್ನಿಶಾಮಕ ದಳ ಬಂದು ಬೆಂಕಿ ನಂದಿಸಿದ್ದು, ಘಟನಾ ಸ್ಥಳದಲ್ಲಿ ಕುಂದಾಪುರ ಉಪವಿಭಾಗದ ಪೊಲೀಸ್ ಉಪಾಧೀಕ್ಷಕರು , ವೃತ್ತ ನಿರೀಕ್ಷಕರು ಬೈಂದೂರು, ಮತ್ತು ಗಂಗೊಳ್ಳಿ ಠಾಣೆಯ ಅಧಿಕಾರಿಗಳು ಮತ್ತು ಸಿಬ್ಬಂದಿ, ಕರಾವಳಿ ರಕ್ಷಣಾ ಪಡೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಹಾಜರಿದ್ದು ಸೂಕ್ತ ನಿಗಾ ವಹಿಸಿದ್ದಾರೆ. ಘಟನೆಯಲ್ಲಿ ಅಂದಾಜು 5 ರಿಂದ 6 ಕೋಟಿ ರೂ. ನಷ್ಟ ಸಂಭವಿಸಿದೆ ಎಂದು ಅಂದಾಜಿಸಲಾಗಿದೆ. ಬೋಟ್ ಗಳಿಗೆ ಬೆಂಕಿ ಪ್ರಕರಣಕ್ಕೆ ಸಂಬಂಧಿಸಿದಂತೆ ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಂದ ಸಂಪೂರ್ಣ ಮಾಹಿತಿ ಪಡೆದು, ಸೂಕ್ತ ಕ್ರಮಕ್ಕೆ ನಿರ್ದೇಶನ ನೀಡಿದ್ದಾರೆ. ಮೀನುಗಾರಿಕಾ ಹಾಗೂ ಬಂದರು ಸಚಿವ ಮಂಕಾಳು ವೈದ್ಯ ಅವರೊಂದಿಗೂ ಮಾತನಾಡಿದ್ದಾರೆ.

ಕೆಲ ಹೊತ್ತಲ್ಲಿ ಮೀನುಗಾರಿಕಾ ಹಾಗೂ ಬಂದರು ಸಚಿವ ಮಂಕಾಳು ವೈದ್ಯ ಘಟನಾ ಸ್ಥಳಕ್ಕೆ ಭೇಟಿ ನೀಡಲಿದ್ದಾರೆ ಎಂದು ತಿಳಿದುಬಂದಿದೆ.

## ವಿಜಯೇಂದ್ರಗೆ ಬೆಂಗಾವಲು ವಾಹನ, ಪೊಲೀಸ್ ಭದ್ರತೆ ಕಲ್ಪಿಸಿದ ಸರ್ಕಾರ



ಬೆಂಗಳೂರು: ಬಿಜೆಪಿ ರಾಜ್ಯಾಧ್ಯಕ್ಷರಾಗಿ ಆಯ್ಕೆಯಾಗಿರುವ ಶಿಕಾರಿಪುರದ ಶಾಸಕ, ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಅವರ ಪುತ್ರ ವಿಜಯೇಂದ್ರಗೆ ರಾಜ್ಯ ಸರ್ಕಾರ ಬೆಂಗಾವಲು ವಾಹನ ಮತ್ತು ಪೊಲೀಸ್ ಭದ್ರತೆ ಒದಗಿಸಿದೆ.

ಭಾನುವಾರದಿಂದ ಮೂವರು ಪೊಲೀಸ್ ಸಿಬ್ಬಂದಿ ಇರುವ ಬೆಂಗಾವಲು ವಾಹನ ಸೌಲಭ್ಯವನ್ನು ಸರ್ಕಾರ ಕಲ್ಪಿಸಿದೆ. ಪದಗ್ರಹಣ ಬಳಿಕ ಅಧಿಕೃತವಾಗಿ ಸಿಬ್ಬಂದಿ ಸಹಿತ ಬೆಂಗಾವಲು ವಾಹನವನ್ನು ಸರ್ಕಾರ ಒದಗಿಸಲಿದೆ. ಬುಧವಾರ ಪಕ್ಷದ ಕಚೇರಿಯಲ್ಲಿ ವಿಜಯೇಂದ್ರ ಪದಗ್ರಹಣ ಕಾರ್ಯಕ್ರಮ ನಡೆಯಲಿದೆ.

ಅಧ್ಯಕ್ಷರಾಗಿ ಆಯ್ಕೆಯಾದ ಬಳಿಕ ಸ್ವಾಮೀಜಿಗಳ ಆಶೀರ್ವಾದ ಪಡೆದಿದ್ದ ವಿಜಯೇಂದ್ರ ಇಂದು ಬೆಳಗ್ಗೆ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಬಳಿ ಹೋಗಿ ಆಶೀರ್ವಾದ ಪಡೆದರು. ನಂತರ ಮಾಜಿ ಪ್ರಧಾನಿ ಹೆಚ್‌ಡಿ ದೇವೇಗೌಡರ ನಿವಾಸಕ್ಕೆ ತೆರಳಿ ಆಶೀರ್ವಾದ ಪಡೆದರು.

## ಮಂಗಳೂರಿನಲ್ಲಿ ಡ್ರಗ್ಸ್ ಪೆಡ್ಲರ್ ಬಂಧನ, ಎಂಡಿಎಂಎ ಜಪ್ತಿ

ಮಂಗಳೂರು: ನಗರದಲ್ಲಿ ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳಿಗೆ ಮಾದಕ ವಸ್ತು ಮಾರಾಟ ಮಾಡುತ್ತಿದ್ದ ಆರೋಪದ ಮೇಲೆ 32 ವರ್ಷದ ಡ್ರಗ್ಸ್ ಪೆಡ್ಲರ್ ನನ್ನು ಕೇಂದ್ರ ಅಪರಾಧ ವಿಭಾಗದ ಪೊಲೀಸರು ಬಂಧಿಸಿದ್ದಾರೆ ಎಂದು ಪೊಲೀಸ್ ಮೂಲಗಳು ಸೋಮವಾರ ತಿಳಿಸಿವೆ.

ಬಂಧಿತ ವ್ಯಕ್ತಿಯನ್ನು ಹರೇಕಳ ಮೂಲದ ಬಜಾಲ್ ನಿವಾಸಿ ಹಸೈನಾರ್ ಅಲಿಯಾಸ್ ಅಚ್ಚು ಎಂದು ಗುರುತಿಸಲಾಗಿದೆ.

ಪಡೀಲ್ ನಲ್ಲಿ ಮಾದಕ ವಸ್ತು ಮಾರಾಟ ಮಾಡಲಾಗುತ್ತಿದ್ದ ಅಚ್ಚುನನ್ನು ಖಚಿತ ಮಾಹಿತಿ ಮೇರೆಗೆ ಸಿಸಿಬಿ ಪೊಲೀಸರು ದಾಳಿ ನಡೆಸಿ ಬಂಧಿಸಿದ್ದಾರೆ.

ಆತನಿಂದ 60,000 ರೂಪಾಯಿ ಮೌಲ್ಯದ 12 ಗ್ರಾಂ ತೂಕದ ಎಂಡಿಎಂಎ, ಒಂದು ಮೊಬೈಲ್ ಫೋನ್



ಮತ್ತು ತೂಕ ಮಾಡುವ ಡಿಜಿಟಲ್ ಯಂತ್ರವನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಈ ಸಂಬಂಧ ಕಂಕನಾಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಬಂಧಿತ ಆರೋಪಿಯು ಇನ್ನೂ ಮೂರು ಕೊಲೆ ಯತ್ನ ಮತ್ತು ಹಲ್ಲೆ ಪ್ರಕರಣಗಳನ್ನು ಎದುರಿಸುತ್ತಿದ್ದಾನೆ ಎಂದು ಮೂಲಗಳು ತಿಳಿಸಿವೆ.

## ಕೈ ಕಾರ್ಯಕರ್ತೆಯರ ವಿಡಿಯೋ ತಿರುಚಿದ ದುಷ್ಕರ್ಮಿಗಳು; ದೂರು ದಾಖಲು

ಬೆಳಗಾವಿ: ಇಲ್ಲಿನ ಕಾಂಗ್ರೆಸ್ ಕಾರ್ಯಕರ್ತೆಯರ ಸಂಭ್ರಮಾಚರಣೆ ಮತ್ತು ನೃತ್ಯದ ವಿಡಿಯೋವನ್ನು ತಿರುಚಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಎಫ್‌ಐಆರ್ ದಾಖಲು ಮಾಡಿದ್ದಾರೆ.

ಕೆಪಿಸಿಸಿ ಸದಸ್ಯೆ ಆಯಿಷಾ ಸನದಿ ನಗರದ ಸಿಇಎನ್ ಪೊಲೀಸ್ ಠಾಣೆಗೆ ದೂರು ನೀಡಿದ್ದು, ಈ ಸಂಬಂಧ ಮಾಹಿತಿ ಮತ್ತು ತಂತ್ರಜ್ಞಾನ ಕಾಯ್ದೆಯ ಸೆಕ್ಷನ್ 67 (ಎ) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಪೊಲೀಸರ ಪ್ರಕಾರ, ಐದು ತಿಂಗಳ ಹಿಂದೆ ಅಷ್ಟೇ ಉಚಿತ ಬಸ್ ಪ್ರಯಾಣಕ್ಕೆ ಅನುಕೂಲವಾಗುವ ಶಕ್ತಿ ಯೋಜನೆಯ ಉದ್ಘಾಟನೆ ಸಮಯದಲ್ಲಿ ಸನದಿ ಮತ್ತು ಇತರ ಕಾಂಗ್ರೆಸ್ ಕಾರ್ಯಕರ್ತೆಯರು ಸರ್ಕಾರಿ ಸ್ವಾಮ್ಯದ ಬಸ್‌ನಲ್ಲಿ ನೃತ್ಯ ಮಾಡಿದ್ದರು.

ಆಗ ವಿಡಿಯೋ ವೈರಲ್ ಆಗಿತ್ತು. ದುಷ್ಕರ್ಮಿಗಳು ಈ




ವಿಡಿಯೋವನ್ನು ಅಶ್ಲೀಲ ಅರ್ಥ ನೀಡುವ ರೀತಿಯಲ್ಲಿ ಕನ್ನಡ ಸಿನಿಮಾವೊಂದರ ದೃಶ್ಯವನ್ನು ಸೇರಿಸಿ ಮಾರ್ಫಿಂಗ್ ಮಾಡಿದ್ದಾರೆ.

ಕಾಂಗ್ರೆಸ್ ಕಾರ್ಯಕರ್ತೆಯರನ್ನು ಕೆಟ್ಟದಾಗಿ ಚಿತ್ರಿಸಿದ್ದಾರೆ. ಪೊಲೀಸರು ಈ ಪ್ರಕರಣ ಗಂಭೀರವಾಗಿ ಪರಿಗಣಿಸಿಲ್ಲ ಎಂದು ಕಾರ್ಯಕರ್ತೆಯರು ಆರೋಪಿಸಿದ್ದಾರೆ.

## ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿಗೆ ತಿರುಗೇಟು ನೀಡಿದ ಸಿಎಂ ಸಿದ್ದರಾಮಯ್ಯ

ಬೆಂಗಳೂರು: ರಾಜ್ಯ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳ ವಿರುದ್ಧ ಕಿಡಿ ಕಾರಿದ್ದ ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಹೇಳಿಕೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ತಿರುಗೇಟು ನೀಡಿದ್ದಾರೆ. ಮಾಜಿ ಮುಖ್ಯಮಂತ್ರಿಗಳಾದ ಹೆಚ್.ಡಿ. ಕುಮಾರಸ್ವಾಮಿಯವರೇ, ನಿಮಗೆ ಯಾಕೆ ರಾಜ್ಯದ ಬಡವರ ಮೇಲೆ ಈ ಪರಿಯ ದ್ವೇಷ? ನಮ್ಮ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದ ದಿನದಿಂದ ಅದರ ವಿರುದ್ಧ ಇಲ್ಲಸಲ್ಲದ ಆರೋಪ ಮಾಡುವುದು ನಿಮ್ಮ ದಿನಚರಿಯಾಗಿ ಬಿಟ್ಟಿದೆ. ಗ್ಯಾರಂಟಿ ಯೋಜನೆಗಳನ್ನು ವಿರೋಧಿಸುವುದೆಂದರೆ ಕೋಟ್ಯಂತರ ಸಂಖ್ಯೆಯಲ್ಲಿರುವ ಬಡ ಫಲಾನುಭವಿಗಳನ್ನು ವಿರೋಧಿಸುವುದೆಂದೇ ಅರ್ಥ. ಯಾಕೆ ಬಡವರ ಹೊಟ್ಟೆಗೆ ಹೊಡೆಯುವ ಕಿಚ್ಚು? ಎಂದು ಪ್ರಶ್ನಿಸಿದ್ದಾರೆ. ರಾಜ್ಯದ ಕೋಟ್ಯಂತರ ಫಲಾನುಭವಿಗಳು ಗ್ಯಾರಂಟಿ ಯೋಜನೆಗಳ ಲಾಭ ಪಡೆದು ಸಂಭ್ರಮಿಸುತ್ತಿದ್ದಾರೆ. ಈ ಸಂಭ್ರಮದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳ ಮತದಾರರೂ ಸೇರಿದ್ದಾರೆ. ಗ್ಯಾರಂಟಿ ಯೋಜನೆಗಳ ಫಲಿತಾಂಶವನ್ನು ತಿಳಿದುಕೊಳ್ಳಬೇಕಾದ ಪ್ರಾಮಾಣಿಕ ಉದ್ದೇಶ ನಿಮಗಿದ್ದರೆ ಬೆಂಗಳೂರಿನಲ್ಲಿ ಕೂತು ಪತ್ರಿಕಾಗೋಷ್ಠಿ ನಡೆಸುವುದಲ್ಲ, ಹಳ್ಳಿಗಳಿಗೆ ಹೋಗಿ ಅಲ್ಲಿರುವ ಫಲಾನುಭವಿಗಳನ್ನು ಮಾತನಾಡಿಸಿ. ಗ್ಯಾರಂಟಿ ಯೋಜನೆಗಳನ್ನು ಬಹಳ ಮುಖ್ಯವಾಗಿ ರಾಜ್ಯದ ಬಡಜನರನ್ನು ಗುರಿಯಾಗಿಸಿಕೊಂಡು ರೂಪಿಸಿರುವಂತಹದ್ದು. ಅದು ಶ್ರೀಮಂತರು ಇಲ್ಲವೇ ಉದ್ಯಮಿಗಳಿಗೆ ನೆರವಾಗುವ ತೆರಿಗೆ ವಿನಾಯಿತಿಯೂ ಅಲ್ಲ, ಅವರ ಸಾಲ ಮನ್ನಾ ಮಾಡುವ ಯೋಜನೆಯೂ ಅಲ್ಲ.



ವಂಚಕ ಉದ್ಯಮಿಗಳಿಗೆ ನೆರವಾಗಲು ಜನರ ತೆರಿಗೆ ಹಣವನ್ನು ದುರ್ಬಳಕೆ ಮಾಡುತ್ತಿರುವ ಕೇಂದ್ರ ಸರ್ಕಾರದ ವಿರುದ್ಧ ಸೊಲ್ಲೆತ್ತಲಾಗದ ಕುಮಾರಸ್ವಾಮಿಯವರು ಮೂರು ಹೊತ್ತು ಗ್ಯಾರಂಟಿ ಯೋಜನೆಗಳ ಚುಂಗು ಹಿಡಿದು ಜಗ್ಗಾಡುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದ್ದಾರೆ.

ಸುಳ್ಳು ಆರೋಪಗಳ ಮೂಲಕ ದಿನನಿತ್ಯ ನನ್ನ ವಿರುದ್ಧ ವಾಗ್ದಾಳಿ ನಡೆಸುತ್ತಿರುವ ಕುಮಾರಸ್ವಾಮಿ ಅವರೇ, ನನ್ನನ್ನು ಟೀಕಿಸುವುದರಿಂದ ನಿಮ್ಮ ಮನಸಿಗೆ ಶಾಂತಿ ಸಿಗುವುದಿದ್ದರೆ ನಿಮ್ಮ ದ್ವೇಷಾಸೂಯೆ ಮುಂದುವರಿಯಲಿ. ಚುನಾವಣಾ ಸೋಲಿನ ನಿಮ್ಮ ನಿರಾಶೆ, ಅದರಿಂದಾಗಿರುವ ಹತಾಶೆಯನ್ನು ನಾನು ಅರ್ಥಮಾಡಿಕೊಳ್ಳಬಲ್ಲೆ. ಆದರೆ ರಾಜ್ಯದ ಬಡವರನ್ನು ಯಾಕೆ ಈ ರೀತಿ ದ್ವೇಷಿಸುತ್ತಿದ್ದೀರಿ. ಬಡವರ ಕಲ್ಯಾಣಕ್ಕಾಗಿಯೇ ರೂಪಿಸಲಾಗಿರುವ ಯೋಜನೆಗಳನ್ನು ಯಾಕೆ ವಿರೋಧಿಸುತ್ತಿದ್ದೀರಿ? ಕಳೆದ ಚುನಾವಣೆಯಲ್ಲಿ ಅವರು ನಿಮ್ಮ ಪಕ್ಷವನ್ನು ತಿರಸ್ಕರಿಸಿದ್ದಕ್ಕಾಗಿ ದ್ವೇಷವೇ?

ಭಾರತೀಯ ಜನತಾ ಪಕ್ಷದ ಹಿಪಾಕ್ರಟಿಕ್ ನಡವಳಿಕೆಯನ್ನು ಇಡೀ ದೇಶ ಕಂಡು ಛೀಮಾರಿ ಹಾಕುತ್ತಿದೆ. ಮೊನ್ನೆ ಮೊನ್ನೆ ವರೆಗೆ ಗ್ಯಾರಂಟಿ ಯೋಜನೆಗಳು ಸೇರಿದಂತೆ ಇಂತಹ ಯೋಜನೆಗಳೆಲ್ಲ ಬಿಟ್ಟಿಭಾಗ್ಯ ಎಂದು ಗೇಲಿ ಮಾಡುತ್ತಿದ್ದ ಬಿಜೆಪಿ ಐದು ರಾಜ್ಯಗಳ ಚುನಾವಣಾ ಪ್ರಣಾಳಿಕೆಯಲ್ಲಿ ಇಂತಹ "ಬಿಟ್ಟಿ ಭಾಗ್ಯ"ಗಳನ್ನೆಲ್ಲ ಸೇರಿಸಿ ಬಿಟ್ಟಿದೆ. ಇವರಿಗೆ ರಾಜ್ಯದ ಗ್ಯಾರಂಟಿ ಯೋಜನೆಗಳನ್ನು ವಿರೋಧಿಸುವ ನೈತಿಕತೆ ಇಲ್ಲ, ಬಿಜೆಪಿ ನಡವಳಿಕೆಯನ್ನು ಪ್ರಶ್ನಿಸುವ ದಮ್ಮು ತಾಕತ್ ಕುಮಾರಸ್ವಾಮಿಯವರಿಗೆ ಇಲ್ಲ ಎಂದು ಕಿಡಿಕಾರಿದ್ದಾರೆ.

## ಪಶ್ಚಿಮ ಬಂಗಾಳ: ಟಿಎಂಸಿ ಮುಖಂಡನಿಗೆ ಗುಂಡಿಕ್ಕಿ ಹತ್ಯೆ, ದಾಳಿಕೋರನನ್ನು ಹೊಡೆದು ಕೊಂದ ಜನ

ಕೋಲ್ಕತಾ: ಪಶ್ಚಿಮ ಬಂಗಾಳದ ದಕ್ಷಿಣ 24 ಪರಗಣ ಜಿಲ್ಲೆಯ ಜಾಯ್‌ನಗರದಲ್ಲಿ ಸೋಮವಾರ ಬೆಳಗ್ಗೆ ಸ್ಥಳೀಯ ತೃಣಮೂಲ ಕಾಂಗ್ರೆಸ್ ಮುಖಂಡನನ್ನು ಗುಂಡಿಕ್ಕಿ ಹತ್ಯೆ ಮಾಡಲಾಗಿದ್ದು, ಆಕ್ರೋಶಗೊಂಡ ಜನರ ಗುಂಪೊಂದು ದಾಳಿಕೋರನನ್ನು ಹಿಡಿದು ಹೊಡೆದು ಕೊಂದಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಜೋಯ್‌ನಗರದ ಬಮುಂಗಾಚಿ ಪ್ರದೇಶದ ಟಿಎಂಸಿ ಅಧ್ಯಕ್ಷ ಸೈಫುದ್ದೀನ್ ಲಸ್ಕರ್ ಅವರನ್ನು



ಕೆಲವು ದುಷ್ಕರ್ಮಿಗಳು ಅವರ ಮನೆಯ ಬಳಿ ಗುಂಡಿಕ್ಕಿ ಕೊಂದಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಸ್ಥಳೀಯರ ಪ್ರಕಾರ, ಲಸ್ಕರ್ ಅವರ ಪತ್ನಿ ಸ್ಥಳೀಯ ಗ್ರಾಮ ಪಂಚಾಯತ್ ಅಧ್ಯಕ್ಷರಾಗಿದ್ದು, ಅವರ ಬೆಂಬಲಿಗರು ದಾಳಿಕೋರರಲ್ಲಿ ಒಬ್ಬನನ್ನು ಹಿಡಿದು ಹೊಡೆದು ಕೊಂದಿದ್ದಾರೆ.

ಲಸ್ಕರ್ ಹತ್ಯೆಯ ಹಿಂದೆ ಕಮ್ಯುನಿಸ್ಟ್ ಪಾರ್ಟಿ ಆಫ್ ಇಂಡಿಯಾ-ಮಾರ್ಕ್ಸ್‌ವಾದಿ ಬೆಂಬಲಿಗರ ಕೈವಾಡವಿದೆ ಎಂದು ಸ್ಥಳೀಯ ಟಿಎಂಸಿ ಮುಖಂಡರು ಆರೋಪಿಸಿದ್ದಾರೆ.

ಆದರೆ, ಸಿಪಿಎಂ ನಾಯಕ ಸುಜನ್ ಚಕ್ರವರ್ತಿ ಅವರು ಈ ಆರೋಪವನ್ನು ತಳ್ಳಿ ಹಾಕಿದ್ದು, ಟಿಎಂಸಿಯ ಆಂತರಿಕ ಕಲಹವೇ ಲಸ್ಕರ್ ಅವರ ಹತ್ಯೆಗೆ ಕಾರಣ.

ಸಿಪಿಎಂ ಅನ್ನು ದೂಷಿಸಿ ಪ್ರಯೋಜನವಿಲ್ಲ. ಪೊಲೀಸರು ಸೂಕ್ತ ತನಿಖೆ ನಡೆಸಿ ಪಿತೂರಿಯನ್ನು ಬಯಲಿಗೆಳೆಯಬೇಕು ಎಂದು ಹೇಳಿದ್ದಾರೆ.

ಟಿಎಂಸಿ ನಾಯಕನ ಹತ್ಯೆಗೆ ಸಂಬಂಧಿಸಿದಂತೆ ಒಬ್ಬನನ್ನು ಬಂಧಿಸಲಾಗಿದೆ. ಪ್ರಕರಣ ದಾಖಲಿಸಿಕೊಂಡು ತನಿಖೆ ಮಾಡಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಹೈದರಾಬಾದ್: ರಾಸಾಯನಿಕ ಗೋದಾಮಿನಲ್ಲಿ ಅಗ್ನಿ ಅವಘಡ, 9 ಮಂದಿ ಸಜೀವ ದಹನ

ಹೈದರಾಬಾದ್(ತೆಲಂಗಾಣ): ಹೈದಾರಾಬಾದ್'ನಲ್ಲಿ ದೀಪಾವಳಿ ಹಬ್ಬದಂದೇ ಭಾರೀ ಅಗ್ನಿ ಅವಘಡ ಸಂಭವಿಸಿದ್ದು, ದುರಂತದಲ್ಲಿ 9 ಮಂದಿ ಸಜೀವ ದಹನಗೊಂಡಿದ್ದಾರೆ.

ನಾಂಪಲ್ಲಿ ಬಜಾರ್ ಘಾಟ್‌ನಲ್ಲಿ ನಾಲ್ಕು ಅಂತಸ್ತಿನ ರಾಸಾಯನಿಕ ಗೋದಾಮಿನಲ್ಲಿ ಭಾರೀ ಬೆಂಕಿ ಕಾಣಿಸಿಕೊಂಡಿದೆ. ಸ್ಥಳದಲ್ಲಿ 16 ಮಂದಿಯನ್ನು ರಕ್ಷಣೆ ಮಾಡಲಾಗಿದ್ದು, ಮೂವರಿಗೆ ಗಂಭೀರವಾಗಿ



ಗಾಯಗೊಂಡಿದ್ದಾರೆಂದು ತಿಳಿದುಬಂದಿದೆ.

'ಕಟ್ಟಡದ ನೆಲಮಹಡಿಯಲ್ಲಿ ಕಾರ್ ರಿಪೇರಿ ಮಾಡಲಾಗುತ್ತಿತ್ತು. ಈ ವೇಳೆ ಅಲ್ಲೇ ಇದ್ದ ರಾಸಾಯನಿಕ ತುಂಬಿದ್ದ ಡ್ರಮ್‌ಗಳಿಗೆ ಬೆಂಕಿ ತಗುಲಿ ಬೆಳಿಗ್ಗೆ 9.30ರ ಸುಮಾರಿಗೆ ಅವಘಡ ಸಂಭವಿಸಿದೆ. ಕೆಲ ಹೊತ್ತಿನಲ್ಲೇ ಉಳಿದ ಮಹಡಿಗಳಿಗೂ ಬೆಂಕಿ ವ್ಯಾಪಿಸಿದೆ' ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಅಗ್ನಿ ಅವಘಡದಲ್ಲಿ ಗೋದಾಮಿನಲ್ಲಿದ್ದ ಕಾರು ಹಾಗೂ ಎರಡು ಸೈಕಲ್ ಸುಟ್ಟು ಕರಕಲಾಗಿವೆ. ಸ್ಥಳದಲ್ಲಿ ಬೆಂಕಿ ನಂದಿಸುವ ಹಾಗೂ ರಕ್ಷಣಾ ಕಾರ್ಯಾಚರಣೆ ಪ್ರಗತಿಯಲ್ಲಿದೆ.

## ಎಂಬಿಬಿಎಸ್ ವಿದ್ಯಾರ್ಥಿನಿ ಆತ್ಮಹತ್ಯೆ



ಮಂಗಳೂರು: ಎಂಬಿಬಿಎಸ್ ವಿದ್ಯಾರ್ಥಿನಿಯೊಬ್ಬಳು ಡೆತ್ ನೋಟ್ ಬರೆದಿಟ್ಟು ಹಾಸ್ಟೇಲ್ ಕಟ್ಟಡದಿಂದ ಜಿಗಿದು ಆತ್ಮಹತ್ಯೆಗೆ ಶರಣಾಗಿರುವ ಘಟನೆ ಮಂಗಳೂರಿನಲ್ಲಿ ನಡೆದಿದೆ.

ಎ.ಜೆ.ಮೆಡಿಕಲ್ ಕಾಲೇಜು ಹಾಸ್ಟೇಲ್ ನಲ್ಲಿ ಈ ಘಟನೆ ನಡೆದಿದೆ. 20 ವರ್ಷದ ಪ್ರಕೃತಿ ಶೆಟ್ಟಿ ಮೃತ ವಿದ್ಯಾರ್ಥಿನಿ. ಇಂದು ಮುಂಜಾನೆ 3 ಗಂಟೆ ಸುಮಾರಿಗೆ ವಿದ್ಯಾರ್ಥಿನಿ ಆತ್ಮಹತ್ಯೆಗೆ ಶರಣಾಗಿದ್ದಾಳೆ ಎನ್ನಲಾಗಿದೆ. ಎಂಬಿಬಿಎಸ್ ಮುಗಿಸಬೇಕು ಎಂದು ಬಹಳ ಆಸೆ ಇತ್ತು. ಆದರೆ ನಾನು ದಪ್ಪ ಇದ್ದೇನೆ. ನನ್ನ ಸೌಂದರ್ಯಕ್ಕೆ ದಪ್ಪ ಇರುವುದೇ ಅಡ್ಡಿಯಾಗಿದೆ. ಸಣ್ಣ ಆಗಲು ಸಾಕಷ್ಟು ಪ್ರಯತ್ನ ಪಟ್ಟೆ ಆದರೂ ಸಾಧ್ಯವಾಗಿಲ್ಲ. ಹಾಗಾಗಿ ಜೀವನದಲ್ಲಿ ಜಿಗುಪ್ಸೆಗೊಂಡು ಆತ್ಮಹತ್ಯೆ ಮಾಡಿಕೊಳ್ಳುತ್ತಿರುವುದಾಗಿ ವಿದ್ಯಾರ್ಥಿನಿ ಡೆತ್ ನೋಟ್ ನಲ್ಲಿ ಉಲ್ಲೇಖಿಸಿದ್ದಾಳೆ. ಹಾಸ್ಟೇಲ್ ನ 6ನೇ ಮಹಡಿಯಿಂದ ಜಿಗಿದು ಪ್ರಕೃತಿ ಶೆಟ್ಟಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಕದ್ರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಅನೀಮಿಯ ಮುಕ್ತ ಶಿವಮೊಗ್ಗ ನಿರ್ಮಾಣಕ್ಕೆ ಕ್ರಮ: ಡಾ॥ ಆರ್.ಸೆಲ್ವಮಣಿ

ಶಿವಮೊಗ್ಗ: ಜಿಲ್ಲೆಯಲ್ಲಿ ಅನೀಮಿಯ ಮುಕ್ತ ಜಿಲ್ಲೆಯನ್ನಾಗಿ ರೂಪಿಸುವಲ್ಲಿ ಆರೋಗ್ಯ ಇಲಾಖೆಯ ಅಧಿಕಾರಿಗಳೊಂದಿಗೆ ಸಾರ್ವಜನಿಕರೂ ಸಹಕರಿಸುವಂತೆ ಜಿಲ್ಲಾಧಿಕಾರಿ ಡಾ॥ ಆರ್.ಸೆಲ್ವಮಣಿ ಅವರು ಹೇಳಿದರು.

ಅವರು ತಮ್ಮ ಕಚೇರಿ ಸಭಾಂಗಣದಲ್ಲಿ ಆರೋಗ್ಯ ಇಲಾಖೆಯು ಅನೀಮಿಯ(ರಕ್ತಹೀನತೆ) ಮುಕ್ತ ಪೌಷ್ಠಿಕ ಜಿಲ್ಲೆ, ರಾಷ್ಟ್ರೀಯ ನವಜಾತ ಶಿಶು ಸಪ್ತಾಹ ಆಚರಣೆ ಹಾಗೂ ಅತಿಸಾರ ಬೇದಿ ನಿಯಂತ್ರಣ ಪಾಕ್ಷಿಕದ ಅಂಗವಾಗಿ ಏರ್ಪಡಿಸಲಾಗಿದ್ದ ಸಮಾಲೋಚನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು. ಜಿಲ್ಲೆಯಲ್ಲಿ ಮಹಿಳೆ ಮತ್ತು ಮಕ್ಕಳಿಗೆ ಸಕಾಲದಲ್ಲಿ ಅನೀಮಿಯ ತಪಾಸಣೆ ನಡೆಸಿ, ರಕ್ತಹೀನತೆಯಿಂದ ಬಳಲುತ್ತಿರುವವರನ್ನು ಗುರುತಿಸಿ, ಅದರ ವಿಧಗಳಲ್ಲಿ ಸಾಮಾನ್ಯದಿಂದ ಗಂಭೀರ ಸ್ವರೂಪದ ಕಾಯಿಲೆಗಳಿಗೆ ಜಿಲ್ಲೆಯ ಯಾವುದೇ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಉಚಿತವಾಗಿ ಚಿಕಿತ್ಸೆ ನೀಡಲಾಗುವುದು ಎಂದ ಅವರು ಈ ದಿಸೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು. ನಿರ್ಲಕ್ಷಿಸಿದಲ್ಲಿ ಫಲಿತಾಂಶ ನಿರಾಶಾದಾಯಕವಾಗಿರಲಿದೆ ಎಂದವರು ನುಡಿದರು.

ಗರ್ಭಿಣಿ ಸ್ತ್ರೀಯರು, ಹದಿಹರೆಯದ ಗಂಡು/ಹೆಣ್ಣು ಮಕ್ಕಳು, ಎಲ್ಲಾ ಪುರುಷ/ಮಹಿಳೆಯರು, ಮಕ್ಕಳು, ಮತ್ತು ವಿಶೇಷವಾಗಿ ಅಪೌಷ್ಠಿಕ ಮಕ್ಕಳು ತಮ್ಮ ಆರೋಗ್ಯವನ್ನು ತಪಾಸಿಸಿಕೊಂಡು ಸಕಾಲಿಕ ಚಿಕಿತ್ಸೆ ಪಡೆದು, ಉತ್ತಮ ಆರೋಗ್ಯ ಹೊಂದುವಂತೆ ಸೂಚಿಸಿದ ಅವರು, ರಕ್ತಹೀನತೆಯನ್ನು ನಿವಾರಿಸಲು ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಗರ್ಭಿಣಿ ಸ್ತ್ರೀಯರಿಗೆ ಪ್ರತಿ ತಿಂಗಳು ರಕ್ತಪರೀಕ್ಷೆ ನಡೆಸಿ, ಸೂಕ್ತ ಚಿಕಿತ್ಸೆ ಮತ್ತು ಅಗತ್ಯವಿದ್ದಲ್ಲಿ ರಕ್ತ ಒದಗಿಸಲು ಕ್ರಮ ವಹಿಸಲಾಗುವುದು ಎಂದರು.

ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಐರನ್ಸಿರಪ್, ಫೋಲಿಕ್ ಆಸಿಡ್ ಮತ್ತು



ಆಲ್ಬೆಂಡೋಜೋಲ್ ಮಾತ್ರೆಗಳನ್ನು ವಿತರಿಸಲಾಗುವುದು. ಇದು ಮಕ್ಕಳ ಉತ್ತಮ ಆರೋಗ್ಯ ಮತ್ತು ಬೌದ್ಧಿಕ ವಿಕಾಸಕ್ಕೆ ಅನುಕೂಲವಾಗಲಿದೆ. ಡಾ॥ ನಾಗರಾಜ್ನಾಯ್ಕ್, ಆರ್ಸಿ.ಹೆಚ್. ಅಧಿಕಾರಿಗಳು.

ಸಂತಾನೋತ್ಪತ್ತಿ ವಯಸ್ಸಿನ ಮಹಿಳೆಯರಿಗೆ ಸೂಕ್ತ ಪರೀಕ್ಷೆಯೊಂದಿಗೆ ಚಿಕಿತ್ಸೆ ನೀಡಿ, ಪೌಷ್ಠಿಕತೆಯ ಅರಿವು ಮೂಡಿಸಲಾಗುವುದು.

ಪ್ರಥಮ ಮತ್ತು ದ್ವಿತೀಯ ಪಿ.ಯು.ಸಿ. ವಿದ್ಯಾರ್ಥಿಗಳಿಗೆ ಮತ್ತು ಪ್ರೌಢಶಾಲಾ ಮತ್ತು ಅಂಗನವಾಡಿಗಳ ಅಡಿಯಲ್ಲಿ ಶಾಲೆಗಳಿಂದ ಹೊರಗುಳಿದ ವಿದ್ಯಾರ್ಥಿಗಳಿಗೆ ರಕ್ತಪರೀಕ್ಷೆ ನಡೆಸಿ, ಅಗತ್ಯ ಔಷಧಗಳನ್ನು, ಜಂತುಹುಳು ನಿವಾರಣೆ ಮಾತ್ರೆಗಳನ್ನು ವಿತರಿಸಲಾಗುವುದು ಎಂದರು.

ಅಲ್ಲದೇ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು, ಆರೋಗ್ಯ ಇಲಾಖೆಯ ಅಧಿಕಾರಿ–ಸಿಬ್ಬಂಧಿಗಳು ಮನೆ ಭೇಟಿ ಸಂದರ್ಭದಲ್ಲಿ ಹಾಗೂ ಆರೋಗ್ಯ ಕಾರ್ಯಕ್ರಮಗಳಲ್ಲಿ ಪೌಷ್ಠಿಕ ಆಹಾರದ ಬಗ್ಗೆ ಅರಿವು ಜಾಗೃತಿ ಮೂಡಿಸುವುದು, ವೈಯಕ್ತಿಕ ಸ್ವಚ್ಛತೆ, ನೈರ್ಮಲ್ಯ, ಕೈತೊಳೆಯುವ ವಿಧಾನದ ಬಗ್ಗೆ ಹೆಚ್ಚು ಆರೋಗ್ಯ ಶಿಕ್ಷಣ ನೀಡುವಂತೆ ಸೂಚಿಸಲಾಗಿದೆ ಎಂದ ಅವರು ಜಿಲ್ಲೆಯ ಎಲ್ಲಾ ಶಾಲೆಗಳಲ್ಲಿಯೂ ಕೈ ತೊಳೆಯುವ ವಿಧಾನವನ್ನು ತಿಳಿಸುವುದರ ಜೊತೆಗೆ ವಿದ್ಯಾರ್ಥಿಗಳು ನಿರಂತರ ಅನುಸರಿಸುವಂತೆ ಕ್ರಮ ಕೈಗೊಳ್ಳಲು ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ ಸೂಚಿಸಲಾಗಿದೆ ಎಂದರು.

ಜಿಲ್ಲೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಕೈಗೊಳ್ಳಲಾಗುವ ಆರೋಗ್ಯ ಸಂಬಂಧಿ ಕಾರ್ಯಕ್ರಮಗಳು, ಯೋಜನೆಗಳು, ಅರಿವು ಕಾರ್ಯಕ್ರಮಗಳ ಯಶಸ್ವಿ ಅನುಷ್ಠಾನಗೊಳಿಸಲು ಆರೋಗ್ಯ ಇಲಾಖಾ ಸಿಬ್ಬಂಧಿಗಳಿಗೆ ಈಗಾಗಲೇ ತರಬೇತಿಗಳನ್ನು ನೀಡಿ ಸಜ್ಜುಗೊಳಿಸಲಾಗಿದೆ ಎಂದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ॥ ರಾಜೇಶ್ ಸುರಗೀಹಳ್ಳೀ, ಆರ್ಸಿ.ಹೆಚ್. ಅಧಿಕಾರಿ ಡಾ॥ ನಾಗರಾಜನಾಯ್ಕ್, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸಿ.ಆರ್.ಪರಮೇಶ್ವರಪ್ಪ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿ–ಸಿಬ್ಬಂಧಿಗಳು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಮಕ್ಕಳಿಗೆ ಕೈತೊಳೆಯುವ ಕ,ಮದ ಬಿತ್ತಿಪತ್ರವನ್ನು ಜಿಲ್ಲಾಧಿಕಾರಿಗಳು ಬಿಡುಗಡೆಗೊಳಿಸಿದರು.

## ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ಬಂದರೆ ಛತ್ತೀಸ್‌ಗಢದಲ್ಲೂ ಗೃಹ ಲಕ್ಷ್ಮಿ ಯೋಜನೆ ಜಾರಿ: ಪ್ರಿಯಾಂಕಾ ಗಾಂಧಿ

ನವದೆಹಲಿ: ಛತ್ತೀಸ್‌ಗಢ ವಿಧಾನಸಭೆ ಚುನಾವಣೆಯಲ್ಲಿ ಶತಾಯಗತಾಯ ಮತ್ತೊಂದು ಅವಧಿಗೆ ಅಧಿಕಾರಕ್ಕೆ ಬರಬೇಕೆಂದು ಪಣ ತೊಟ್ಟಿರುವ ಕಾಂಗ್ರೆಸ್, ಮತದಾರರಿಗೆ ಹಲವು ಭರವಸೆಗಳನ್ನು ನೀಡುತ್ತಿದೆ.

ಎರಡನೇ ಹಂತದ ಮತದಾನಕ್ಕೆ ಕೇವಲ ನಾಲ್ಕು ದಿನಗಳು ಬಾಕಿಯಿದ್ದು, ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ ಅವರು ರಾಜ್ಯದಲ್ಲಿ ಪಕ್ಷ ಮತ್ತೆ ಅಧಿಕಾರಕ್ಕೆ ಬಂದರೆ ಕರ್ನಾಟಕದಂತೆ ಛತ್ತೀಸ್ ಗಢದಲ್ಲೂ 'ಗೃಹ ಲಕ್ಷ್ಮಿ ಯೋಜನೆ'ಯನ್ನು ಜಾರಿಗೆ ತರಲಾಗುವುದು ಎಂದು ಸೋಮವಾರ ಘೋಷಿಸಿದ್ದಾರೆ.

ಈ ಕುರಿತು ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ



ಗಾಂಧಿ, "'ಗೃಹ ಲಕ್ಷ್ಮಿ ಯೋಜನೆ' ಅನ್ನು ಛತ್ತೀಸ್‌ಗಢದಲ್ಲಿಯೂ ಜಾರಿಗೆ ತರಲಾಗುವುದು. ಈ ಯೋಜನೆ ಅಡಿ ವರ್ಷಕ್ಕೆ 15,000 ರೂ. ಗಳನ್ನು ಮಹಿಳೆಯರ ಖಾತೆಗಳಿಗೆ ಜಮೆ ಮಾಡಲಾಗುವುದು. ಇದರೊಂದಿಗೆ ಪ್ರತಿ ಎಲ್‌ಪಿಜಿ ಸಿಲಿಂಡರ್ 500 ರೂ. ಸಬ್ಸಿಡಿ ಇರುತ್ತದೆ ಎಂದು ಭರವಸೆ ನೀಡಿದ್ದಾರೆ.

ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ಬಂದರೆ ಸ್ವ–ಸಹಾಯ ಗುಂಪುಗಳು ಮತ್ತು ಸಕ್ಷಮ್ ಯೋಜನೆಗಳ ಸಾಲಗಳನ್ನು ಮನ್ನಾ ಮಾಡಲಾಗುವುದು. ಛತ್ತೀಸ್‌ಗಢದ ಕಾಂಗ್ರೆಸ್ ಸರ್ಕಾರ, ರೈತರು, ಕಾರ್ಮಿಕರು, ಮಹಿಳೆಯರು, ಆದಿವಾಸಿಗಳು, ದಲಿತರು ಮತ್ತು ಬಡವರ ಸಮೃದ್ಧಿಯ ಮಾದರಿಯನ್ನು ಪ್ರಸ್ತುತಪಡಿಸಿದೆ ಎಂದು ಅವರು ಹೇಳಿದ್ದಾರೆ.

ಈಗಾಗಲೇ ಕರ್ನಾಟಕದಲ್ಲಿ ಗೃಹ ಲಕ್ಷ್ಮಿ ಯೋಜನೆ ಜಾರಿಯಲ್ಲಿದ್ದು, ಪ್ರತಿ ತಿಂಗಳೂ 2 ಸಾವಿರ ರೂ. ಹಣವನ್ನು ಮನೆ ಯಜಮಾನಿಯ ಖಾತೆಗೆ ಹಾಕಲಾಗುತ್ತಿದೆ. ಇದೇ ಮಾದರಿಯ ಯೋಜನೆಯನ್ನು ಛತ್ತೀಸ್‌ಗಢದಲ್ಲೂ ಕಾಂಗ್ರೆಸ್ ಪಕ್ಷ ಘೋಷಿಸಿದೆ.

## ಸಾರ್ವಜನಿಕ ಸುರಕ್ಷತೆಗಾಗಿ ತೆರೆದ ಮೈದಾನದಲ್ಲಿ ಪಟಾಕಿ ವ್ಯಾಪಾರ: ಮಹಾನಗರ ಪಾಲಿಕೆ

ಮಂಗಳೂರು: ಸರಕಾರದ ಮತ್ತು ನ್ಯಾಯಲಯದ ನಿರ್ದೇಶನದಂತೆ ಸುಡುಮದ್ದು ಮಾರಾಟದ ಸಮಯದಲ್ಲಿ ಆಗುತ್ತಿರುವ ಅವಘಡಗಳನ್ನು ಗಮನಿಸಿ ಪಾಲಿಕೆ ತೆರೆದ ಮೈದಾನ ಇರುವ ಜಾಗಗಳಲ್ಲಿ ಮಾತ್ರ ಸುಡುಮದ್ದು ವ್ಯಾಪಾರ ಮಾಡಲು ಸೂಚಿಸಲಾಗಿದೆ.

ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯೊಳಗೆ ನಿಗದಿಗೊಳಿಸಿದ 1.ನೆಹರೂ ಮೈದಾನ, 2.ಬೋಂದೆಲ್ ಕ್ರಿಕೆಟ್ ಆಟದ ಮೈದಾನ, 3.ಪಚ್ಚನಾಡಿ ಬಳಿಯ ಖಾಲಿ ಜಾಗ, 4.ಎ.ಪಿ.ಎಂ.ಸಿ, ಬೈಕಂಪಾಡಿ ಪ್ರಾಂಗಣ, ಈ ಸ್ಥಳಗಳಲ್ಲಿ ಮಾತ್ರ ಹಸಿರು ಪಟಾಕಿಗಳನ್ನು ಖರೀದಿಸಬೇಕು. ಹಸಿರು ಪಟಾಕಿಯನ್ನೇ ಖರೀದಿಸಿ ಪ್ರಾಣಿ ಪಕ್ಷಿಗಳಿಗೆ ಹಾನಿಯಾಗದ ರೀತಿಯಲ್ಲಿ ದೀಪಾವಳಿ ಹಬ್ಬವನ್ನು ಆಚರಿಸೋಣ ಎಂದು ಮಂಗಳೂರು ಮಹಾನಗರ ಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

ಮಂಗಳೂರು: ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ದಕ್ಷಿಣ ಕನ್ನಡ ಜಿಲ್ಲೆಯ ಉಸ್ತುವಾರಿ ಸಚಿವರಾದ ದಿನೇಶ್ ಗುಂಡೂರಾವ್ ಅವರು ನವೆಂಬರ್ 16 ರಿಂದ 18ರ ವರೆಗೆ ಜಿಲ್ಲೆಯ ಪ್ರವಾಸ ಕೈಗೊಂಡಿದ್ದಾರೆ.

ವಿವರ:

ನವೆಂಬರ್ 16ರ ಗುರುವಾರ ರಾತ್ರಿ 9.25ಕ್ಕೆ ಮಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸುವರು. ಅಲ್ಲಿಂದ ರಾತ್ರಿ 11 ಗಂಟೆಗೆ ಸುಳ್ಯಕ್ಕೆ ತೆರಳಿ ಅರಣ್ಯ ಇಲಾಖೆ ವಸತಿ ಗೃಹದಲ್ಲಿ ವಾಸ್ತವ್ಯ ಮಾಡುವರು.

ನವೆಂಬರ್ 17ರ ಶುಕ್ರವಾರ ಬೆಳಿಗ್ಗೆ 10.30ಕ್ಕೆ ಸುಳ್ಯ ತಾಲೂಕಿನ ಕುಡಿಯುವ ನೀರಿನ ಯೋಜನೆಗೆ ಶಂಕು ಸ್ಥಾಪನೆ ಮಾಡುವರು, 11.35ಕ್ಕೆ ವೆಂಟೆಡ್ ಡ್ಯಾಮ್ ವೀಕ್ಷಣೆ ಮಾಡುವರು. ಮಧ್ಯಾಹ್ನ 12.30ಕ್ಕೆ ಬಾಳಲಿ ಆಶ್ರಮ ಶಾಲೆಯ ಹಾಸ್ಟೆಲ್ ಕಟ್ಟಡ ಉದ್ಘಾಟನೆ ಕಾರ್ಯಕ್ರಮ, ಮಧ್ಯಾಹ್ನ 1 ಗಂಟೆಗೆ ಸುಳ್ಯ ತಾಲೂಕು ಆಸ್ಪತ್ರೆಗೆ ಭೇಟಿ, ಅಪರಾಹ್ನ 3 ಗಂಟೆಗೆ ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಸಂಜೆ 6 ಗಂಟೆಗೆ ಚೆನ್ನಕೇಶವ ದೇವಸ್ಥಾನದ ಸಮೀಪವಿರುವ ಪ್ರಭು ಮೈದಾನದಲ್ಲಿ ನಡೆಯುವ ರಾಷ್ಟ್ರೀಯ ಮಟ್ಟದ 'ಎ'ಗ್ರೇಡ್ ಹೊನಲು ಬೆಳಕಿನ ಮ್ಯಾಟ್ ಕಬಡ್ಡಿ ಪಂದ್ಯಾಟ ಉದ್ಘಾಟನಾ ಸಮಾರಂಭ, ರಾತ್ರಿ 8.30ಕ್ಕೆ ಬಜ್ಪೆ ಲೆಜೆನ್ಸ್ ಕ್ರಿಕೆಟ್ ಪಂದ್ಯಾವಳಿ ಉದ್ಘಾಟನೆ, 10.30ಕ್ಕೆ ಕದ್ರಿಯ ಸರಕಾರಿ ಅತಿಥಿ ಗೃಹದಲ್ಲಿ ವಾಸ್ತವ್ಯ ಮಾಡುವರು.

ನವೆಂಬರ್ 18ರ ಶನಿವಾರ ಬೆಳಿಗ್ಗೆ 9.15ಕ್ಕೆ ವೆನ್ಲಾಕ್ ಜಿಲ್ಲಾ ಆಸ್ಪತ್ರೆಯ ವಿವಿಧ ಅಭಿವೃದ್ಧಿ ಕಾಮಗಾರಿಗಳ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಭಾಗವಹಿಸುವರು, 10.30ಕ್ಕೆ ಉರ್ವ ಕ್ರಿಕೆಟ್ ಮೈದಾನದಲ್ಲಿ ನಡೆಯುವ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ಹಾಗೂ ಸಹಕಾರ ಇಲಾಖೆಯ ಸಹಯೋಗದೊಂದಿಗೆ ಹಮ್ಮಿಕೊಂಡಿರುವ 70ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮದಲ್ಲಿ ಭಾಗಿಯಾಗುವರು. ಮಧ್ಯಾಹ್ನ 12 ಗಂಟೆಗೆ ಪಿಲಿಕುಳ ನಿಸರ್ಗಧಾಮಕ್ಕೆ ಭೇಟಿ ನೀಡುವರು ಮತ್ತು ವನ್ಯ ಪ್ರಾಣಿಗಳ ಆವರಣಗಳ ಉದ್ಘಾಟನೆ ಮಾಡುವರು. ಸಂಜೆ 6.40ಕ್ಕೆ ಮಂಗಳೂರಿನಿಂದ ಬೆಂಗಳೂರಿಗೆ ತೆರಳುವರು ಎಂದು ಸಚಿವರ ಆಪ್ತ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೋಂಸ್ಟೇ ಉದ್ಯೋಗಿ ಮೇಲೆ ಸಾಮೂಹಿಕ ಅತ್ಯಾಚಾರ; 5 ಮಂದಿ ಬಂಧನ

ಆಗ್ರಾ(ಉತ್ತರಪ್ರದೇಶ): ಇಡೀ ದೇಶ ದೀಪಾವಳಿಯನ್ನು ಆಚರಿಸುತ್ತಿತ್ತು. ಆಗ್ರಾದಲ್ಲಿ ಐವರು ಸೇರಿ ಮಹಿಳೆಯೊಬ್ಬರ ಮಾನ ದೋಚುತ್ತಿದ್ದರು. ಆಗ್ರಾದ ಹೋಂ ಸ್ಟೇಯಲ್ಲಿ ಮಹಿಳಾ ಉದ್ಯೋಗಿಯೊಬ್ಬಳ ಮೇಲೆ ಸಾಮೂಹಿಕ ಅತ್ಯಾಚಾರ ನಡೆದಿದೆ.

ಈ ವೇಳೆ ಯುವತಿ ಪ್ರತಿಭಟಿಸಿದಾಗ ಆಕೆಗೆ ಥಳಿಸಿದ್ದಾರೆ. ಮಹಿಳೆಯ ಕಿರುಚಾಟ ಕೇಳಿ ಅಕ್ಕಪಕ್ಕದಲ್ಲಿದ್ದವರು ಪೊಲೀಸರಿಗೆ ಕರೆ ಮಾಡಿದ್ದಾರೆ. ಪೊಲೀಸರು ಸ್ಥಳಕ್ಕಾಗಮಿಸಿದಾಗ ಆಕೆಯ ಸ್ಥಿತಿ ಶೋಚನೀಯವಾಗಿತ್ತು. ಪೊಲೀಸರನ್ನು ಕಂಡ ಆಕೆ ಅಳಲು



ತೋಡಿಕೊಂಡಳು. ತಾಜ್‌ಗಂಜ್ ಪ್ರದೇಶದಲ್ಲಿ ಈ ಘಟನೆ ನಡೆದಿದೆ.

ಸಂತ್ರಸ್ತೆಯ ದೂರಿನ ಮೇರೆಗೆ ಸಾಮೂಹಿಕ ಅತ್ಯಾಚಾರದ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಳ್ಳಲಾಗಿದೆ ಎಂದು ಡಿಸಿಪಿ ಸೂರಜ್ ಕುಮಾರ್ ರೈ ತಿಳಿಸಿದ್ದಾರೆ.

ಸಂತ್ರಸ್ತೆಗೆ ವೈದ್ಯಕೀಯ ಚಿಕಿತ್ಸೆ ನೀಡಲಾಗುತ್ತಿದೆ. ಎಲ್ಲಾ ಆರೋಪಿಗಳನ್ನು ಬಂಧಿಸಲಾಗಿದೆ. ಹೋಮ್ ಸ್ಟೇಯನ್ನು ಸೀಲ್ ಮಾಡಲಾಗಿದೆ. ಮಹಿಳೆ ಆಗ್ರಾದವಳಲ್ಲ. ಘಟನೆಯ ಬಗ್ಗೆ ಅವರ ಕುಟುಂಬಕ್ಕೆ ಮಾಹಿತಿ ನೀಡಲಾಗಿದೆ ಎಂದರು.

ಹೋಂ ಸ್ಟೇಯಲ್ಲಿ ಐವರು ಯುವಕರು ತನಗೆ ಬಲವಂತವಾಗಿ ಮದ್ಯ ಕುಡಿಸಿ ಅತ್ಯಾಚಾರ ಮಾಡಿದ್ದಾರೆ ಎಂದು ಸಂತ್ರಸ್ತೆ ಪೊಲೀಸರಿಗೆ ತಿಳಿಸಿದ್ದಾಳೆ. ಪ್ರಮುಖ ಆರೋಪಿ ಜಿತೇಂದ್ರ ರಾಥೋಡ್. ಉಳಿದ 4 ಮಂದಿ ಆತನ ಸ್ನೇಹಿತರಾಗಿದ್ದರು. ಅವರ ಹೆಸರು ರವಿ ರಾಥೋಡ್, ಮನೀಶ್ ಕುಮಾರ್, ದೇವ್ ಕಿಶೋರ್. ಒಬ್ಬರ ಹೆಸರು ತಿಳಿದುಬಂದಿಲ್ಲ. ಎಲ್ಲಾ ಆರೋಪಿಗಳು ತಾಜ್‌ಗಂಜ್ ಪೊಲೀಸ್ ಠಾಣೆ ವ್ಯಾಪ್ತಿಯವರಾಗಿದ್ದಾರೆ.

ಮಹಿಳೆ ಎರಡು ವರ್ಷಗಳಿಂದ ಹೋಂ ಸ್ಟೇಯಲ್ಲಿ ಕೆಲಸ ಮಾಡುತ್ತಿದ್ದಳು. ಶನಿವಾರ ತಡರಾತ್ರಿ ಅವರು ಹೋಂ ಸ್ಟೇಯಲ್ಲಿದ್ದರು. ಹೋಮ್ ಸ್ಟೇ ಇರುವ ಕಟ್ಟಡದ ಮಾಲೀಕರು ಬೇರೊಬ್ಬರು, ವ್ಯಕ್ತಿಯೊಬ್ಬರು ಬಾಡಿಗೆಗೆ ಹೋಂ ಸ್ಟೇ ನಡೆಸುತ್ತಿದ್ದಾರೆ ಎಂದು ಪೊಲೀಸ್ ತನಿಖೆಯಿಂದ ತಿಳಿದುಬಂದಿದೆ. ನನಗೆ ಇಬ್ಬರು ಚಿಕ್ಕ ಮಕ್ಕಳಿದ್ದಾರೆ ಎಂದು ಅಲವತ್ತುಕೊಂಡರು. ಅವರು ನನ್ನನ್ನು ಬಿಟ್ಟಿಲ್ಲ ಎಂದು ಸಂತ್ರಸ್ತೆ ಹೇಳಿದ್ದಾರೆ.

## ಆರ್ ಡಿ ಪಾಟೀಲ್ ಕರ್ಮಕಾಂಡ: 402 ಪಿಎಸ್ಐ ನೇಮಕಾತಿಯಲ್ಲೂ ಅಕ್ರಮ ಯತ್ನ



ಕಲಬುರಗಿ: ಕೆಇಎ, ಎಫ್‌ಡಿಎ ಪರೀಕ್ಷೆ ಅಕ್ರಮ ಪ್ರಕರಣಕ್ಕೆ ಸಂಬಂಧಿಸಿದಂತೆ ಕಿಂಗ್‌ಪಿನ್ ಆರ್ಡಿ ಪಾಟೀಲ್ ಮಾಡಿರುವ ಅಕ್ರಮಗಳು ಬೆಳಕಿಗೆ ಬರುತ್ತಲೇ ಇವೆ.

545 ಪಿಎಸ್ಐ ನೇಮಕಾತಿ ಬಳಿಕ 402 ಪಿಎಸ್ಐ ನೇಮಕಾತಿ ಪರೀಕ್ಷೆಯಲ್ಲೂ ಅಕ್ರಮವೆಸಗುವುದಕ್ಕೆ ಸಂಚು ರೂಪಿಸಲಾಗಿತ್ತು. ಕಳೆದ ಫೆಬ್ರವರಿಯಲ್ಲಿ ನಡೆಯಬೇಕಿದ್ದ 402 ಪಿಎಸ್ಐ ನೇಮಕಾತಿ ಪರೀಕ್ಷೆಯಲ್ಲಿ ಅಕ್ರಮ ಎಸಗಲು ಆರ್. ಡಿ. ಪಾಟೀಲ್ ಅಕೌಂಟ್‌ಗೆ ಕೋಟ್ಯಂತರ ಹಣ ಹರಿದುಬಂದಿತ್ತು ಎಂದು ತಿಳಿದುಬಂದಿದೆ.

ಒಂದೊಂದು ಕೋಟಿ ರೂ. ಲೆಕ್ಕಾಚಾರದಲ್ಲಿ ಪಾಟೀಲ್ ಡೀಲ್ ಫಿಕ್ಸ್ ಮಾಡಿ ಮುಂಗಡ ಹಣ ಪಡೆದಿದ್ದ ಎನ್ನಲಾಗಿದೆ. ಫೆಬ್ರವರಿ 15 ರಂದು ಪಾಟೀಲ್ ಅಕೌಂಟ್‌ಗೆ 20 ಲಕ್ಷ ರೂ. ಜಮಾ ಆಗಿದೆ. ಕಲಬುರಗಿ ನಗರದ ಆಕ್ಸಿಸ್ ಬ್ಯಾಂಕ್ ಅಕೌಂಟ್‌ಗೆ ಅಭ್ಯರ್ಥಿ ಹಣ ಹಾಕಿದ್ದಾರೆ. ಆದರೆ 545 ಪಿಎಸ್ಐ ನೇಮಕಾತಿ ಅಕ್ರಮ ಬಯಲಾದ್ದರಿಂದ 402 ಪಿಎಸ್ಐ ನೇಮಕಾತಿ ತಡೆ ಹಿಡಿಯಲಾಗಿತ್ತು ಎಂದು ಪೊಲೀಸ್ ಮೂಲಗಳು ತಿಳಿಸಿವೆ.

## ನ.18 ಮಕ್ಕಳ ಹಕ್ಕುಗಳ ವಿಶೇಷ ಗ್ರಾಮ ಸಭೆ

ಮಂಗಳೂರು: ಮಂಗಳೂರು ತಾಲೂಕಿನ ಬಾಳ ಗ್ರಾಮ ಪಂಚಾಯತ್ ನ 2023–24ನೇ ಸಾಲಿನ ಮಕ್ಕಳ ಹಕ್ಕುಗಳ ವಿಶೇಷ ಗ್ರಾಮ ಸಭೆ ನವೆಂಬರ್ 18ರಂದು ಮಧ್ಯಾಹ್ನ 12 ಗಂಟೆಗೆ ಬಾಳ ಗ್ರಾಮ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಪಂಚಾಯತ್ ಅಭಿವೃದ್ಧಿ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನ.18 ರಂದು ಪಜೀರು ಗ್ರಾಮ ಸಭೆ

ಮಂಗಳೂರು: 2023–24ನೇ ಸಾಲಿನ ಪಜೀರು ಗ್ರಾಮ ಪಂಚಾಯತ್ ನ ಪ್ರಥಮ ಸುತ್ತಿನ ಗ್ರಾಮ ಸಭೆಯನ್ನು ನವೆಂಬರ್ 18ರ ಶನಿವಾರ ಬೆಳಿಗ್ಗೆ 10.30ಕ್ಕೆ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಪಂಚಾಯತ್ ಅಭಿವೃದ್ಧಿ ಅಧಿಕಾರಿ ಪ್ರಕಟಣೆಯನ್ನು ತಿಳಿಸಿದ್ದಾರೆ.

## ವಿಶೇಷ ತಪಾಸಣಾ ಶಿಬಿರ

ಮಂಗಳೂರು: ಜಿಲ್ಲೆಯ ಖಾಸಗಿ ವೈದ್ಯಕೀಯ ಕಾಲೇಜುಗಳ ಸಹಯೋಗದೊಂದಿಗೆ ಎಂಡೋಸಲ್ಫಾನ್ ಸಂತ್ರಸ್ತರು ಹೆಚ್ಚಾಗಿರುವ ಆರೋಗ್ಯ ಕೇಂದ್ರಗಳಲ್ಲಿ ವಿಶೇಷ ತಪಾಸಣಾ ಶಿಬಿರಗಳನ್ನು ಹಮ್ಮಿಕೊಳ್ಳಲಾಗಿದೆ.

ನವೆಂಬರ್ 15 ರಂದು ಬೆಳ್ತಂಗಡಿ ತಾಲೂಕಿನ ಕೊಕ್ಕಡ, ನವೆಂಬರ್ 18ರಂದು ಪುತ್ತೂರು ತಾಲೂಕಿನ ಪಾಣಾಜೆ ಹಾಗೂ ನವೆಂಬರ್ 21ರಂದು ಬೆಳ್ತಂಗಡಿ ತಾಲೂಕಿನ ಕಣಿಯೂರು, ಪುತ್ತೂರು ತಾಲೂಕಿನ ಕೊಯಿಲ, ಉಪ್ಪಿನಂಗಡಿ, ಸುಳ್ಯ ತಾಲೂಕಿನ ಬೆಳ್ಳಾರೆ ಆರೋಗ್ಯ ಕೇಂದ್ರಗಳಲ್ಲಿ ವಿಶೇಷ ತಪಾಸಣಾ ಶಿಬಿರ ಏರ್ಪಡಿಸಲಾಗಿದೆ. ಈ ಶಿಬಿರದ ಸದುಪಯೋಗವನ್ನು ಪಡೆದುಕೊಳ್ಳುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಹಿಳೆಯರಿಗಾಗಿ ವಿಶೇಷ ಗ್ರಾಮ ಸಭೆ

ಮಂಗಳೂರು: ಮಂಗಳೂರು ತಾಲೂಕಿನ ಬಾಳ ಗ್ರಾಮ ಪಂಚಾಯತ್ನ 2023–24ನೇ ಸಾಲಿನ ಮಹಿಳೆಯರಿಗಾಗಿ ವಿಶೇಷ ಗ್ರಾಮ ಸಭೆ ನವೆಂಬರ್ 15ರ ಬುಧವಾರ ಬೆಳಿಗ್ಗೆ 11 ಗಂಟೆಗೆ ಬಾಳ ಗ್ರಾಮ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಪಂಚಾಯತ್ ಅಭಿವೃದ್ಧಿ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಚಿಕ್ಕೋಡಿಯಲ್ಲಿ ಸಾಧಕರ ಸನ್ಮಾನ



ಹುಕ್ಕೇರಿ: ಮಕ್ಕಳ ದಿನಾಚರಣೆ ಹಾಗೂ ಉದ್ದಿಮೆದಾರ ಡಾ.ಅರವಿಂದ ಘಟ್ಟಿ ಅವರ 62ನೇ ಜನ್ಮ ದಿನಾಚರಣೆ ಪ್ರಯುಕ್ತ ಚಿಕ್ಕೋಡಿ ಪಟ್ಟಣದ ಹೊರವಲಯದ ಜೋಡಕುರಳಿ ರಸ್ತೆಯ ಕೆಎಲ್ಇ ಎಂಜಿನಿಯರಿಂಗ್ ಕಾಲೇಜ್ ಬಳಿ ಘಟ್ಟಿ ಫಾರ್ಮಹೌಸ್‌ನಲ್ಲಿ ಇದೇ ತಿಂಗಳು 14 ರಂದು ಸಂಜೆ 5 ಗಂಟೆಗೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಕರ್ನಾಟಕ ರಕ್ಷಣಾ ವೇದಿಕೆ ಮುಖಂಡ ಮಹಾದೇವ ತಳವಾರ, ಚಲವಾದಿ ಮಹಾಸಭಾ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ರಾಶಿಂಗೆ, ರಾಜ್ಯ ಸರ್ಕಾರಿ ನೌಕರರ ಸಂಘದ ಮಾಜಿ ಜಿಲ್ಲಾಧ್ಯಕ್ಷ ಬಸವರಾಜ ರಾಯಗೋಳ, ಪ್ರೊ.ಚಂದ್ರಶೇಖರ ಬನಸೋಡೆ, ಎಚ್.ವೈ.ಕಾಂಬಳೆ, ಲಕ್ಷ್ಮಿ ಗಿರಿಮಲ್ಲ ಸೇರಿದಂತೆ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ 10ಕ್ಕೂ ಹೆಚ್ಚು ಸಾಧಕರನ್ನು ಸನ್ಮಾನಿಸಲಾಗುವುದು. ಇದೇ ವೇಳೆ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನೂ ಪುರಸ್ಕಾರ ನೀಡಿ ಗೌರವಿಸಲಾಗುವುದು.

ಸಂಪಾದನಾ ಮಹಾಸ್ವಾಮೀಜಿ ಸಾನಿಧ್ಯ ವಹಿಸುವರು. ಉಪವಿಭಾಗ ಅಧಿಕಾರಿ, ಡಿಎಸ್ಪಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿರುವರು. ಈ ಕಾರ್ಯಕ್ರಮದಲ್ಲಿ ತಾಲೂಕು ಸೇರಿದಂತೆ ಜಿಲ್ಲೆಯ ವಿವಿಧ ಭಾಗಗಳಿಂದ ಸುಮಾರು 500ಕ್ಕೂ ಹೆಚ್ಚು ಜನ ಭಾಗಿಯಾಗಲಿದ್ದಾರೆ.

ಇನ್ನು ಬರುವ ತಿಂಗಳು ಬೆಳಗಾವಿಯಲ್ಲಿ ನಡೆಯಲಿರುವ ಚಳಿಗಾಲದ ಅಧಿವೇಶನ ವೇಳೆ ಎಐಜಿ ಫೌಂಡೇಶದ ಅಧ್ಯಕ್ಷರ ಚಿಕ್ಕೋಡಿ ಗೃಹ ಕಚೇರಿಯಲ್ಲಿ ಬುದ್ಧ–ಅಂಬೇಡ್ಕರ್ ಪ್ರತಿಮೆಗಳನ್ನು ಪ್ರತಿಷ್ಠಾಪಿಸಲಾಗುವುದು. ಈ ಪ್ರತಿಮೆ ಪ್ರತಿಷ್ಠಾಪನೆಯಲ್ಲಿ ಗೃಹ ಸಚಿವ ಡಾ.ಜಿ.ಪರಮೇಶ್ವರ, ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ. ಮಹದೇವಪ್ಪ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ ಪ್ರಿಯಾಂಕ ಖರ್ಗೆ ಮತ್ತಿತರರು ಭಾಗಿಯಾಗಲಿದ್ದಾರೆ.

## ಸೆಬಿಗೆ ಡಿಆರ್‌ಎಚ್‌ಪಿ ಸಲ್ಲಿಸಿದ ಟಿಬಿಒ ಟೆಕ್

ಹುಬ್ಬಳ್ಳಿ: ಟಿಬಿಒ ಟೆಕ್ ಲಿಮಿಟೆಡ್ ಕಂಪನಿ ಜಾಗತಿಕ ಪ್ರಯಾಣ ಮತ್ತು ಪ್ರವಾಸೋದ್ಯಮ ಉದ್ಯಮದಲ್ಲಿ 100ಕ್ಕಿಂತ ಹೆಚ್ಚಿನ ದೇಶಗಳಲ್ಲಿ ಖರೀದಿದಾರರು ಮತ್ತು ಪೂರೈಕೆದಾರರಿಗೆ ನಾನಾ ಸೇವೆಗಳನ್ನು ಒದಗಿಸುತ್ತಿದೆ. ಪ್ರಮುಖ ಪ್ರಯಾಣ ವಿತರಣಾ ವೇದಿಕೆಯಾಗಿರುವ ಈ ಕಂಪನಿಯು ಸಮಗ್ರ ಪ್ರಯಾಣದ ತಪಶೀಲು ಪಟ್ಟಿ ಅಥವಾ ವ್ಯವಹಾರ ದಾಖಲೆಗಳೊಂದಿಗೆ, ತಾಜಾ ಷೇರುಗಳ ಬಿಡುಗಡೆ ಅಥವಾ ಮಾರಾಟ ಉದ್ದೇಶಕ್ಕಾಗಿ ಸೆಬಿಗೆ "ಷೇರು ಮಾರಾಟ ಕೊಡುಗೆಯ ದಾಖಲೆ"ಗಳನ್ನು ಸಲ್ಲಿಸಿದೆ. 1 ರೂ. ಮುಖಬೆಲೆಯ ಈಕ್ವಿಟಿ ಷೇರಿನ ವಿತರಣೆಯ ಮೂಲಕ ಹಣ ಸಂಗ್ರಹಿಸಲಿದೆ. ಇದಕ್ಕಾಗಿ 400 ಕೋಟಿ ರೂ. ಮೌಲ್ಯದ ತಾಜಾ ಷೇರುಗಳ ಬಿಡುಗಡೆ ಮತ್ತು 15,635,996 ಈಕ್ವಿಟಿ ಷೇರುಗಳ ಮಾರಾಟ ಕೊಡುಗೆಯನ್ನು ಪ್ರಸ್ತಾಪಿಸಿದೆ.

ತಾಜಾ ಷೇರುಗಳ ಮಾರಾಟದಿಂದ ಕ್ರೋಢೀಕರಣವಾಗುವ ನಿಧಿಯನ್ನು ಕಂಪನಿಯ ಬೆಳವಣಿಗೆ ಮತ್ತು ಬಲವರ್ಧನೆಗೆ ಬಳಸಿಕೊಳ್ಳಲಿದೆ. ಇದಕ್ಕಾಗಿ ಕಂಪನಿಯು ಹೊಸ ಖರೀದಿದಾರರು ಮತ್ತು ಪೂರೈಕೆದಾರರನ್ನು ಸೇರಿಸಿಕೊಳ್ಳಲಿದೆ. ಇದಲ್ಲದೆ, ಇದುವರೆಗೆ ಗುರುತಿಸಲಾಗದ ಬೇರೆ ಕಂಪನಿ ಅಥವಾ ವ್ಯವಹಾರಗಳ ಸ್ವಾಧೀನ ಮತ್ತು ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳಿಗೆ ನಿಧಿ ಬಳಸಿ, ಬೆಳವಣಿಗೆ ಕಾಣಲು ಕಂಪನಿ ಉದ್ದೇಶಿಸಿದೆ.

ಕಂಪನಿಯು 2023 ಜೂನ್ 30ರ ವರೆಗೆ ಅನ್ವಯವಾಗುವಂತೆ, 1 ದಶಲಕ್ಷ ಪೂರೈಕೆದಾರರೊಂದಿಗೆ 100ಕ್ಕಿಂತ ಹೆಚ್ಚಿನ ದೇಶಗಳಲ್ಲಿ 147,000 ಖರೀದಿದಾರರನ್ನು ಹೊಂದಿದೆ. ಟಿಬಿಒ 7,500ಕ್ಕಿಂತ ಹೆಚ್ಚಿನ ಸ್ಥಳಗಳಲ್ಲಿ ತನ್ನ ಅಸ್ತಿತ್ವ ಹೊಂದಿದ್ದು, ತನ್ನ ವೇದಿಕೆ ಮೂಲಕ ದಿನನಿತ್ಯ 33,000 ಬುಕಿಂಗ್‌ಗಳನ್ನು ಸುಗಮಗೊಳಿಸುತ್ತದೆ. ಟಿಬಿಒ ವಿದೇಶಿ ವಿನಿಮಯದ ನೆರವಿನೊಂದಿಗೆ ವ್ಯಾಪಕ ಶ್ರೇಣಿಯ ಕರೆನ್ಸಿಗಳಲ್ಲಿ (55+) ವ್ಯಾಪಾರ ವಹಿವಾಟು ನಡೆಸುತ್ತಿದೆ.

ಟಿಬಿಒ ಹೋಟೆಲ್‌ಗಳು, ಏರ್‌ಲೈನ್‌ಗಳು, ಕಾರು ಬಾಡಿಗೆಗಳು, ವರ್ಗಾವಣೆಗಳು, ಕ್ರೂಸ್‌ಗಳು, ವಿಮೆ, ರೈಲು ಮತ್ತು ಇತರೆ (ಒಟ್ಟಾರೆಯಾಗಿ, "ಪೂರೈಕೆದಾರರು") ಮತ್ತು ಟ್ರಾವೆಲ್ ಏಜೆನ್ಸಿಗಳು ಮತ್ತು ಸ್ವತಂತ್ರ ಪ್ರಯಾಣ ಸಲಹೆಗಾರರಂತಹ ಚಿಲ್ಲರೆ ಖರೀದಿದಾರರಿಗೆ, ಟೂರ್ ಆಪರೇಟರ್‌ಗಳು, ಟ್ರಾವೆಲ್ ಮ್ಯಾನೇಜ್‌ಮೆಂಟ್ ಕಂಪನಿಗಳು, ಆನ್‌ಲೈನ್ ಟ್ರಾವೆಲ್ ಕಂಪನಿಗಳು, ಸೂಪರ್–ಅಪ್ಲಿಕೇಶನ್‌ಗಳು ಮತ್ತು ಲಾಯಲ್ಟಿ ಅಪ್ಲಿಕೇಶನ್‌ಗಳನ್ನು ಒಳಗೊಂಡಿರುವ ಎಂಟರ್‌ಪ್ರೈಸ್ ಖರೀದಿದಾರರು ಮತ್ತು ಪೂರೈಕೆದಾರರಿಗೆ ಪ್ರಯಾಣ ವ್ಯವಹಾರವನ್ನು ಸರಳಗೊಳಿಸುತ್ತದೆ.

ಜತೆಗೆ, ಹೂಡಿಕೆದಾರರಿಗೆ ಮಾರಾಟ ಮಾಡುವ ಷೇರುಗಳ ಪೈಕಿ,ಟಿಬಿಒ ಕೊರಿಯಾ ಕಂಪನಿಗೆ 3,767,200 ವರೆಗೆ ಈಕ್ವಿಟಿ ಷೇರುಗಳನ್ನು ಮತ್ತು ಆಗಸ್ಟಾ ಟಿಬಿಒ ಕಂಪನಿಗೆ 6,656,796 ವರೆಗೆ ಷೇರುಗಳನ್ನು ಮಾರಾಟ ಮಾಡಲು ಕಂಪನಿ ಪ್ರಸ್ತಾಪಿಸಿದೆ.

ಕಂಪನಿ ಮತ್ತು ಮಾರಾಟ ಮಾಡುವ ಷೇರುದಾರರು, ಬುಕ್ ರನ್ನಿಂಗ್ ಲೀಡ್ ಮ್ಯಾನೇಜರ್‌ಗಳೊಂದಿಗೆ ಸಮಾಲೋಚಿಸಿ, ಅನ್ವಯವಾಗುವ ಕಾನೂನಿನ ಅಡಿ ಖಾಸಗಿ ಉದ್ಯೋಗ ಅಥವಾ ಇತರೆ ಮಾರ್ಗವನ್ನು ಪರಿಗಣಿಸಲು ಅನುಮತಿ ನೀಡಬಹುದು. ಕಂಪನಿಯು ತನ್ನ ವಿವೇಚನೆಯೊಂದಿಗೆ, ಈಕ್ವಿಟಿ ಷೇರುಗಳ ನಗದು ಪರಿಗಣನೆಗೆ ಅನುಮತಿ ನೀಡಬಹುದು. ರಿಜಿಸ್ಟ್ರಾರ್ ಆಫ್ ಕಂಪನೀಸ್‌ಗೆ ಕಂಪನಿ ವ್ಯವಹಾರದ ಸಂಕ್ಷಿಪ್ತ ವಿವರವುಳ್ಳ ದಾಖಲೆ ಸಲ್ಲಿಸುವ ಮೊದಲು ಪೂರ್ವ–ಐಪಿಒ ನಿಯೋಜನೆ ಕೈಗೊಳ್ಳಲಾಗುತ್ತದೆ.

ಎಕ್ಸಿಸ್ ಕ್ಯಾಪಿಟಲ್ ಲಿಮಿಟೆಡ್, ಗೋಲ್ಡ್‌ಮನ್ ಸ್ಯಾಕ್ಸ್(ಇಂಡಿಯಾ) ಸೆಕ್ಯೂರಿಟೀಸ್ ಪ್ರೈವೇಟ್ ಲಿಮಿಟೆಡ್ ಮತ್ತು ಜೆಎಂ ಫೈನಾನ್ಷಿಯಲ್ ಲಿಮಿಟೆಡ್ ಕಂಪನಿಗಳು ಈ ಸಂಚಿಕೆಯ ಬುಕ್ ರನ್ನಿಂಗ್ ಲೀಡ್ ಮ್ಯಾನೇಜರ್‌ಗಳಾಗಿ ಕಾರ್ಯ ನಿರ್ವಹಿಸಲಿವೆ.

ಇತ್ತೀಚೆಗೆ, ಪ್ರಮುಖ ಹೂಡಿಕೆ ಸಂಸ್ಥೆ ಜನರಲ್ ಅಟ್ಲಾಂಟಿಕ್ 2023 ಅಕ್ಟೋಬರ್ ನಲ್ಲಿ ಟಿಬಿಒ ಕಂಪನಿಯ ಅಲ್ಪ ಪ್ರಮಾಣದ ಪಾಲು ಅಥವಾ ಷೇರುಗಳನ್ನು ಸ್ವಾಧೀನಪಡಿಸಿಕೊಂಡಿದೆ ಅಥವಾ ಖರೀದಿಸಿದೆ ಎಂದು ಟಿಬಿಒ ಘೋಷಿಸಿದೆ.

# ಬೆಳಗಾವಿ: ಸೇವಾಕೇಂದ್ರದಲ್ಲಿ ದೀಪಾವಳಿ ಹಬ್ಬದ ಕಾರ್ಯಕ್ರಮ

ಬೆಳಗಾವಿ: ಪ್ರಜಾಪಿತಾ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯ, ಭಾಗ್ಯ ನಗರ, ಬೆಳಗಾವಿ ಸೇವಾಕೇಂದ್ರದಲ್ಲಿ ದೀಪಾವಳಿ ಹಬ್ಬದ ಕಾರ್ಯಕ್ರಮವನ್ನು ಆಚರಿಸಲಾಯಿತು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ ಶ್ರೀ. ಶಂಕರಗೌಡಾ ಪಾಟೀಲ ಕೇಂದ್ರ ಸರ್ಕಾರದಲ್ಲಿ ಕರ್ನಾಟಕದ ಪರ ವಿಶೇಷ ದೆಹಲಿ ಪ್ರತಿನಿಧಿಗಳು. ದೀಪ ಬೆಳಗಿಸಿ ಮಾತನಾಡುತ್ತಾ, ಈಶ್ವರೀಯ ವಿಶ್ವ ವಿದ್ಯಾಲಯ ಮಾಡುವ ಕಾರ್ಯ ಎಲ್ಲರಿಗೂ ಪ್ರೇರಣಾದಾಯಕವಾಗಿದೆ.

ಜನರು ಸಾತ್ವಿಕ ಜೀವನದತ್ತ ಗಮನ ಹರಿಸಬೇಕು. ಅಧ್ಯಾತ್ಮದಿಂದ ಮನುಷ್ಯನ ಜಾಗೃತಿ ಆಗುತ್ತದೆ ಎಂದು ಹೇಳಿದರು.

ಇನ್ನೋರ್ವ ಅತಿಥಿಗಳಾದ ಶ್ರೀ ಅವಿನಾಶ ಪೋತದಾರ, ರೋಟರಿ ಕ್ಲಬ ಅಧ್ಯಕ್ಷರು ಹಾಗೂ ಮಾರ್ಖಂಡೇಯ ಸಕ್ಕರೆ ಕಾರ್ಖಾನೆ ಅಧ್ಯಕ್ಷರು, ಜೀವನದಲ್ಲಿ ಕಷ್ಟ ಬಂದಾಗ ನಮಗೆ ಸಹಾಯ ಮಾಡುವವರೆ ನಿಜವಾದ ಮಿತ್ರರು, ಬ್ರಹ್ಮಾ ಕುಮಾರಿಸ್ ಈಶ್ವರೀಯ ವಿಶ್ವ ವಿದ್ಯಾಲಯದ ಪ್ರತಿಯೊಂದು ಕಾರ್ಯಕ್ಕೆ ನಾವು ಸಹಯೋಗಿ ಇದ್ದೇವೆ ಎಂದು ಹೇಳಿದರು.

ಶ್ರೀ. ಅಭಿಜಿತ ಜವಳಕರ ನಗರ ಸೇವಕರು, ಭಾಗ್ಯನಗರ, ಬೆಳಗಾವಿ ಆಗಮಿಸಿ ಇಲ್ಲಿಯ ಸಾತ್ವಿಕ ಆಹಾರ, ಇಲ್ಲಿಯ ತರಬೇತಿ ವಿಶೇಷತೆಗಳನ್ನು ಕೊಂಡಾಡಿದರು. ಡಾ॥ ಎಂ. ಜಿ. ಹೀರೆಮಠ ನಿವೃತ್ತ ಪ್ರಾಂಶುಪಾಲರು ಗೋಗಟೆ ವಾಣಿಜ್ಯ



ಮಹಾವಿದ್ಯಾಲಯ ಬೆಳಗಾವಿ ಇವರು ತಮ್ಮ ರಾಜಯೋಗದ ಅಭ್ಯಾಸದ ಅನುಭವ ಹಂಚಿಕೊಂಡರು.

ರಾಜಯೋಗಿನಿ ಬ್ರಹ್ಮಾ ಕುಮಾರಿ ವಿದ್ಯಾ ಅಕ್ಕನವರು ಸಂಚಾಲಕರು, ಅನಗೋಳ ಬೆಳಗಾವಿ, ದೀಪಾವಳಿ ಹಬ್ಬದ ರಹಸ್ಯವನ್ನು ತಿಳಿಸುತ್ತಾ ಎಲ್ಲಾ ಹಬ್ಬಗಳಲ್ಲಿ ದೀಪಾವಳಿ ಹಬ್ಬವು ವಿಶಿಷ್ಟವಾದದು, ಎಕೆಂದರೆ ದೀಪಾವಳಿ ಹಬ್ಬವನ್ನು 5 ದಿನಗಳ ಕಾಲ ವಿವಿಧ ರೂಪದಲ್ಲಿ ಆಚರಿಸಲಾಗುತ್ತದೆ.

ಪ್ರಕೃತಿಯ ಪಂಚತತ್ವಗಳಿಗೆ ಕೃತಜ್ಞತೆಯನ್ನು ಸಲ್ಲಿಸಲು ದೀಪಾವಳಿಯ ಮೋದಲನೇ ದಿನ ನೀರು ತುಂಬುವ ಹಬ್ಬ ಎಂದು ಆಚರಿಸಲಾಗುತ್ತದೆ. ಹಾಗೂ ಧನತ್ರಯೋದಶಿ ಎಂದು ಧನಲಕ್ಷ್ಮೀಯನ್ನು ಅಹ್ವಾನಿಸುತ್ತಾರೆ. ಶ್ರೀಕೃಷ್ಣ ನರಕಾಸುರನ ವಧೆ ಮಾಡಿದ ದಿನವನ್ನು ನರಕ ಚತುರ್ಥಿ ಎಂದು ಆಚರಿಸುತ್ತಾರೆ.

ಹಾಗಾದರೆ ಯಾರು ಈ ನರಕಾಸುರ. ನಮ್ಮಲ್ಲಿಯೇ ಇರುವ ಪಂಚ ವಿಕಾರಗಳು. ನಮ್ಮ ಜೀವನವನ್ನು ನರಕವನ್ನಾಗಿ ಮಾಡಿವೆ.

ಅದಕ್ಕಾಗಿ ಆ ನರಕಾಸುರ ವಧೆ ಮಾಡಲು ಆಧ್ಯಾತ್ಮಿಕ ಶಕ್ತಿಬೇಕು. ಇದನ್ನು ನೆನಪು ಮಾಡಿಸುವುದಕ್ಕಾಗಿ ವಿಜಯದ ತಿಲಕ ಇಟ್ಟು ಸಹೋದರ ಸಹೋದರಿಯರ ನಡುವ ಸಾಮರಸ್ಯವಿರಲಿ ಎನ್ನುವ ಕಾರಣಕ್ಕಾಗಿ ಭಾವು ಬೀಜ ದಿನ ಸಹೋದರಿ ಸಹೋದರನಿಗೆ ಆರತಿ ಮಾಡುವ ಪದ್ಧತಿಯಿದೆ. ಹೀಗೆ ದೀಪಾವಳಿ ಹಬ್ಬವು ಮನೆ ಮನಗಳಲ್ಲಿ ಸುಖ ಶಾಂತಿ ನೆಮ್ಮದಿ, ಸಾಮರಸ್ಯವನ್ನು ಬೆಳೆಸುವ ಎಂದು ತಿಳಿಸಿದರು.

ಬ್ರಹ್ಮಾಕುಮಾರಿ ಡಾ॥ ಸಂಗೀತಾ ಸಹ ಸಂಚಾಲಕರು ಭಾಗ್ಯನಗರ, ಬೆಳಗಾವಿ ಇವರು ಸಂಸ್ಥೆಯ ಪರಿಚಯ ತಿಳಿಸಿದರು. ಬ್ರಹ್ಮಾಕುಮಾರ ದತ್ತಾತ್ರೇಯರು ಅತಿಥಿಗಳಿಗೆ ಸ್ವಾಗತಿಸಿದರು.ಪ್ರೋಫೆಸರ ಶೈಲೇಜಾ ಹಿರೇಮಠ ಕಾರ್ಯಕ್ರಮವನ್ನು ನಿರೂಪಿಸಿದರು. ಬ್ರಹ್ಮಾಕುಮಾರ ಸುರೇಶ ಪತ್ತಾರ ವಂದಿಸಿದರು.

# ಲೋಕಸಭೆಯಲ್ಲಿ 20 ಸೀಟು ಗೆಲುವಿಗೆ ಗುರಿ: ಸಚಿವ ಸತೀಶ್ ಜಾರಕಿಹೊಳಿ

ಬೆಳಗಾವಿ: ಬೆಳಗಾವಿ ಲೋಕಸಭೆ ಕ್ಷೇತ್ರಕ್ಕೆ ಲಿಂಗಾಯತ, ಚಿಕ್ಕೋಡಿ ಕ್ಷೇತ್ರಕ್ಕೆ ಕುರುಬ ಸಮಾಜದ ಅಭ್ಯರ್ಥಿಯನ್ನು ಆಯ್ಕೆ ಮಾಡಬೇಕೆಂದು ಚಿಂತನೆ ನಡೆದಿದ್ದು, ರಾಜ್ಯದ 20 ಲೋಕಸಭಾ ಕ್ಷೇತ್ರಗಳ ಅಭ್ಯರ್ಥಿಗಳ ಗೆಲುವಿಗೆ ಗುರಿ ಇಟ್ಟುಕೊಳ್ಳಲಾಗಿದೆ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ನಗರದ ಕಾಂಗ್ರೆಸ್ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗಾಗಲೇ ಲೋಕಸಭೆ ಚುನಾವಣೆಗೆ ತಯಾರಿ ನಡೆದಿದೆ. ಕಾರ್ಯಕರ್ತರು ಚುನಾವಣೆ ಎದುರಿಸಲು ಸಿದ್ದರಾಗಿದ್ದು, ಎಲ್ಲಾ ರೀತಿಯ ಮಾನದಂಡಗಳನ್ನು ಅನುಸರಿಸಿ, ಮೂರು ಹಂತಗಳಲ್ಲಿ ಚರ್ಚಿಸಿದ ನಂತರ ಹೈಕಮಾಂಡ್ ಅಭ್ಯರ್ಥಿಗಳನ್ನು ಆಯ್ಕೆ ಮಾಡುತ್ತದೆ ಎಂದು ತಿಳಿಸಿದರು.

ಇಲ್ಲಿವರೆಗೆ ಯಾವುದೇ ಸಚಿವರಿಗೆ ಲೋಕಸಭೆ ಚುನಾವಣೆಗೆ ಅಭ್ಯರ್ಥಿಯಾಗಬೇಕೆಂದು ಹೈಕಮಾಂಡ್ ಹೇಳಿಲ್ಲ. ಅಭ್ಯರ್ಥಿಗಳ ಆಯ್ಕೆಗಾಗಿ ಮೊದಲು ಅರ್ಜಿ ಕರೆಯಲಾಗುತ್ತೆ. ಚುನಾವಣೆಗೆ ಸ್ಪರ್ಧಿಸಲು ಇಚ್ಛಿಸುವವರು ಅರ್ಜಿ ಸಲ್ಲಿಸಬೇಕು. ಅರ್ಜಿಗೆ ಯಾವುದೇ ರೀತಿಯ ಶುಲ್ಕ ಇರುವುದಿಲ್ಲ ಎಂದು ತಿಳಿಸಿದ ಅವರು, ಇನ್ನು ರಾಹುಲ್ ಜಾರಕಿಹೊಳಿ, ಮೃನಾಲ್ ಹೆಬ್ಬಾಳಕರ್ ಎಲ್ಲಿಯೂ ಲೋಕಸಭೆಗೆ ಸ್ಪರ್ಧೆ ಮಾಡುತ್ತೇನೆಂದು ಹೇಳಿಲ್ಲ ಎಂದು ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದರು.

ಎಚ್.ಡಿ. ಕುಮಾರಸ್ವಾಮಿ ಆರೋಪಕ್ಕೆ ಪ್ರತಿಕ್ರಿಯೆ ನೀಡಿದ ಸಚಿವ ಸತೀಶ್ ಜಾರಕಿಹೊಳಿ, ಎಚ್.ಡಿ. ಕುಮಾರಸ್ವಾಮಿಯವರು ವಿರೋಧ ಪಕ್ಷದಲ್ಲಿ ಇದ್ದಾರೆ, ಆರೋಪ ಮಾಡಲು ಅವರಿಗೆ ಹಕ್ಕು ಇದೆ. ಮಾತನಾಡುತ್ತಾರೆ, ನಾವು ಮಾತನಾಡಬೇಡ



ಅಂತಾ ಹೇಳಲು ಆಗಲ್ಲ. ಎಚ್ಡಿಕೆ ಸೋಪಾ ಗಿಫ್ಟ್ ಆರೋಪಕ್ಕೆ ಮುಖ್ಯಮಂತ್ರಿ ಕಚೇರಿ ಅಧಿಕಾರಿಗಳು ಸ್ಪಷ್ಟಿಕರಣ ನೀಡುತ್ತಾರೆ. ಅದರ ಬಗ್ಗೆ ನಮಗೆ ಗೊತ್ತಿಲ್ಲ ಎಂದ ಅವರು, ಸಚಿವರಿಗೆ ಹಣ ಸಂಗ್ರಹ ಟಾರ್ಗೆಟ್ ಬಗ್ಗೆ ಪ್ರತಿಕ್ರಿಯಿಸಿ, ಆ ರೀತಿಯ ಕಂಡಿಷನ್ ನಮ್ಮ ಮಂತ್ರಿ ಮಂಡಲದಲ್ಲಿ ನಡೆದಿಲ್ಲ ಎಂದು ಸ್ಪಷ್ಟಪಡಿಸಿದರು.

ಕಾಂಗ್ರೆಸ್ ಪಕ್ಷ ಸಾಕಷ್ಟು ಯೋಜನೆಗಳನ್ನು ಜನಕ್ಕೆ ನೀಡಿದೆ. ಆದರೆ ಪ್ರಚಾರ ಪಡೆದಿಲ್ಲ. ಪ್ರಚಾರ ಪಡೆಯುವ ಕಾರ್ಯ ಆಗಬೇಕಿದೆ ಎಂದರು. ಇನ್ನು ಜಾತಿ ಜನಗಣತಿ ಬಿಡುಗಡೆ ಬಗ್ಗೆ ಮಾತನಾಡಿ, ಜಾತಿ ಜನಗಣತಿ ವರದಿ ಬಗ್ಗೆ ಗೊತ್ತಿಲ್ಲ. ಅದರಲ್ಲಿ ಏನಿದೆ..? ಏನಿಲ್ಲ ಎನ್ನುವ ಅಂಶಗಳ ಕುರಿತು ಚರ್ಚೆ ನಡೆಯಬೇಕು. ಯಾರಿಗೆ ಜಾತಿ ಜನಗಣತಿ ಬಗ್ಗೆ ಗೊಂದಲ ಇದೆ ಅವರು ಸದನದಲ್ಲಿ ಹೇಳಲಿ, ಹೊರಗಡೆ ಹೇಳಿಕೆ ನೀಡಿದರೆ ಗೊಂದಲಕ್ಕೆ ಪರಿಹಾರ ಸಿಗಲ್ಲ ಎಂದರು.

ಕಾನೂನು ಸುವ್ಯವಸ್ಥೆ ಹದಗೆಟ್ಟಿಲ್ಲ: ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿಲ್ಲ. ಕೆಲವು ಚಿಕ್ಕ ವಯಸ್ಸಿನ ಯುವಕರು ಗುಂಪು ಕಟ್ಟಿಕೊಂಡು ಅಕ್ರಮ ಚಟುವಟಿಕೆಗಳಲ್ಲಿ ಭಾಗಿಯಾಗುತ್ತಿದ್ದು, ಅದೇ ಕಾರಣದಿಂದ ಜಿಲ್ಲೆಯಲ್ಲಿ ಕಳೆದ ಒಂದು ತಿಂಗಳಲ್ಲಿ ಕೊಲೆಗಳು ಆಗುತ್ತಿವೆ. ಇದಕ್ಕೆ ಪೊಲೀಸ್ ಅಧಿಕಾರಿಗಳು ಕಾರಣರಲ್ಲ. ಪೊಲೀಸರ ಗಮನಕ್ಕೆ ಬಂದರೆ ಕೆಲ ಘಟನೆಗಳನ್ನ ತಡೆಯುತ್ತಾರೆ. ಆದರೆ ಆಕಸ್ಮಿಕವಾಗಿ ನಡೆದರೆ ಏನು ಮಾಡುವುದು ಎಂದರು.

ನಾವು ಆಪರೇಶನ್ ಹಸ್ತ ಮಾಡುವುದಿಲ್ಲ: ಬೆಳಗಾವಿ ಮಹಾನಗರ ಪಾಲಿಕೆಯಲ್ಲಿ ಬಿಜೆಪಿ ಸದಸ್ಯರಿಗೆ ಸ್ವಾತಂತ್ರ್ಯ ವಾಗಿ ಕೆಲಸ ಮಾಡಲು ಅವರ ನಾಯಕರು ಬಿಡುತ್ತಿಲ್ಲ. ಅದಕ್ಕಾಗಿ ಅವರು ಪದೇ ಪದೇ ಸಭೆ ಮಾಡುತ್ತಿದ್ದಾರೆ. ಜನ ಬಿಜೆಪಿಯವರಿಗೆ ಅಧಿಕಾರ ನೀಡಿದ್ದು, ಅವರು ಆಡಳಿತ ನಡೆಸಲಿ, ನಾವು ಆಪರೇಶನ್ ಹಸ್ತ ಮಾಡುವುದಿಲ್ಲ. ಮಹಾನಗರ ಪಾಲಿಕೆ ಅನುದಾನ ಒಂದೇ ಕಡೆ ಹೋಗಿದ್ದು, ಇದೇ ವಿಚಾರಕ್ಕೆ ಉತ್ತರ ಮತ್ತು ದಕ್ಷಿಣ ಶಾಸಕರಲ್ಲಿ ಚರ್ಚೆ ನಡೆಯುತ್ತಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ವೀರಕುಮಾರ ಪಾಟೀಲ್, ಮಾಜಿ ಶಾಸಕ ಕಾಕಾಸಾಹೇಬ್ ಪಾಟೀಲ್, ಬೆಳಗಾವಿ ಗ್ರಾಮೀಣ ಕಾಂಗ್ರೆಸ್ ಅಧ್ಯಕ್ಷ ವಿನಯ ನಾವಲಗಟ್ಟಿ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸುನೀಲ್ ಹಣಮನ್ನವರ್, ಕೆಪಿಸಿಸಿ ಸದಸ್ಯ ಕಿರಣ ಸಾಧುನ್ನವರ್ ಸೇರಿದಂತೆ ಹಲವು ಮುಖಂಡರಿದ್ದರು.

# ಸಫಾಯಿ ಕಾರ್ಮಿಕರೊಂದಿಗೆ ದೀಪಾವಳಿ ಆಚರಣೆ

ಬೆಳಗಾವಿ: ಬೆಳಕಿನ ಹಬ್ಬ ದೀಪಾವಳಿ ಎಲ್ಲರೂ ಸಂಭ್ರಮ ಸಡಗರದಲ್ಲಿ ಆಚರಿಸುವ ಹಬ್ಬ . ಇಂತಹ ಹಬ್ಬದ ವಾತಾವರಣದಲ್ಲಿ ಜಿತೋ ಲೇಡಿಜ ವಿಂಗ ಪದಾಧಿಕಾರಿಗಳು ಮಹಾನಗರ ಪಾಲಿಕೆಯ ಸಫಾಯಿ ಕರ್ಮಚಾರಿಗಳೊಂದಿಗೆ ದೀಪಾವಳಿ ಹಬ್ಬವನ್ನು ಆಚರಿಸಿದರು.

ಇತ್ತಿಚಿಗೆ ಬೆಳಗಾವಿ ನಗರದ ಸದಾಶಿವ ನಗರದಲ್ಲಿರುವ ಅಂಬೇಡಕರ ಭವನದಲ್ಲಿ ಜಿತೋ ಲೇಡಿಜ ವಿಂಗನ ಪದಾಧಿಕಾರಿಗಳು ಸಪಾಯಿ ಕರ್ಮಚಾರಿಗಳೊಂದಿಗೆ ದೀಪಾವಳಿ ಹಬ್ಬವನ್ನು ಆಚರಿಸಿದರು. ಸಮಾಜಮುಖಿ ಹಾಗೂ ನಿಸ್ವಾರ್ಥ ಭಾವನೆಯಿಂದ ಪ್ರತಿ ದಿನ ನಗರವನ್ನು ಸ್ವಚ್ಛವಾಗಿರುವಂತೆ ಕಾರ್ಯ ನಿರ್ವಹಿಸುತ್ತಿರುವ





ಈ ಕರ್ಮಚಾರಿಗಳ ಕಾರ್ಯ ನಿಜಕ್ಕೂ ಶ್ಲಾಘನೀಯವಾಗಿದೆ ಎಂದು ಪದಾಧಿಕಾರಿಗಳು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಸುನಿಲ ಟೆಕ್ಸ್ಟೈಲ ಅವರ ವತಿಯಿಂದ 50 ಮಹಿಳಾ ಕರ್ಮಚಾರಿಗಳಿಗೆ ಹೊಸ ಸೀರೆಗಳನ್ನು ವಿತರಿಸಲಾಯಿತು. ಅದರಂತೆ ಲೇಡಿಜ ವಿಂಗನ ಪದಾಧಿಕಾರಿ ಪೂನಮ ಲೆಂಗಡೆ ಅವರ ವತಿಯಿಂದ ಸೌಂದರ್ಯಪ್ರದಾನ ವಸ್ತುಗಳನ್ನು ಸಹ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಈ ಕಾರ್ಯಕ್ರಮ ಸಂಯೋಜಕಿ ಸುನಿತಾ ಕಟಾರಿಯಾ, ಸಹ ಸಂಯೋಜಕಿ ಕೀರ್ತಿ ದೊಡ್ಡಣ್ಣವರ, ಜಿತೋ ಲೇಡಿಜ ವಿಂಗ ಅಧ್ಯಕ್ಷೆ ಮಾಯಾ ಜೈನ, ಪ್ರಧಾನ ಕಾರ್ಯದರ್ಶಿ ಮಮತಾ ಜೈನ ಸೇರಿದಂತೆ ಮೊದಲಾದವರು ಉಪಸ್ಥಿತರಿದ್ದರು.

ಆಹಾರ ಸಾಮಗ್ರಿ ಮತ್ತು ಉಪಹಾರ ವಿತರಣೆ: ದೀಪಾವಳಿ ಹಬ್ಬದ ನಿಮಿತ್ಯ ಜೈನ ಇಂಟೆರ್‌ನ್ಯಾಷನಲ್ ಟ್ರೆಡ್ ಆರ್ಗನೈಝೇಶನ ಜಿತೋ ಸಂಸ್ಥೆಯ ವತಿಯಿಂದ ಆರ್ಥಿಕವಾಗಿ ಹಿಂದುಳಿದ 50 ಕುಟುಂಬಗಳಿಗೆ ಆಹಾರ ಸಾಮಗ್ರಿ ಮತ್ತು ದೀಪಾವಳಿಯ ಸಿಹಿ ಉಪಹಾರಗಳನ್ನು ವಿತರಿಸಲಾಯಿತು.

ಬೆಳಗಾವಿ ನಗರಕ್ಕೆ ಹೊಂದಿಕೊಂಡಿರುವ ಅನಗೋಳ,ಅಲಾರವಾಡ, ಹಲಗಾ, ಬಸ್ತವಾಡ, ಮಜಗಾಂವ, ಹಳೆ ಬೆಳಗಾವಿ, ಮಚ್ಛೇ, ಪೀರನವಾಡಿ, ಶಹಾಪೂರ ಭಾಗಗಳಲ್ಲಿನ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳನ್ನು ಗುರುತಿಸಿ ಅವರಿಗೆ ಒಂದು ತಿಂಗಳಕಾಲದ ಆಹಾರ ಸಾಮಗ್ರಿ ಮತ್ತು ದೀಪಾವಳಿ ಹಬ್ಬದ ಸಿಹಿ ಜೊತೆಹೆ ಉಪಹಾರ ನೀಡಲಾಯಿತು.

ಈ ಸಂದರ್ಭದಲ್ಲಿ ಜಿತೋ ಅಧ್ಯಕ್ಷ ವೀರಧವಲ ಉಪಾಧ್ಯೆ, ಪ್ರಧಾನ ಕಾರ್ಯದರ್ಶಿ ಅಶೋಕ ಕಟಾರಿಯಾ ಕಾರ್ಯಕ್ರಮ ಸಂಯೋಜಕ ಸುನಿಲ ಬಸ್ತವಾಡ ಯುವ ಘಟಕದ ಅಧ್ಯಕ್ಷ ದೀಪಕ ಸುಬೇದಾರ ,ವೈಭವ ಮೆಹತಾ, ಪ್ರನಾಥ ಪಾಟೀಲ, ಸೇರಿದಂತೆ ಮೊದಲಾದವರು ಉಪಸ್ಥಿತರಿದ್ದರು.

# ಗೋಕಾಕದಲ್ಲಿ ಯುವಕನ ಹತ್ಯೆ



ಗೋಕಾಕ: ಪೆಟ್ರೋಲ್ ಬಂಕ್‌ನಲ್ಲಿ ಕೆಲಸ ಮುಗಿಸಿ ಮನೆಗೆ ತೆರಳುತ್ತಿದ್ದ ಯುವಕನೊಬ್ಬನನ್ನು ಬರ್ಬರವಾಗಿ ಕೊಲೆ ಮಾಡಿದ ಘಟನೆ ಪಟ್ಟಣದಲ್ಲಿ ನಡೆದಿದೆ.

ಅದೇ ಕಾಲೋನಿಯ ಯುವಕರಿಂದ ಹತ್ಯೆ ಮಾಡಿರುವ ಶಂಕೆ ವ್ಯಕ್ತವಾಗಿದ್ದು, ಆರೋಪಿ ಮನೆಗಳ ಮೇಲೆ ಮೃತನ ಕುಟುಂಬಸ್ಥರು ಕಲ್ಲು ತೂರಿ ಆಕ್ರೋಶ ಹೊರಹಾಕಿದ್ದಾರೆ.

ಸಂತೋಷ ಪೂಜಾರಿ(25) ಹತ್ಯೆಯಾದ ಯುವಕ. ಐದಾರು ಮಂದಿ ದುಷ್ಕರ್ಮಿಗಳು ಸಂತೋಷ ಮೇಲೆ ದಾಳಿ ನಡೆಸಿ ಹತ್ಯೆಗೈದಿದ್ದಾರೆ. ಇದರಿಂದ ಕೆರಳಿದ ಮೃತನ ಕುಟುಂಬಸ್ಥರು, ಆರೋಪಿಗಳ ಮನೆ ಮೇಲೆ ಕಲ್ಲು ತೂರಿದ್ದು, ಸ್ಥಳದಲ್ಲಿ ಬಿಗುವಿಣ ವಾತಾವರಣ ನಿರ್ಮಾಣವಾಗಿದೆ.

ಸ್ಥಳಕ್ಕೆ ದೌಡಾಯಿಸಿದ ಗೋಕಾಕ್ ಶಹರ ಠಾಣಾ ಪೊಲೀಸರು ಪರಿಶೀಲನೆ ನಡೆಸಿದ್ದು, ಸ್ಥಳದಲ್ಲಿ ಮೂರು ಡಿಆರ್ ತುಕಡಿ, ನಾಲ್ಕು ಸಿಪಿಐಗಳ ನೇತೃತ್ವದಲ್ಲಿ ಬಂದೋಬಸ್ತ್ ಕೈಗೊಳ್ಳಲಾಗಿದೆ.



## ಬಸವರಾಜ ಬೊಮ್ಮಾಯಿ ಆಶೀರ್ವಾದ ಪಡೆದ ಬಿ.ವೈ.ವಿಜಯೇಂದ್ರ

ಬೆಂಗಳೂರು: ನಿಕಟಪೂರ್ವ ಮುಖ್ಯಮಂತ್ರಿ, ನಮ್ಮೆಲ್ಲರ ಹಿರಿಯರಾದ ಬಸವರಾಜ ಬೊಮ್ಮಾಯಿ ಅವರನ್ನು ದೀಪಾವಳಿ ಶುಭ ಸಂದರ್ಭದಲ್ಲಿ ಭೇಟಿ ಮಾಡಿ ಅವರ ಆಶೀರ್ವಾದ ಪಡೆದಿದ್ದೇನೆ. ಅಲ್ಲದೆ ಮಾರ್ಗದರ್ಶನವನ್ನು ಕೋರಿದ್ದೇನೆ. ಅವರು ಬಹಳ ಸಂತೋಷ ಪಟ್ಟಿದ್ದಾರೆ. ರಾಜ್ಯಾಧ್ಯಕ್ಷರಾಗಿ ನಿನ್ನ ನೇಮಕ ಮಾಡುವ ಮೂಲಕ ರಾಷ್ಟ್ರೀಯ ನಾಯಕರು ಅತ್ಯುತ್ತಮ ನಿರ್ಣಯ ಮಾಡಿದ್ದಾಗಿ ಬೊಮ್ಮಾಯಿಯವರು ಹೇಳಿದ್ದಾಗಿ ಬಿಜೆಪಿಯ ನೂತನ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ತಿಳಿಸಿದರು.

ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರನ್ನು ಅವರ ನಿವಾಸದಲ್ಲಿ ಭೇಟಿ ಮಾಡಿ ಮಾತುಕತೆ ನಡೆಸಿದ ಬಳಿಕ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದರು. ಈ ನೇಮಕದಿಂದ ರಾಜ್ಯಕ್ಕೆ, ರಾಜ್ಯ ಬಿಜೆಪಿಗೆ ದೊಡ್ಡ ಶಕ್ತಿ ಬಂದಂತಾಗಿದೆ ಎಂದು ತಿಳಿಸಿದ್ದಾಗಿ ವಿವರಿಸಿದರು. ನಾನಷ್ಟೇ ಅಲ್ಲ; ಹಿರಿಯರೆಲ್ಲರೂ ನಿನ್ನ ಜೊತೆ ಇರಲಿದ್ದೇವೆ; ಸಹಕಾರ ನೀಡುವ ಮತ್ತು ಮಾರ್ಗದರ್ಶನ ನೀಡುವ ಮಾತನಾಡಿದ್ದಾರೆ ಎಂದರು.

ದೇಶದ ಭವಿಷ್ಯ ರೂಪಿಸುವ ಮುಂಬರುವ ಲೋಕಸಭಾ ಚುನಾವಣೆಯನ್ನು ನಾವೆಲ್ಲರೂ ಒಗ್ಗಟ್ಟಾಗಿ ಎದುರಿಸಬೇಕಾಗಿದೆ. ರಾಜ್ಯಾದ್ಯಂತ ಪ್ರವಾಸ ಮಾಡಿ ಪಕ್ಷಕ್ಕೆ ಶಕ್ತಿ ತುಂಬುವ ಕೆಲಸವನ್ನು ನಿನ್ನ ನೇತೃತ್ವದಲ್ಲಿ ಮಾಡೋಣ ಎಂದು ತಿಳಿಸಿದ್ದಾರೆ ಎಂದು ಹೇಳಿದರು. ಇದೇ 15ರಂದು ಬುಧವಾರ ಜವಾಬ್ದಾರಿ ಸ್ವೀಕರಿಸುವ ಸಂದರ್ಭದಲ್ಲಿ ತಾವು ಬಂದು ಆಶೀರ್ವಾದ ಮಾಡಬೇಕೆಂದು ಕೋರಿದ್ದೇನೆ. ಬರಲೆತ್ನಿಸುವುದಾಗಿ ತಿಳಿಸಿದ್ದಾರೆ ಎಂದು ನುಡಿದರು. ಬಿ.ವೈ.ವಿಜಯೇಂದ್ರ ಅವರನ್ನು ಬಸವರಾಜ ಬೊಮ್ಮಾಯಿ ಅವರು ಅಭಿನಂದಿಸಿ ಶುಭ ಹಾರೈಸಿದರು. ಶಾಸಕ ಕೃಷ್ಣಪ್ಪ, ಎಸ್ಸಿ ಮೋರ್ಚಾ ರಾಜ್ಯ ಅಧ್ಯಕ್ಷ ಮತ್ತು ವಿಧಾನಪರಿಷತ್ ಸದಸ್ಯ ಛಲವಾದಿ ನಾರಾಯಣಸ್ವಾಮಿ ಅವರು ಈ ಸಂದರ್ಭದಲ್ಲಿ ಇದ್ದರು.

# ಹಿರಿಯರನ್ನು ಗೌರವದಿಂದ ಕಾಣಿ: ಸುರೇಶ ಯಾದವ

ಬೆಳಗಾವಿ: ತಾಲೂಕಿನ ಬಸವನ ಕುಡಚಿ ದೇವರಾಜ ಅರಸ ಕಾಲನಿಯ ಚಿನ್ನಮ್ಮ ಬಸವಂತಯ್ಯ ಹಿರೇಮಠ ವೃದ್ಧಾಶ್ರಮದಲ್ಲಿರುವ ಹಿರಿಯ ಜೀವಗಳಿಗೆ ಸುರೇಶ ಯಾದವ ಫೌಂಡೇಶನ ಹಾಗೂ ಸುರೇಶ ಯಾದವ ಅಭಿಮಾನಿಗಳ ಬಳಗದ ವತಿಯಿಂದ ಬಟ್ಟೆ ವಿತರಿಸಲಾಯಿತು. ಹಿರಿಯರಿಗೆ ಗೌರವ ಸೂಚಿಸುವ ಮೂಲಕ ನಾವೆಲ್ಲರೂ ಅವರನ್ನು ಮಕ್ಕಳಂತೆ ಕಾಣಬೇಕು ಎಂದು ಸಿಹಿ ಹಂಚಿ ದೀಪಾವಳಿ ಆಚರಿಸಲಾಯಿತು.

ಈ ವೇಳೆ ಸುರೇಶ ಯಾದವ ಫೌಂಡೇಶನ ಅಧ್ಯಕ್ಷರಾದ ಸುರೇಶ ಯಾದವ ಅವರು



ಮಾತನಾಡಿ, ಮಕ್ಕಳಿಗಾಗಿ ಸರ್ವಸ್ವವನ್ನು ತ್ಯಾಗ ಮಾಡುವ ಪೋಷಕರನ್ನು ಕೊನೆಗಳಿಗೆಯಲ್ಲಿ ಪ್ರೀತಿ, ಗೌರವದಿಂದ ನಡೆದುಕೊಳ್ಳಬೇಕು ಎಂದರು.

ಹಿರಿಯರ ಅನುಭವದ ನುಡಿಗಳೇ ಯುವಪೀಳಿಗೆಗೆ ಗುಣಪಾಠವಾಗಿದ್ದು, ಅವರ ಮಾರ್ಗದರ್ಶನದಲ್ಲಿ ಉತ್ತಮ ಸಮಾಜ ಕಟ್ಟಲು ಶ್ರಮಿಸಬೇಕಿದೆ. ಅವರು ನಮ್ಮನ್ನು ಕಷ್ಟಪಟ್ಟು ಬೆಳೆಸಿ, ವಿದ್ಯಾವಂತರನ್ನಾಗಿ ಮಾಡಿರುತ್ತಾರೆ. ಅವರ ಮುಪ್ಪಿನ ಕಾಲದಲ್ಲಿ ಗೌರವದಿಂದ ನಡೆಸಿಕೊಳ್ಳುವುದು ಸಭ್ಯ ಸಮಾಜದ ಕರ್ತವ್ಯವಾಗಿದೆ ಎಂದರು.

ಆದರೆ, ಮಕ್ಕಳು ದೊಡ್ಡವರಾದ ಮೇಲೆ ವಿದೇಶಕ್ಕೆ ಹಾರುತ್ತಾರೆ. ಹಣ ಸಂಪಾದನೆಯ ನೆಪದಲ್ಲಿ ಪೋಷಕರು ತಂದೆ ತಾಯಿಗಳ ಮರತೇ ಹೋಗುತ್ತಾರೆ. ಹೆತ್ತು ಹೊತ್ತವರನ್ನು ವೃದ್ಧಾಶ್ರಮ ಸೇರಿಸಿ ಮನುಷ್ಯತ್ವ ಕಳೆದುಕೊಳ್ಳುತ್ತಾರೆ.

ನಾವು ಬಿತ್ತಿದ್ದನ್ನು ನಾವೇ ಉಣ್ಣಬೇಕು ಅನ್ನೋ ಮಾತಿದೆ. ಆದರೆ ನಮ್ಮ ವೃದ್ಧರಿಗೆ ಇದು ಸಿಗುತ್ತಿಲ್ಲ. ಅವರ ಕೊನೆಯ ದಿನಗಳಲ್ಲಿ ಅವರಿಗೆ ಮುಖದಲ್ಲಿ ನೋವೇ ಹೆಚ್ಚಾಗಿರುತ್ತದೆ ವಿಷಾದ ವ್ಯಕ್ತಪಡಿಸಿದರು.

ಆಶ್ರಮದ ಉಸ್ತುವಾರಿ ಎಮ್. ಸ. ಚೌಗಲೆ ಸವಿಸ್ತಾರವಾಗಿ ಹೇಳಿದರು. ಈ ಸಂದರ್ಭದಲ್ಲಿ ಮಲ್ಲಾರಿ ದೀಕ್ಷಿತ್, ಸ್ನೇಹಲ ಬೆಳ್ಳಿ, ಆರತಿ ದಿಕ್ಷಿತ, ಅಕ್ಷಯ ಅಂಬಡಗಟ್ಟಿ, ಮಹಾದೇವ ಟೋನ್ನಿ, ಮಾರುತಿ ತೆಲಸಂಗ, ಪ್ರಸನಗೌಡ ಪಾಟೀಲ, ಪ್ರಭು ಶಿವನಾಯಕ, ನಾನಾಗೌಡ ಬಿರಾದಾರ, ನಿತ್ಯಾ ಜಾಮದಾರ, ಚಂದ್ರಶೇಖರ ಸುಗಂಧಿ,ಸುನಂದಾ ಅಳ್ಳಟ್ಟಿ ,ಪ್ರೀತಿ ಜನಗೌಡ ಮತ್ತು ಜಾನಕಿ ಮುಂತಾದವರು ಉಪಸ್ಥಿರಿದ್ದರು.

## ಹಳ್ಳೂರಿನ ಸಮಾಜ ಸೇವಕ ಮುರಿಗೆಪ್ಪ ಮಾಲಗಾರರಿಗೆ ಸತ್ಕಾರ

ಬೈಲಹೊಂಗಲ: ರಬಕವಿ ಬಸ್ ಸ್ಟ್ಯಾಂಡ್ ಹತ್ತಿರ ನೂತನವಾಗಿ ನಿರ್ಮಿಸಲಾಗಿರುವ ಸನ್ ಶೈನ್ ಎಲವು ಕೀಲುಗಳ ಮತ್ತು ಹೆರಿಗೆ ಆಸ್ಪತ್ರೆ ಉದ್ಘಾಟನಾ ಸಮಾರಂಭನ್ನು ಶ್ರೀ ಗುರು ಸಿದ್ದೇಶ್ವರ ಬ್ರಹ್ಮಾನಂದ ಶ್ರೀಗಳ ಅಮೃತ ಹಸ್ತದಿಂದ ಹಾಗೂ ತೇರದಾಳ ಶಾಸಕ ಸಿದ್ದು ಸವದಿ ಅವರು ನೆರವೇರಿಸಿದರು.

ನಂತರ ಹಳ್ಳೂರ ಗ್ರಾಮದ ಸಮಾಜ ಸೇವಕ, ಪತ್ರಕರ್ತ ಮುರಿಗೆಪ್ಪ ಮಾಲಗಾರ ಅವರಿಗೆ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪಡೆದಿದ್ದಕ್ಕೆ ಶಾಸಕ ಸಿದ್ದು ಸವದಿ ಅವರು ಸನ್ಮಾನ ಮಾಡಿ ಗೌರವಿಸಿ ಮಾತನಾಡಿದರು.

ದಾವಾಖಾನೆಯು ಸುಸಜ್ಜಿತ ಕಟ್ಟಡ ಹೊಂದಿದ್ದು ಅನುಭವ ಉಳ್ಳ ವೈದ್ಯಕೀಯ ಸೌಲಭ್ಯ ಕಲ್ಪಿಸಿಕೊಡಲು ಸಕಲ ಸಿದ್ಧತೆ ಮಾಡಿಕೊಂಡಿದೆ. ಅದಕ್ಕಾಗಿ ಸುತ್ತಮುತ್ತಲಿನ ಸಾರ್ವಜನಿಕರು ಆಸ್ಪತ್ರೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಹಳ್ಳೂರ ಗ್ರಾಮದಲ್ಲಿ ಹಗಲಿರುಳು ಸಮಾಜ ಸೇವೆ ಸಲ್ಲಿಸುತ್ತಿರುವ ಯುವ ಮುಖಂಡರಾದ ಮುರಿಗೆಪ್ಪ ಮಾಲಗಾರ ಅವರಿಗೆ ಜಿಲ್ಲಾಡಳಿತ ವತಿಯಿಂದ ನಂ 1 ರಂದು ಜಿಲ್ಲಾ ಆಡಳಿತ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿಯನ್ನು ನೀಡಿದ್ದಕ್ಕೆ ಹೆಮ್ಮೆಯ ಸಂಗತಿಯಾಗಿದ್ದು ಮಾಲಗಾರ ಅವರು ಸಮಾಜಕ್ಕೆ ಕೊಡುಗೆ ನೀಡಿದ ಪ್ರತಿ ಪಲವಾಗಿ ಪ್ರಶಸ್ತಿ ದೊರೆತಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ತೇರದಾಳ ಪೊಲೀಸ್ ಠಾಣೆಯ ಪಿ. ಎಸ್. ಐ. ಅಪ್ಪು ಐಗಳಿ, ಬನಹಟ್ಟಿ ಪೊಲೀಸ್ ಠಾಣೆಯ ಪಿ. ಎಸ್.



ಐ ರಾಘವೇಂದ್ರ ಖೋತ, ಡಾ ಪಾರ್ವತಿ ಹಿರೇಮಠ. ಡಾ, ಸತೀಶ ಮಾಳಿ. ಡಾ ರಂಜನಾ ಮಾಳಿ. ಡಾ ಕೃಷ್ಣಾ ನಾಯಿಕ.ಡಾ ಕಾರ್ತಿಕ ಕೋಳಿ. ಡಾ ರವಿ ಜಮಖಂಡಿ ಡಾ ಕುಮಾರ ಅಥಣಿ. ಪಿ ಕೆ ಪಿ ಎಸ್ ಕಾರ್ಯದರ್ಶಿ ಸಂಜು ಅಥಣಿ. ಬಾಬಾಗೌಡ ಪಾಟೀಲ.ಸದಾಶಿವ ಹೊಸಮನಿ. ಮಾದೇವ ತೇರದಾಳ. ಗೋಪಾಲ ಯಡವನ್ನವರ. ಸುಭಾಸ ಚೋ ಳಿ.ಚಿನ್ನಪ್ಪ ಅಥಣಿ.ಮಲ್ಲಪ್ಪ ಬಿಸನಾಳ ಸೇರಿದಂತ ಅನೇಕರಿದ್ದರು.

## ಪಿಂಚಣಿದಾರರ ಮನೆಬಾಗಿಲಿನಲ್ಲಿ ಡಿಜಿಟಲ್ ಜೀವನ ಪ್ರಮಾಣ ಪತ್ರ

ಶಿವಮೊಗ್ಗ: ಭಾರತೀಯ ಅಂಚೆ ಇಲಾಖೆಯು ರಾಜ್ಯ ಸರ್ಕಾರದ ಖಜಾನೆಯೊಂದಿಗೆ ಕರ್ನಾಟಕ ರಾಜ್ಯ ಸರ್ಕಾರದ ಪಿಂಚಣಿದಾರರಿಗೆ/ ಕುಟುಂಬ ಪಿಂಚಣಿದಾರರು ವೈಯಕ್ತಿಕವಾಗಿ ಜೀವನ ಪ್ರಮಾಣ ಪತ್ರವನ್ನು ಸಲ್ಲಿಸುವ ಸಮಯದಲ್ಲಿ ಎದುರಿಸುತ್ತಿರುವ ತೊಂದರೆಗಳನ್ನು ತಪ್ಪಿಸಲು ಭಾರತೀಯ ಅಂಚೆ ಇಲಾಖೆಯು 'ಇಂಡಿಯಾ ಪೋಸ್ಟ್ ಪೇಮೆಂಟ್ಸ್ ಬ್ಯಾಂಕ್', ಪಿಂಚಣಿದಾರರ ಮನೆಬಾಗಿಲಿನಲ್ಲಿ ಡಿಜಿಟಲ್ ಲೈಫ್ ಪ್ರಮಾಣ ಪತ್ರವನ್ನು ಸಲ್ಲಿಸುವ ವ್ಯವಸ್ಥೆಯನ್ನು ಮಾಡಿದೆ. ಪಿಂಚಣಿದಾರರು ತಮ್ಮ ಡಿಜಿಟಲ್ ಲೈಫ್ ಪ್ರಮಾಣಪತ್ರವನ್ನು ಕೆಲವೇ ನಿಮಿಷಗಳಲ್ಲಿ ಪೋಸ್ಟ್ ಮನ್ ಮೂಲಕ ಆಧಾರ್ ಸಂಖ್ಯೆ, ಮೊಬೈಲ್ ಸಂಖ್ಯೆ, ಪಿಪಿಓ ಸಂಖ್ಯೆ ಮತ್ತು ಪಿಂಚಣಿದಾರರ ಬ್ಯಾಂಕ್ ಖಾತೆಯ ವಿವರಗಳೊಂದಿಗೆ ತಮ್ಮ ಬಯೋಮೆಟ್ರಿಕ್ (ಬೆರಳಚ್ಚು) ವೆರಿಫೈ ಮಾಡಿ ಸಲ್ಲಿಸಬಹುದಾಗಿದೆ. ಕರ್ನಾಟಕ ಸರ್ಕಾರದ ಪಿಂಚಣಿದಾರರು/ಕುಟುಂಬ ಪಿಂಚಣಿದಾರರು ತಮ್ಮ ಹತ್ತಿರದ ಅಂಚೆ ಕಚೇರಿಯಲ್ಲಿ ಅಥವಾ ಪೋಸ್ಟ್ ಮನ್ ಮೂಲಕ ಕೇವಲ ರೂ. 70/- (ಜಿಎಸ್ಟಿ ಸೇರಿದಂತೆ) ಶುಲ್ಕನೀಡಿ ಈ ಸೌಲಭ್ಯವನ್ನು ಪಡೆದು ತಮ್ಮ ಡಿಜಿಟಲ್ ಲೈಫ್ ಪ್ರಮಾಣ ಪತ್ರವನ್ನು ಸಲ್ಲಿಸುವಂತೆ ಶಿವಮೊಗ್ಗ ಅಂಚೆ ಇಲಾಖಾ ಕಚೇರಿಯ ಸೂಪರಿಟೆಂಡೆಂಟ್ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಕರ್ತವ್ಯ ನಿರತ ಪೊಲೀಸರ ಮೇಲೆ ಹಲ್ಲೆ: 10 ಮಂದಿ ಬಂಧನ

ಕಾರವಾರ: ಕರ್ತವ್ಯದಲ್ಲಿದ್ದ ಇಬ್ಬರು ಪೊಲೀಸರ ಮೇಲೆ ಯುವಕರ ಗುಂಪೊಂದು ಹಲ್ಲೆ ಮಾಡಿರುವ ಘಟನೆ ಶನಿವಾರ ತಡರಾತ್ರಿ ನಗರದಲ್ಲಿ ನಡೆದಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ 10 ಮಂದಿ ಆರೋಪಿಗಳನ್ನು ಬಂಧಿಸಿದ್ದು, ಇನ್ನೊಬ್ಬ ಆರೋಪಿಯ ಪತ್ತೆಗೆ ಪೊಲೀಸರು ಜಾಲ ಬೀಸಿದ್ದಾರೆ.

ಶನಿವಾರ ರಾತ್ರಿ ಕಾರವಾರ ನಗರದ ಬೈತಖೋಲ್ನಲ್ಲಿ ಬೀಟ್ ಕರ್ತವ್ಯದಲ್ಲಿದ್ದ ನಗರ ಠಾಣೆಯ ಕಾನ್ಸ್ಟೇಬಲ್ಗಳಾದ ಗಣೇಶ್ ಕುರಿಯವರ ಹಾಗೂ ಹರೀಶ್ ಗವಾಣಿಕರ ಎಂಬುವರ ಮೇಲೆ ಹಲ್ಲೆ ನಡೆದಿದೆ.

ಬೈತಖೋಲ್ ಭೂದೇವಿ ದೇವಸ್ಥಾನದ ಬಳಿ ಮಧ್ಯರಾತ್ರಿ 1.30ರ ವೇಳೆಗೆ ಗುಂಪು ಕಟ್ಟಿಕೊಂಡು ಕುಳಿತಿದ್ದ ತಂಡಕ್ಕೆ ಮನೆಗೆ ತೆರಳುವಂತೆ ಪೊಲೀಸರು ಸೂಚಿಸಿದ್ದಾರೆ. ಇದನ್ನೇ ನೆಪ ಮಾಡಿಕೊಂಡ ಆರೋಪಿಗಳು ಪೊಲೀಸ್ ಸಿಬ್ಬಂದಿ ಮೇಲೆ ಏಕಾಏಕಿ ಹಲ್ಲೆ ನಡೆಸಿದ್ದರು.

ಈಗಾಗಲೇ 10 ಮಂದಿ ಆರೋಪಿಗಳನ್ನು ಬಂಧಿಸಿ ನ್ಯಾಯಾಧೀಶರ ಮುಂದೆ ಹಾಜರುಪಡಿಸಲಾಗಿದೆ. ಬಂಧಿತ ಆರೋಪಿಗಳಾದ ಬೈತಖೋಲ್ ನಿವಾಸಿ ಸುನೀಲ ಗೌಡ, ಮಂಜುನಾಥ ಗೌಡ, ಸಂದೇಶ್, ರಘುವೀರ, ನಿತಿನ್ ಗೌಡ, ಗಗನ ಗೌಡ, ಅನುರಾಗ



ಗೌಡ, ಉಮೇಶ್ ಜನಕಪ್ರಸಾದ್, ವಿತೇಶ ಗೌಡ, ಯುವರಾಜ ಗೌಡ, ಸುಚಿತ ಗೌಡ ಎಂಬುವರ ವಿರುದ್ಧ ಕಾರವಾರ ನಗರ ಠಾಣೆಯಲ್ಲಿ ದೂರು ದಾಖಲಾಗಿದೆ.

ಅಂಬ್ಯುಲೆನ್ಸ್‌ನಲ್ಲಿ ಸ್ನೇಹಿತರ ಜಾಲಿಟ್ರಿಪ್, ದಂಡ ವಿಧಿಸಿದ ಪೊಲೀಸರು; ಸಾರ್ವಜನಿಕರ ಬಳಕೆಗಾಗಿ ಇರುವ ಅಂಬ್ಯುಲೆನ್ಸ್ ವಾಹನ ತೆಗೆದುಕೊಂಡು ಪ್ರವಾಸಕ್ಕೆ ಹೊರಟಿದ್ದ ಚಾಲಕ ಸೇರಿ ಏಳು ಜನರನ್ನು ಚಿಕ್ಕಮಗಳೂರು ಜಿಲ್ಲೆಯ ಕೊಟ್ಟಿಗೆಹಾರ ಬಳಿ ಪೊಲೀಸರು ವಶಕ್ಕೆ ಪಡೆದು ದಂಡ ವಿಧಿಸಿರುವ ಘಟನೆ ಇತ್ತೀಚೆಗೆ ನಡೆದಿತ್ತು.

ಅಪಘಾತ ಅಥವಾ ಅನಾರೋಗ್ಯದ ವೇಳೆ ಜನರನ್ನು ತುರ್ತಾಗಿ ಆಸ್ಪತ್ರೆಗೆ ಸಾಗಿಸುವ ಅಂಬ್ಯುಲೆನ್ಸ್ ಅನ್ನು ತೆಗೆದುಕೊಂಡು ಚಾಲಕ ಮತ್ತು ಆತನ ಆರು ಮಂದಿ ಗೆಳೆಯರು ಸೇರಿಕೊಂಡು ಬೆಂಗಳೂರಿನಿಂದ ಧರ್ಮಸ್ಥಳ, ಉಡುಪಿ ದೇವಸ್ಥಾನಕ್ಕೆ ಟ್ರಿಪ್ ಹೊರಟಿದ್ದರು.

ಆದರೆ ಕೊಟ್ಟಿಗೆಹಾರ ದಾಟಿ ಅಂಬ್ಯುಲೆನ್ಸ್ ಉಜಿರೆಗೆ ಬರುತ್ತಿದ್ದಂತೆ ವಾಹನ ಸೇರಿ ಏಳು ಜನ ಸ್ನೇಹಿತರನ್ನು ಬೆಳ್ತಂಗಡಿ ಸಂಚಾರಿ ಪೊಲೀಸರು ವಶಕ್ಕೆ ಪಡೆದಿದ್ದರು.

ಪೊಲೀಸ್ ಅಧಿಕಾರಿ ಸೂಚನೆ ಮೇರೆಗೆ ಪೊಲೀಸ್ ಸಿಬ್ಬಂದಿ ಅಂಬ್ಯುಲೆನ್ಸ್ ಸಹಿತ ಏಳು ಸ್ನೇಹಿತರನ್ನು ಠಾಣೆಗೆ ಕರೆದೊಯ್ದಿದ್ದರು.

ಏಳು ಜನರನ್ನು ಪೊಲೀಸರು ವಿಚಾರಿಸಿದ ವೇಳೆ ಬೆಂಗಳೂರಿನಿಂದ ಧರ್ಮಸ್ಥಳ, ಉಡುಪಿ ಸೇರಿದಂತೆ ವಿವಿಧ ದೇವಸ್ಥಾನಗಳಿಗೆ ಪ್ರವಾಸಕ್ಕೆ ತೆರಳುತ್ತಿದ್ದೆವು ಎಂದು ಪೊಲೀಸರ ಎದುರು ಒಪ್ಪಿಕೊಂಡಿದ್ದರು.

ಚಾಲಕನಿಂದ ಅಂಬ್ಯುಲೆನ್ಸ್ ದುರ್ಬಳಕೆ ಮಾಡಿರುವ ಕುರಿತಾಗಿ ದೂರು ದಾಖಲಿಸಿಕೊಂಡ ಸಂಚಾರಿ ಪೊಲೀಸರು, ಆತನಿಗೆ 4,500 ರೂ. ದಂಡ ವಿಧಿಸಿದ್ದರು.

## ಪಟಾಕಿ ಅವಘಡ: ಒಂದೇ ದಿನ 26 ಮಂದಿಗೆ ಗಾಯ



ಬೆಂಗಳೂರು: ದೀಪಾವಳಿ ಹಬ್ಬದಂದು ಪಟಾಕಿ ಸಿಡಿದು ಅನೇಕರು ಗಾಯಗೊಂಡಿರುವ ಪ್ರಕರಣಗಳು ವರದಿಯಾಗಿವೆ. ನಿನ್ನೆ ಒಂದೇ ದಿನ 26 ಮಂದಿಗೆ ಗಾಯಗಳಾಗಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ.

ಬೆಂಗಳೂರಿನ ನಾರಾಯಣ ನೇತ್ರಾಲಯದಲ್ಲಿ 22 ಮಂದಿ, ಮಿಂಟೋ ಆಸ್ಪತ್ರೆಯಲ್ಲಿ ನಾಲ್ವರು ಚಿಕಿತ್ಸೆ ಪಡೆಯುತ್ತಿದ್ದಾರೆ. 22 ಜನರಲ್ಲಿ 10 ಜನರಿಗೆ ಗಂಭೀರ ಗಾಯಗಳಾಗಿದ್ದು, 12 ಜನರಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಎಲ್ಲರಿಗೂ ಚಿಕಿತ್ಸೆ ನೀಡಲಾಗುತ್ತಿದೆ ಎಂದು ನಾರಾಯಣ ನೇತ್ರಾಲಯ ಮುಖ್ಯಸ್ಥ ರೋಹಿತ್ ಶೆಟ್ಟಿ ಮಾಹಿತಿ ನೀಡಿದ್ದಾರೆ.

ಇನ್ನು ಮಿಂಟೋ ಆಸ್ಪತ್ರೆಗೆ ದಾಖಲಾದ ನಾಲ್ವರಲ್ಲಿ ಇಬ್ಬರಿಗೆ ಗಂಭೀರ ಗಾಯಗಳಾಗಿದ್ದು, ಇಬ್ಬರಿಗೆ ಸಣ್ಣಪುಟ್ಟ ಗಾಯಗಳಾಗಿವೆ ಎಂದು ಮಿಂಟೋ ಆಸ್ಪತ್ರೆಯ ವೈದ್ಯರು ಮಾಹಿತಿ ನೀಡಿದ್ದಾರೆ. ಹಬ್ಬದ ವೇಳೆ ಪಟಾಕಿ ಅವಘಡಗಳ ಬಗ್ಗೆ ಎಷ್ಟೇ ಮುನ್ನೆಚ್ಚರಿಕೆ ವಹಿಸಿದರೂ ಈ ರೀತಿಯ ಘಟನೆಗಳು ಮರುಕಳಿಸುವುದು ಹೆಚ್ಚು ಆತಂಕ ಮೂಡಿಸುತ್ತವೆ.

# ಕುಂದಾನಗರಿಯಲ್ಲಿ ದೀಪಾವಳಿ ಸಂಭ್ರಮ: ಹಸಿರು ಪಟಾಕಿ ಬಳಸುವಂತೆ ಡಿಸಿ ಖಡಕ್ ಎಚ್ಚರಿಕೆ

ಬೆಳಗಾವಿ: ಬೆಳಕಿನ ಹಬ್ಬ ದೀಪಾವಳಿಯನ್ನು ರಾಜ್ಯಾಧ್ಯಂತ ಸಡಗರ ಸಂಭ್ರಮದಿಂದ ಆಚರಿಸಲಾಗುತ್ತದೆ. ದೀಪಾವಳಿ ವಿಶೇಷ ಎಂದರೆ ದೀಪ ಬೆಳಗಿಸುವುದು, ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮ ಪಡುವ ಹಬ್ಬ. ಆದರೆ ಈ ಸಡಗರ ಮಧ್ಯೆ ಪಟಾಕಿ ಸಿಡಿಸಲು ಹೋಗಿ ಅದೆಷ್ಟೋ ಅವಘಡಗಳು ಸಂಭವಿಸಿ ಯುವಕರು, ಮಕ್ಕಳು ಕಣ್ಣು ಕಳೆದುಕೊಂಡಿದ್ದಾರೆ. ಇಂತಹ ಘಟನೆಗಳು ಪ್ರತಿವರ್ಷವೂ ನಡೆಯುತ್ತಲೇ ಇವೆ. ಜತೆಗೆ ಪರಿಸರ ಮಾಲಿನ್ಯ ಹೆಚ್ಚಾಗುತ್ತಿದೆ. ಇದನ್ನು ಮನಗಂಡ ಬೆಳಗಾವಿ ಜಿಲ್ಲಾಡಳಿತ ಪರಿಸರಕ್ಕೆ ಮಾರಕವಾಗಿರುವ ಪಟಾಕಿಗಳನ್ನು ಬ್ಯಾನ್ ಮಾಡಿ ಹಸಿರು ಪಟಾಕಿಗಳನ್ನೇ ಬಳಸುವಂತೆ ಆದೇಶ ಹೊರಡಿಸಿದೆ.

ವಿವಿಧ ರೀತಿಯ ಪಟಾಕಿಗಳ ಸಿಡಿತದಿಂದ ಉಂಟಾಗುವ ಶಬ್ದ ಹಾಗೂ ವಾಯು ಮಾಲಿನ್ಯವನ್ನು ನಿಯಂತ್ರಣದಲ್ಲಿಡಲು, ಸಾರ್ವಜನಿಕ ಆಸ್ತಿ ಹಾಗೂ ಆರೋಗ್ಯ ಸಂರಕ್ಷಣೆಯ ಹಿತದೃಷ್ಟಿಯಿಂದ ಭಾರತ ಸರ್ಕಾರದ ಪರಿಸರ (ಸಂರಕ್ಷಣಾ) ನಿಯಮಾವಳಿ 1986 ತಿದ್ದುಪಡಿ 1999 ಮತ್ತು 2000 ಅಡಿಯಲ್ಲಿ ನಿಗದಿಪಡಿಸಿರುವ ಮಾನಕಗಳನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ 12-11-2020 ರಲ್ಲಿ ಕರ್ನಾಟಕ ಸರಕಾರವು ಸುತ್ತೋಲೆ ಹೊರಡಿಸಿರುತ್ತದೆ. ಅದರಂತೆ ಹಸಿರು ಪಟಾಕಿಗಳನ್ನು ಬಿಟ್ಟು ಉಳಿದ ಯಾವುದೇ ಇತರ ಪಟಾಕಿಗಳ ಮಾರಾಟ ಹಾಗೂ ಬಳಕೆಯನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಆದೇಶ ಹೊರಡಿಸಿದ್ದಾರೆ.

ಹಸಿರು ಪಟಾಕಿ ಹೇಗಿರುತ್ತವೆ..? ಹಸಿರು ಪಟಾಕಿಗಳ ಮೇಲೆ ಹಾಗೂ ಅವುಗಳ ಪ್ಯಾಕೇಟ್ ಮೇಲೆ ಹಸಿರು ಪಟಾಕಿಯ ಚಿಹ್ನೆ ಇರುತ್ತದೆ ಹಾಗೂ ಕ್ಯೂಆರ್ಕೋಡ್ ಸಹ



ಇರುತ್ತದೆ. ಸದರಿ ಚಿಹ್ನೆ ಇಲ್ಲದ ಯಾವುದೇ ಪಟಾಕಿ ಹಸಿರು ಪಟಾಕಿ ಎನಿಸುವುದಿಲ್ಲ.

ಅದೇ ರೀತಿ ಪಟಾಕಿಗಳು ಸಿಡಿಯುವ ಜಾಗದಿಂದ 4 ಮೀಟರ ದೂರದಲ್ಲಿ 125 ಡೆಸಿಬಲ್‌ಗಳಿಗಿಂತ (ಎಐ) ಅಥವಾ 145 ಡೆಸಿಬಲ್ (ಅ) ಕಏ ಗಿಂತ ಅಧಿಕ ಶಬ್ದ ಉಂಟು ಮಾಡುವ ಪಟಾಕಿಗಳ ತಯಾರಿಕೆ ಮಾರಾಟ ಹಾಗೂ ಬಳಕೆ ಮಾಡುವುದನ್ನು ನಿಷೇಧಿಸಲಾಗಿದೆ.

ಹಸಿರು ಪಟಾಕಿ ಬಿಟ್ಟು ಬೇರೆ ಯಾವುದೇ ಪಟಾಕಿಗಳನ್ನು ಮಾರಾಟ ಮಾಡಿದರೆ ಅವುಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು. ಸಂಜೆ8 ಗಂಟೆಯಿಂದ ರಾತ್ರಿ 10 ಗಂಟೆಯವರೆಗೆ ಮಾತ್ರ ಪಟಾಕಿಗಳನ್ನು ಸಿಡಿಸಲು ಅವಕಾಶ ನೀಡಿದೆ. ಉಳಿದ ಸಮಯದಲ್ಲಿ ಪಟಾಕಿ ಸಿಡಿಸುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ದಿನದ ಯಾವುದೇ ಸಮಯದಲ್ಲಿ ನಿಶ್ಯಬ್ದ ವಲಯಗಳೆಂದು ಘೋಷಿಸಲ್ಪಟ್ಟ ಸ್ಥಳಗಳಾದ ಆಸ್ಪತ್ರೆ, ಶಾಲೆ, ಪ್ರಾರ್ಥನಾ ಮಂದಿರ ಸೇರಿ ಇನ್ನಿತರ ಕಡೆಗಳಲ್ಲಿ ಸುತ್ತಮುತ್ತ ಯಾವುದೇ ರೀತಿಯ ಶಬ್ದ ಉಂಟುಮಾಡುವ ಪಟಾಕಿ ಹಾಗೂ ಸಿಡಿಮದ್ದುಗಳ ಬಳಕೆಯನ್ನೂ ನಿಷೇಧಿಸಲಾಗಿದೆ. ಈ ನಿಯಮಗಳನ್ನು ಉಲ್ಲಂಘಿಸಿದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

ಜಿಲ್ಲೆಯ ವಿವಿಧೆಡೆ ಪಟಾಕಿ ಸಂಗ್ರಹಣಾ ಗೋದಾಮುಗಳಿಗೆ ಪೊಲೀಸ್ ಮತ್ತು ಕಂದಾಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಅಂದಾಜು 5 ಟನ್ ಪಟಾಕಿ ಸೀಜ್ ಮಾಡಿದ್ದಾರೆ. ಹಾಗಾಗಿ, ಹಸಿರು ಪಟಾಕಿ ಬಳಸಿದರೆ ಶಬ್ದ ಮಾಲಿನ್ಯ ಮತ್ತು ವಾಯು ಮಾಲಿನ್ಯವನ್ನು ತಡೆಗಟ್ಟುವ ಜೊತೆಗೆ ಅವಘಡಗಳನ್ನು ತಪ್ಪಿಸಬಹುದು ಎಂದು ಸಾರ್ವಜನಿಕರಿಗೆ ಜಿಲ್ಲಾಧಿಕಾರಿ ನಿತೇಶ ಪಾಟೀಲ ತಿಳಿಸಿದರು.

# ವರ್ಷದ ಅಭಿನಂದನಾ ಸಮಾರಂಭ

ಬೆಳಗಾವಿ: ಕನ್ನಡಭಾಷೆ, ನೆಲ, ಜಲಕ್ಕಾಗಿ ದುಡಿದಿರುವ ಪಿ. ಬಿ. ಸ್ವಾಮಿಯವರ ಸೇವೆಯನ್ನು ಗುರುತಿಸಿ ಗೌರವಿಸುತ್ತಿರುವುದು ತುಂಬ ಸಂತೋಷವನ್ನುಂಟು ಮಾಡಿದೆ. ಈ ಗೌರವ ಸ್ವಾಮಿಯವರ ಪರಿವಾರಕ್ಕೆ ಸಂದ ಗೌರವವಾಗಿದ್ದು ತುಂಬ ಅಭಿಮಾನವೆನಿಸುತ್ತದೆ ಎಂದು ದಿವ್ಯಸಾನಿಧ್ಯವನ್ನು ವಹಿಸಿದ್ದ ಮೂಡಲಗಿಯ ಶ್ರೀ ಶಿವಬೋಧಸ್ವಾಮಿ ಸಂಸ್ಥಾನಮಠದ ಪೀಠಾಧಿಪತಿ ದತ್ತಾತ್ರಯಬೋಧ ಶ್ರೀಪಾದಬೋಧ ಮಹಾಸ್ವಾಮಿಗಳು ಇಂದಿಲ್ಲಿ ಹೇಳಿದರು.



ಚೆನ್ನಮ್ಮ ವೃತ್ತದ ಬಳಿಯಿರುವ ಕನ್ನಡ ಸಾಹಿತ್ಯ ಭವನದಲ್ಲಿ 'ಶ್ರೀ ಪಿ. ಬಿ. ಸ್ವಾಮಿ ಅಮೃತಮಹೋತ್ಸವ ಅಭಿನಂದನ ಸಮಿತಿ' ಇವರು ಹಿರಿಯ ಲೇಖಕ ಪಾಂಡುರಂಗ ಬಿ. ಸ್ವಾಮಿ ಅವರ 75ನೇಯ ವರ್ಷದ ಅಭಿನಂದನಾ ಸಮಾರಂಭವನ್ನು ಹಮ್ಮಿಕೊಂಡಿದ್ದರು.

ಸಾನಿಧ್ಯವನ್ನು ವಹಿಸಿದ್ದ .ಪೂಜ್ಯ ದತ್ತಾತ್ರಯಬೋಧರು ಮೇಲಿನಂತೆ ಅಭಿಪ್ರಾಯ ಪಟ್ಟರು. ಮುಂದೆ ಮಾತನಾಡುತ್ತ ಅವರು ಪಿ.ಬಿ. ಸ್ವಾಮಿಯವರ ದಾಂಪತ್ಯ ಜೀವನ ಯುವ ದಂಪತಿಗಳಿಗೆ ಮಾದರಿಯಾಗಿದೆ ಎಂದು ಹೇಳಿದರು.

ದಿವ್ಯ ಸಾನಿಧ್ಯವನ್ನು ಗದಗ ಡಂಬಳದ ತೋಂಟದ ಶ್ರೀ ಜಗದ್ಗುರು ಸಂಸ್ಥಾನಮಠ ಪ. ಪೂ. ಡಾ. ಸಿದ್ಧರಾಮ ಮಹಾಸ್ವಾಮಿಯವರು ಮಾತನಾಡುತ್ತ ಪಿ. ಬಿ. ಸ್ವಾಮಿಯವರು ಕಾವ್ಯ, ಲೇಖನ, ಜೀವನ ಚರಿತ್ರೆ ಹೀಗೆ ತುಂಬ ಮೌಲಿಕವಾದಂತಹ ಸಾಹಿತ್ಯವನ್ನು ರಚಿಸಿದ್ದಾರೆ.

ಇವರು ಸುಸಂಸ್ಕೃತ ವಾದಂತಹ ಮನೆತನದಿಂದ ಬಂದವರು ಎಂದು ಹೇಳಿದರು.

ಕಾರ್ಯ ಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತ ಹಿರಿಯ ಲೇಖಕ ಡಾ. ಜಿನದತ್ತ ದೇಸಾಯಿಯವರು, ಸ್ವಾಮಿಯವರು ಸಾರ್ಥಕ ಜೀವನವನ್ನು ಸಾಗಿಸಿದವರು. ಇವರು ತಮ್ಮ ಜೀವನದ ಕೃತಿಯೊಂದನ್ನು ಹೊರತರಲಿ ಆ ಕೃತಿಗೆ ನಾನೇ ಮುನ್ನುಡಿಯನ್ನು ಬರೆಯುತ್ತೇನೆ ಎಂದು ಹೇಳಿದರು.

ಗೌರವ ಸ್ವೀಕರಿಸಿದ ಪಿ. ಬಿ. ಸ್ವಾಮಿಯವರು ಮಾತನಾಡಿ ಇಂದಿನ ಈ ಕಾರ್ಯಕ್ರಮ ನನಗೆ ತುಂಬ ಸಂತೋಷವನ್ನುಂಟು ಮಾಡಿದೆ. ಇಂದು, ಇವರೆಲ್ಲ ತೋರುತ್ತಿರುವ ಅಭಿಮಾನಕ್ಕೆ ನಾನು ಮೂಕನಾಗಿದ್ದೇನೆ ಎಂದು ತುಂಬ ಭಾವುಕರಾಗಿ ಹೇಳಿದರು.

ಹಿರಿಯ ಸಾಹಿತಿ ಎಲ್. ಎಸ್. ಶಾಸ್ತ್ರಿ ಅಧ್ಯಕ್ಷತೆಯನ್ನು ವಹಿಸಿದ್ದರು.

ಮಾಜಿ ಶಾಸಕರಾದ ಎಸ್ ಸಿ ಮಾಳಗಿಯವರು ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ಅಭಿನಂದನಾ ಪರ ಮಾತುಗಳನ್ನು ಡಾ. ಬಸವರಾಜ ಜಗಜಂಪಿಯವರು ಮಾತನಾಡಿದರು.

ಈ ಸಂದರ್ಭದಲ್ಲಿ ಕನ್ನಡ ಸಾಹಿತ್ಯ ಭವನ ವಿಶ್ವಸ್ತ ಮಂಡಲಿ, ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ತು, ಶರಣ ಸಾಹಿತ್ಯ ಪರಿಷತ್ತು, ಕೃಷ್ಣಮೂರ್ತಿ ಪುರಾಣಿಕ ಟ್ರಸ್ಟ್, ಜಿಲ್ಲಾ ಲೇಖಕಿಯರ ಸಂಘ, ಕೃಷಿ ಹೌಸಿಂಗ್ ಸೊಸೈಟಿ, ಕರ್ನಾಟಕ ಪತ್ರಕರ್ತರ ಸಂಘ, ಹಾಸ್ಯಕೂಟ ಸಂಘಟನೆಗಳು ಸ್ವಾಮಿ ದಂಪತಿಗಳನ್ನು ಶಾಲು, ಮಾಲೆ, ನೆನಪಿನ ಕಾಣಿಕೆ ನೀಡಿ ಗೌರವಿಸಿದವು

ಶ್ರೀಮತಿ ಕೃಷ್ಣಾಬಾಯಿ ಕುಲಕರ್ಣಿ ಪ್ರಾರ್ಥಿಸಿದರು. ಡಾ. ಸಿ. ಕೆ. ಜೋರಾಪೂರ ಪರಿಚಯಿಸಿದರು. ಅಶೋಕ ಮಳಗಲಿ ಪ್ರಶಸ್ತಿ ಪತ್ರ ವಾಚಿಸಿದರು. ಅನ್ನಪೂರ್ಣಾ ಹಿರೇಮಠ ವಂದಿಸಿದರು. ಬಸವರಾಜ ಗಾರ್ಗಿ ನಿರೂಪಿಸಿದರು.

# ಕಟ್ಟಡ ನಿರ್ಮಾಣ ಮುಕ್ತಾಯ ಪ್ರಮಾಣ ಪತ್ರ (ಸಿ.ಸಿ) ಇಲ್ಲದೇ ನಳ ಸಂಪರ್ಕ ನೀಡುವಂತಿಲ್ಲ: ಅಶೋಕ ದುಡಗುಂಟಿ



ಬೆಳಗಾವಿ: ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಹೊಸ ನಳ ಸಂಪರ್ಕ ನೀಡಬೇಕಾದರೆ, ಮಹಾನಗರ ಪಾಲಿಕೆಯಿಂದ ನೀಡಲಾಗುವ ಕಟ್ಟಡ ನಿರ್ಮಾಣ ಮುಕ್ತಾಯ ಪ್ರಮಾಣ ಪತ್ರ (ಸಿ.ಸಿ) ಇಲ್ಲದೇ ಹೊಸ ನಳ ಸಂಪರ್ಕವನ್ನು ನೀಡಬಾರದೆಂದು ಮೆ॥ಎಲ್ & ಟಿ ಮತ್ತು ಕೆಯುಐಡಿಎಫ್‌ಸಿ ಅಧಿಕಾರಿಗಳಿಗೆ ತಾಕೀತು ಮಾಡಿದರು ಅವರು ಇತ್ತೀಚೆಗೆ ನಡೆದ 24/7 ನಿರಂತರ ನೀರು ಸರಬರಾಜು ಯೋಜನೆಯ ಅಡಾಕ್ ಸಮಿತಿಯ ಅಧ್ಯಕ್ಷ ತೆ ವಹಿಸಿ ಮಾತನಾಡಿದರು.

ಇತ್ತೀಚಿಗೆ ನಗರದಲ್ಲಿ ಬೇಕಾಬಿಟ್ಟಿ ನಳ ಸಂಪರ್ಕವಾಗುತ್ತಿರುವುದು ಮಹಾನಗರ ಪಾಲಿಕೆಯ ಗಮನಕ್ಕೆ ಬಂದಿದೆ ಹಾಗೂ ನಳ ಸಂಪರ್ಕ ನೀಡುವಲ್ಲಿ ವಿಳಂಬ ಪ್ರಕ್ರಿಯೆ, ಹಾಗೂ ಪಾರದರ್ಶಕತೆಯ ಕೊರತೆಯಿದೆ. ಇನ್ನು ಮುಂದೆ ಹೊಸ ನಳ ಸಂಪರ್ಕ ನೀಡುವಲ್ಲಿ ಸರಕಾರದ ಸುತ್ತೋಲೆ ಪ್ರಕಾರ ಹೊಸ ನಳ ಸಂಪರ್ಕ ನೀಡಬೇಕು ಹಾಗೂ ಮಹಾನಗರ ಪಾಲಿಕೆ ನೀಡುವ ಕಟ್ಟಡ ನಿರ್ಮಾಣ ಮುಕ್ತಾಯ ಪ್ರಮಾಣ ಪತ್ರ (ಸಿ.ಸಿ) ಇಲ್ಲದೇ ಹೊಸ ನಳ ಸಂಪರ್ಕ ನೀಡುವಂತಿಲ್ಲವೆಂದು ನಿರ್ದೇಶಿಸಿದರು.

ಸಭೆಯಲ್ಲಿ ಶ್ರೀಮತಿ. ಸ್ನೇಹಾ ಪಿ.ವಿ, ಸಹಾಯ ಆಯುಕ್ತರು, ಪೋಲಿಸ ಇಲಾಖೆ, ಶ್ರೀಮತಿ.ಲಕ್ಷ್ಮಿ ಸುಳಗೇಕರ, ಅಧೀಕ್ಷಕ ಅಭಿಯಂತರರು ಹಾಗೂ ಟ್ರಾನ್ಸಿಟ್ ಕೋಆರ್ಡಿನೇಟರ್ 24/7 ಡಬ್ಲ್ಯುಎಸ್, ಶ್ರೀ. ಅಶೋಕ ಬುರಕುಲೆ , ಅಧೀಕ್ಷಕ ಅಭಿಯಂತರರು, ಶ್ರೀ. ವಿ.ಎಮ್ ಸಾಲಿಮಠ, ಕಾರ್ಯನಿರ್ವಾಹಕ ಅಭಿಯಂತರರು, ಶ್ರೀ.ಶಿರೂರ ಕಾರ್ಯನಿರ್ವಾಹಕ ಅಭಿಯಂತರರು, ಜಲ ಮಂಡಳಿ, ಶ್ರೀ.ಎಮ್. ಅಂಜನಪ್ಪ, ವ್ಯವಸ್ಥಾಪಕರು, ಸಾಮಾಜಿಕ ಅಭಿವೃದ್ಧಿ, ಮೇ॥ ಎಲ್&ಟಿ ಹಾಗೂ ಸ್ಮೇಕ್ ಸಮಾಲೋಚಕರು, ಕಛೇರಿಯ ತಾಂತ್ರಿಕ ಮತ್ತು ಸಾಮಾಜಿಕ ಸಿಬ್ಬಂದಿಗಳು ಉಪಸ್ಥಿತರಿದ್ದರು.

# 108ನೇ ಸಂಸ್ಥಾಪನಾ ದಿನಾಚರಣೆ



ಬೆಳಗಾವಿ: ಕೆಎಲ್‌ಇ ಸಂಸ್ಥೆಯ ಪ್ರಧಾನ ಕಚೇರಿಯಲ್ಲಿ 108ನೇ ಸಂಸ್ಥಾಪನಾ ದಿನಾಚರಣೆಯನ್ನು ಆಚರಿಸಲಾಯಿತು. ಕೆಎಲ್‌ಇ ಸಪ್ತರ್ಷಿಗಳ ಹಾಗೂ ಮಹಾದಾನಿಗಳ ಭಾವಚಿತ್ರಕ್ಕೆ ಪೂಜೆಯನ್ನು ಸಲ್ಲಿಸುವ ಮೂಲಕ ಸಂಸ್ಥಾಪಕರ ಜೀವನ ಗಾಥೆಯನ್ನು ಸ್ಮರಿಸಲಾಯಿತು.

ಈ ಸಂದರ್ಭದಲ್ಲಿ ಸಂಸ್ಥೆಯಆಜೀವ ಸದಸ್ಯರಾದ ಡಾ.ಸುನೀಲ ಜಲಾಲಪುರೆ, ಡಾ.ಪ್ರಕಾಶ ಕಟಕೋಳ, ಮಹಾದೇವ ಬಳಿಗಾರ, ಡಾ.ಪ್ರಸಾದ ರಾಮಪುರೆ, ಡಾ.ಸಂತೋಷ ಪಾಟೀಲ, ಡಾ.ಎಂ.ಪಿ. ಸತೀಶಾ, ಡಾ.ಶಿವಯೋಗಿ ಹೂಗಾರ, ಡಾ. ದೀಪಾ ಮೆಟಗುಡ್, ಪ್ರೊ.ಶೀತಲ್ ನಂಜಪ್ಪನವರ ಉಪಸ್ಥಿತರಿದ್ದರು.

# ನಿಸ್ವಾರ್ಥ ಸೇವೆಯಿಂದ ಸಂಸ್ಥೆಯ ಏಳಿಗೆ: ಡಾ.ಎಸ್ ಸಿ ಧಾರವಾಡ

ಬೆಳಗಾವಿ: ಸತ್ಯ ಪ್ರೇಮ ಸೇವೆ ನಿಸ್ವಾರ್ಥತೆಯ ಸೇವಾಮನೋಭಾವದಿಂದ ಸಂಸ್ಥೆಯ ಬೆಳವಣಿಗೆ ಸಾಧ್ಯವಾಗುತ್ತದೆ ಎಂಬುದಕ್ಕೆ ಕೆ ಎಲ್ ಇ ಸಂಸ್ಥೆಯ ಬೆಳವಣಿಗೆಯೇ ಸಾಕ್ಷಿಎಂದು ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ನಿರ್ದೇಶಕರಾದಡಾ. ಎಸ್ ಸಿ ಧಾರವಾಡಅವರು ಮಾತನಾಡುತ್ತಿದ್ದರು.

ಅವರು ನಗರದ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯಲ್ಲಿ ನಡೆದ"ಕೆ ಎಲ್ ಇ ಸಂಸ್ಥೆಯ 108ನೇ ಸಂಸ್ಥಾಪನಾ ದಿನಾಚರಣೆ"ಯ ಅಂಗವಾಗಿ ಮಾತನಾಡುತ್ತಿದ್ದರು. ಪ್ರಾರಂಭದಲ್ಲಿ ಬೆರಳೆನಿಕೆಯಷ್ಟು ಸಂಸ್ಥೆಗಳನ್ನು ಹೊಂದಿದ್ದ ನಮ್ಮ ಸಂಸ್ಥೆಯು ಇಂದು 300ಕ್ಕೂ ಅಧಿಕ ಅಂಗ ಸಂಸ್ಥೆಗಳನ್ನು ಹೊಂದಿದೆ. ಇದು ಕೆ ಎಲ್ ಇ ಸಂಸ್ಥೆಯ ಇಂದಿನ ಕಾರ್ಯಾಧ್ಯಕ್ಷರಾದ ಡಾ.ಪ್ರಭಾಕರಕೋರೆ ಅವರು ಕಾರ್ಯಧಕ್ಷತೆಯನ್ನು ಸೂಚಿಸುತ್ತದೆ.



ಅಲ್ಲದೇ ಕೆ ಎಲ್ ಇ ಸಂಸ್ಥೆಯ ಸಪ್ತರ್ಷಿಗಳಾದ ಶ್ರೀ ಎಸ್ಎಸ್ ಬಸವನಾಳ, ಶ್ರೀ ಎಮ್‌ಆರ್ ಸಾಖ್ರೆ, ಶ್ರೀ ಬಿ ಬಿ ಮಮದಾಪೂರ, ಶ್ರೀ ಹೆಚ್‌ಎಫ್‌ಕಟ್ಟಿಮನಿ, ಶ್ರೀ ಪಿ ಆರ್‌ಚಿಕ್ಕೋಡಿ, ಶ್ರೀ ಬಿ ಎಸ್ ಹಂಚಿನಾಳ, ಶ್ರೀ ವಿ ವಿ ಪಾಟೀಲ ಅವರ ಸಾಮಾಜಿ ಕಚಿಂತನೆ ಹಾಗೂ ದೂರಾಲೋಚನೆಗಳಿಂದ ಕೆ ಎಲ್ ಇ ಸಂಸ್ಥೆಯು ಹುಟ್ಟಿ ಹೆಮ್ಮರವಾಗಿ ಬೆಳೆಯಿತು. ಅವರ ಆಸತ್ಯ ಪ್ರೇಮ ಸೇವೆ ನಿಸ್ವಾರ್ಥತೆಯ ವಿಚಾರಗಳು ನಮ್ಮ ಹಾಗೂ ಮುಂದಿನ ಪೀಳಿಗೆಗೆ ಏಳಿಗೆಯ ಬುನಾದಿಗಳಾಗಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಉಪಸ್ಥಿತರಿದ್ದ ಕೆ ಎಲ್ ಇ ಹೊಮಿಯೊಪಾಥಿಕ ಕಾಲೇಜಿನ ಪ್ರಾಂಶುಪಾಲರಾದ ಡಾ.ಎಮ್ ಎ ಉಡಚನಕರ ಅವರು ಮಾತನಾಡುತ್ತ ಶಿಕ್ಷಣ ದಾಸೋಹದ ಮಹದುದ್ದೇಶದಿಂದ ಪ್ರಾರಂಭಗೊಂಡ ಕೆ ಎಲ್ ಇ ಸಂಸ್ಥೆಯು ಇಂದು ಶಿಕ್ಷಣ, ವೈದ್ಯಕೀಯ ಶಿಕ್ಷಣ, ಕೃಷಿ, ತಾಂತ್ರಿಕ ಶಿಕ್ಷಣ ಹಾಗೂ ಸಂಶೋಧನೆಗಳಲ್ಲಿ ವಿಶ್ವವೇ ನಮ್ಮಕರ್ನಾಟಕದತ್ತ ಹಿಂತಿರುಗಿ ನೋಡುವಂತೆ ಮಾಡಿದೆ.

ಈ ಸಾಧನೆಯು ಒಂದೆರಡು ದಿನಗಳಲ್ಲಿ ಸಾಧ್ಯವಾದುದಲ್ಲ ಸಂಸ್ಥಾಪಕರ ಮನದಾಳದಲ್ಲಿದ್ದ ಶಿಕ್ಷಣ ದಾಸೋಹವನ್ನು ಎಲ್ಲರಿಗೂ ಮುಟುವಂತೆ ಸಾಧಿಸುವ ಹುರುಪು ಹುಮ್ಮಸ್ಸು ಇಂದು ಕೆ ಎಲ್ ಇ ಸಂಸ್ಥೆಯನ್ನು ಬೆಳೆಯುವಂತೆ ಮಾಡಿದೆ. ಅದರಂತೆ ನಮ್ಮ ಹಿರಿಯರು ನಡೆದದಾರಿಯನ್ನು ನಾವು ಅನುಸರಿಸಿದರೆ ನಮ್ಮ ಸಂಸ್ಥೆಯುಇನ್ನಷ್ಟು ಬೆಳೆಯುವಂತೆ ಮಾಡಬಹುದಾಗಿದೆ ಎಂದು ಅಭಿಮತ ವ್ಯಕ್ತಪಡಿಸಿದರು.

ಮತ್ತೊಬ್ಬ ಅತಿಥಿಗಳಾಗಿ ಆಗಮಿಸಿದ್ದ ಕೆ ಎಲ್ ಇ ಸೆಂಟಿನರಿಇನ್ಸ್ಟಿಟ್ಯುಟ್‌ಆಫ ನರ್ಸಿಂಗ ಸೈನ್ಸ ನ ಪ್ರಾಂಶುಪಾಲ ಡಾ. ವಿಕ್ರಾಂತ ನೇಸರಿಅವರು ಕೆ ಎಲ್ ಇ ಸಂಸ್ಥೆಯ ಸಂಸ್ಥಾಪಕರು ದಾನಿಗಳು ಹಾಗೂ ಹಿತೈಷಿಗಳನ್ನು ಈ ಸಂದರ್ಭದಲ್ಲಿ ನೆನಪು ಮಾಡಿಕೊಟ್ಟರು. ಈ ಸಂದರ್ಭದಲ್ಲಿ ಆಸ್ಪತ್ರೆಯ ಚಿಕ್ಕಮಕ್ಕಳ ವಿಭಾಗದ ಮುಖ್ಯಸ್ಥರಾದ ಡಾ.ಎಮ್‌ಎಸ್‌ಕಡ್ಡಿಅವರು ಹಾಗೂ ಅರವಳಿಕೆ ವಿಭಾಗದ ಮುಖ್ಯಸ್ಥರಾದ. ಡಾಆರ್ ಜಿ ನೆಲವಿಗಿ ಅವರು ಮಾತನಾಡಿದರು.

ಕಾರ್ಯ ಕ್ರಮದಲ್ಲಿ ಕೆಎಲ್‌ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ಸಮಸ್ತ ವೈದ್ಯಕೀಯ, ವೈದ್ಯಕೀಯೇತರ ಸಿಬ್ಬಂದಿ, ಕೆ ಎಲ್ ಇ ಹೊಮಿಯೊಪಾಥಿಕಕಾಲೇಜಿನ ಸಮಸ್ತ ಭೋದಕ, ಭೋದಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು, ಕೆ ಎಲ್ ಇ ಸೆಂಟಿನರಿಇನ್ಸ್ಟಿಟ್ಯುಟ್‌ಆಫ ನರ್ಸಿಂಗ ಸೈನ್ಸ ನ ಸಮಸ್ತ ಭೋದಕ, ಭೋದಕೇತರ ಸಿಬ್ಬಂದಿ ಬಾಗವಹಿಸಿದ್ದರು. ಕಾರ್ಯಕ್ರಮವನ್ನುಜನಸಂಪರ್ಕಅಧಿಕಾರಿ ಸಂತೋಷಇತಾಪೆ ನಿರೂಪಿಸಿ ವಂದಿಸಿದರು.


# ದಿ.ಶ್ರೀ.ಮ.ನಿ.ಪ್ರ. ಅಲ್ಲಮಪ್ರಭು. ಮಹಾಸ್ವಾಮಿಯವರಿಗೆ ಶ್ರದ್ಧಾಂಜಲಿ

ಬೆಳಗಾವಿ: ಚಿಕ್ಕೋಡಿ ತಾಲೂಕಿನ ಚಿಂಚಣಿ .ಶ್ರೀ.ಮ.ನಿ.ಪ್ರ. ಅಲ್ಲಮಪ್ರಭು. ಮಹಾಸ್ವಾಮಿಗಳು ಲಿಂಗೈಕ್ಯರಾಗಿದ್ದು ಬೆಳಗಾವಿ ಜಿಲ್ಲೆಯ ಕನ್ನಡ ದಿನಪತ್ರಿಕೆಗಳ ಸಂಪಾದಕರ ಸಂಘದ ವತಿಯಿಂದ ಅವರಿಗೆ ಭಾವಪೂರ್ಣ ಶೃದ್ಧಾಂಜಯನ್ನು ಅರ್ಪಿಸಲಾಗುತ್ತಿದೆ.

ಗಡಿಭಾಗದ ಕನ್ನಡದ ಕಣ್ಮಣಿ ಎಂದು ಹೆಸರು ವಾಸಿಯಾಗಿದ್ದ ಅವರು ಅಪ್ಪಟ ಕನ್ನಡ ಪ್ರೇಮಿಯಾಗಿದ್ದರು. ನೂರಾರು ಕನ್ನಡ ಪುಸ್ತಕಗಳನ್ನು ಮುದ್ರಿಸಿ ಹಿರಿಯ ಮತ್ತು ಕಿರಿಯ ಸಾಹಿತಿ, ಕವಿಗಳಿಗೆ ಪ್ರೋತ್ಸಾಹ ನೀಡುತ್ತಿದ್ದರು.

ಕನ್ನಡ ರಾಜ್ಯೋತ್ಸವವನ್ನು ವಿಶಿಷ್ಟ ರೀತಿಯಲ್ಲಿ ಆಚರಿಸುತ್ತಿದ್ದ ಶೃಈಗಳು ಪ್ರತಿ ವರ್ಷ ಕನ್ನಡ ಪರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಗಡಿ ಭಾಗದಲ್ಲಿ ನಿರಂತರವಾಗಿ ಕನ್ನಡದ ವಾತಾವರಣ ಉಳಿಯುವಂತೆ ಮಾಡಿದ್ದರು.

ಚಿಂಚಣಿಯ ಮಠವು ಕನ್ನಡದ ಮಠವೆಂದು ಮತ್ತು ಚಿಂಚಣಿ ಶ್ರೀಗಳ ಕನ್ನಡದ ಸ್ವಾಮಿಜಿ ಎಂದೇ ಹೆಸರು ವಾಸಿಯಾಗಿದ್ದರು. ತಮ್ಮ ಮಠದ ತೇರಿಗೆ ಕನ್ನಡದ ತೇರು ಎಂದೇ



ಹೆಸರಿಟ್ಟಿದ್ದ ಶ್ರೀಗಳು ಜಾತ್ರೆಯ ಸಂದರ್ಭದಲ್ಲಿ ತೇರು ಎಳೆಯುವಾಗ ತೇರಿನಲ್ಲಿ ಕನ್ನಡದ ಪುಸ್ತಕಗಳನ್ನಿಟ್ಟು ಕನ್ನಟ ಭಾಷೆಗೆ ವಿಶೇಷ ಗೌರವ ನೀಡುತ್ತಿದ್ದುದು ಅಷ್ಟೇ ಅಲ್ಲ ತೇರಿಗೆ ಹೊರಭಾಗದಲ್ಲಿ ಜ್ಞಾನಪೀಠ ಪ್ರಶಸ್ತಿ ವಿಜೇತರ ಫೋಟೊಗಳನ್ನು ಹಾಕಿರುತ್ತಿದ್ದರು.

ಎರಡು ತಿಂಗಳ ಹಿಂದೆ ಬೆಳಗಾವಿ ಜಿಲ್ಲೆಯ ಕನ್ನಡ ದಿನಪತ್ರಿಕೆಗಳ ಸಂಪಾದಕರ ಸಂಘದ ನಿಯೋಗವೊಂದು ಶ್ರೀಗಳನ್ನು ಭೇಟಿ ಮಾಡಿ ಗಡಿ ಭಾಗದಲ್ಲಿ ಕನ್ನಡ ಚಟುವಟಿಕೆ ಮತ್ತು ಗಡಿ ಭಾಗದಲ್ಲಿ ಕನ್ನಡ ಪರವಾದ ಚಟುವಟಿಕೆಗಳಿಗೆ ಸರಕಾರದಿಂದ ಹೆಚ್ಚಿನ ಒತ್ತು ನೀಡುವ ನಿಟ್ಟಿನಲ್ಲಿ ಗಂಟೆಗಳ ಕಾಲ ಚರ್ಚೆ ನಡೆಸಿತ್ತು.ಶ್ರೀಗಳು ಎಷ್ಟು ಬೇಗ ನಮ್ಮಿಂದ ದೂರಾಗುತ್ತಾರೆಂದು ಯಾರೂ ಕೂಡ ಕಲ್ಪನೆ ಮಾಡಿಕೊಂಡಿರಲಿಲ್ಲ, ಈ ದುಃಖದಲ್ಲಿ ಬೆಳಗಾವಿ ಜಿಲ್ಲೆಯ ಕನ್ನಡ ದಿನಪತ್ರಿಕೆಗಳ ಸಂಪಾದಕರ ಸಂಘದ ಎಲ್ಲ ಸದಸ್ಯರು, ಪತ್ರಕರ್ತರ ಸಂಘಟನೆಗಳ ಎಲ್ಲ ಸದಸ್ಯರು ಪಾಲ್ಗೊಂಡಿದ್ದಾರೆ. ಮೃತರ ಆತ್ಮಕ್ಕೆ ದೇವರು ಚಿರಶಾಂತಿಯನ್ನು ನೀಡಲಿ ಎಂದು ಪ್ರಾರ್ಥಿಸುತ್ತ ಭಾವಪೂರ್ಣ ಶ್ರದ್ಧಾಂಜಲಿಯನ್ನು ಅರ್ಪಿಸುತ್ತೇವೆ.

# ಅಂಬೇಡ್ಕರ ಓದು ಕಾರ್ಯಕ್ರಮದ ಉಪನ್ಯಾಸ



ಬೆಳಗಾವಿ: ಡಾ.ಬಾಬಾಸಾಹೇಬ ಅಂಬೇಡ್ಕರವರು ತಮ್ಮ ಜೀವನವನ್ನು ಮೇಣದ ಬತ್ತಿಯಂತೆ ಸುಟ್ಟುಕೊಂಡು ಇಡೀ ಶ್ರೇಷ್ಠ ಸಂವಿದಾನ ರಚಿಸಿ ಎಲ್ಲರಿಗೂ ತಮ್ಮ ಹಕ್ಕುಗಳನ್ನು ನೀಡಿ ಎಲ್ಲರ ಬಾಳಿಗೆ ಬೆಳಕು ನೀಡಿದವರೆಂದು ಆರ್‌ಪಿಡಿ ಕಾಲೇಜು ಕನ್ನಡ ವಿಭಾಗದ ಮುಖ್ಯಸ್ಥರಾದ ಡಾಎಚ್.ಬಿ.ಕೋಲ್ಕಾರ ಅಂಬೇಡ್ಕರವರ ಆದರ್ಶ ಜೀವನ ಕುರಿತು ಮಾತನಾಡಿದರು ಅವರು ಕಳೆದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಳಗಾವಿ ಹಾಗೂ ಸಿದ್ಧರಾಮೇಶ್ವರ ಪದವಿ ಪೂರ್ವ ಕಾಲೇಜು ಶಿವಬಸವನಗರ ಬೆಳಗಾವಿ ಇವರ ಸಂಯುಕ್ತಾ ಶ್ರಯದಲ್ಲಿ ಡಾ.ಬಿ.ಆರ್. ಅಂಬೇಡ್ಕರ ಓದು ಕಾರ್ಯಕ್ರಮದ ಜ್ಯೋತಿಬೆಳಗಿಸಿ ಉದ್ಘಾಟಿಸಿ ಉಪನ್ಯಾಸ ನೀಡಿ ಮಾತನಾಡಿ ಡಾ.ಬಾಬಾಸಾಹೇಬರು ಬೆಳೆಯುತ್ತಿರುವಾಗ ಎಷ್ಟೇ ಅಪಮಾನಗಳು ಬಂದರು ಸಹಿಸಿಕೊಂಡು ನಮ್ಮ ದೇಶದ ತುಳಿತಕ್ಕೆ ಒಳಗಾಗಿರುವ ಜನರಿಗೆ ಪ್ರತಿಯೊಂದು ಹಕ್ಕು ಸಿಗಬೆಕೆಂದು ಕನಸುಕಂಡವರು ಸ್ವಾಭಿಮಾನ ಬದುಕಿಗೆ ಶಿಕ್ಷಣ ವೇದಾರಿ ದೀಪ ಎನ್ನುವ ಸಂದೇಶ ಎಲ್ಲರಿಗೂತಳಿಸಿ ಕೊಟ್ಟವರು ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಳಗಾವಿ ಉಪನಿರ್ದೇಶಕರಾದ ವಿದ್ಯಾವಂತಿ ಭಜಂತ್ರಿ ಇವರು ಮಾತನಾಡಿ ಡಾ.ಬಾಬಾ ಸಾಹೇಬ ಅಂಬೇಡ್ಕರರು ಎಲ್ಲರು ಸೃಜನ ಶೀಲದಿಂದ ಮನಸಿಟ್ಟು ಕಲಿಯುವ ವಯಸ್ಸಿನಲ್ಲಿ ಶಿಕ್ಷಣ ಓದುವ ಕಡೆಗೆ ಮೊದಲೇನೆ ಪ್ರಾಧ್ಯಾನತೆ ಕೊಡಬೇಕು ನಮಗೆ ಜ್ಞಾನವಿದ್ದರೆ ವಿಶ್ವವನ್ನೆ ಗೆಲ್ಲಬಹುದೆಂದು ಹೇಳಿದರು.

ಎಲ್ಲ ನಮ್ಮ ಜೀವನ ಪರಿರ್ವತನೆ ಮಾಡುವ ವಯಸ್ಸು ಕಾಲೇಜು ಜೀವನ ಅದನ್ನು ವರ್ಥಹಾಳುಮಾಡಿ ಕೊಳ್ಳದೆ ಓದು ಕಡೆಗಡ ನಿಮ್ಮೆಲ್ಲರ ಆಶಕ್ತಿ ಇರಬೇಕು ಡಾ ಬಿ.ಆರ್. ಅಂಬೇಡ್ಕರ ಓದು ಕಾರ್ಯಕ್ರಮ ಆಯೋಜಿಸಿ ನಿಮ್ಮ ಮೇಲೆಜ್ಞಾನದ ಬೆಳಕು ಚೆಲ್ಲಲಿ ಎಂದರು.

ಸಮಾರಂಭದ ಅಧ್ಯಕ್ಷತೆಯನ್ನು ಕಾಲೇಜು ಪ್ರಾರ್ಚಾಯರಾದ ಸಿದ್ಧರಾಮ ರೆಡ್ಡಿ ವಹಿಸಿದರು. ಕಾಲೇಜು ವಿದ್ಯಾರ್ಥಿಗಳಿಗೆ ಭಾಷಣ, ಗಾಯನ ಪ್ರಭಂದ ಸ್ಪರ್ಧೆ ಆಯೋಜಿಸಿ ವಿಜೇತರಿಗೆ ಪುಸ್ತಕ ಪ್ರಮಾಣ ಪತ್ರ ನೀಡಿ ಪ್ರೋತ್ಸಾಹಿಸಲಾಯಿತು. ಸಮೃದ್ಧಿ ಕಲಾಸಂಗಮ ಸೇವಾ ಸಂಘದವರು ಭೀಮಗೀತ ಗಾಯನ ಪ್ರಸ್ತುತ ಪಡಿಸಿದರು. ಉಪನ್ಯಾಸಕರಾದ ಎ.ಕೆ. ಪಾಟೀಲ ಅಥಿತಿ ಪರಿಚಯ ಮಾಡಿ ಸ್ವಾಗತಿಸಿದರು. ಉಪನ್ಯಾಸಕಿ ಲಕ್ಷ್ಮೀ ಉಪ್ಪಾರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ತಂತ್ರಾಂಶಗಳು ಜಗತ್ತನ್ನು ಆಳುತ್ತಿವೆ: ಡಾ. ರವೀಂದ್ರನಾಥ ಕದಮ್

ಬೆಳಗಾವಿ: ಜಗತ್ತು ಇಂದು ತಂತ್ರಾಂಶದ ಮೇಲೆ ನಿಂತಿದೆ. ಜಗತ್ತಿನ ಪ್ರತಿಯೊಂದು ಆಗುಹೋಗುಗಳು ತಂತ್ರಾಂಶವನ್ನೇ ಅವಲಂಭಿಸಿವೆ. ಹಾಗಾಗಿ ಬಿಸಿಎ ವಿದ್ಯಾರ್ಥಿಗಳಿಗೆ ವ್ಯಾಪಕವಾದ ಉದ್ಯೋಗದ ಅವಕಾಶಗಳಿವೆ ಎಂದು ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಮೌಲ್ಯ ಮಾಪನ ಕುಲಸಚಿವರಾದ ಡಾ. ರವೀಂದ್ರನಾಥ ಕದಮ್ ಅಭಿಪ್ರಾಯ ಪಟ್ಟರು.

ನ. 10. ನಗರದ ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಘಟಕ ಮಹಾವಿದ್ಯಾಲಯದ ಸಭಾಂಗಣದಲ್ಲಿ ಮಹಾವಿದ್ಯಾಲಯದ ಕಂಪ್ಯೂಟರ್ ಸೈನ್ಸ್ ಮತ್ತು ಕಂಪ್ಯೂಟರ್ ಅಪ್ಲಿಕೇಷನ್ ವಿಭಾಗದವತಿಯಿಂದ ತಮ್ಮ ವಿದ್ಯಾರ್ಥಿಗಳಿಗೆ ಒಂದು ದಿನದ ಓರಿಯೆಂಟೇಶನ್ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಡಾ. ರವೀಂದ್ರನಾಥ ಕದಮ್ ಅವರು ಪ್ರತಿಯೊಂದು ಕ್ಷೇತ್ರವೂ ತಂತ್ರಾಂಶಗಳ



ಮೊರೆ ಹೋಗುತ್ತಿವೆ. ಅವುಗಳ ಬೇಡಿಕೆಗೆ ತಕ್ಕಂತೆ ಗಣಕ ವಿಜ್ಞಾನದ ವಿದ್ಯಾರ್ಥಿಗಳು ಸಿದ್ಧವಾಗಬೇಕು ಎಂದರು.

ಸಂಪನ್ಮೂಲ ವ್ಯಕ್ತಿಗಳಾದ ಡಾ. ಪರಶುರಾಮ ಬನ್ನಿಗಿಡದ ಅವರು ಕಂಪ್ಯೂಟರ್ ಅಪ್ಲಿಕೇಶನ್‌ಗಳು ಮತ್ತು ಸಾಫ್ಟ್‌ವೇರ್ ಅಭಿವೃದ್ಧಿಯ ಮೂಲಭೂತ ಜ್ಞಾನವನ್ನು ಪ್ರತಿಯೊಬ್ಬ ವಿದ್ಯಾರ್ಥಿಯೂ ಸರಿಯಾಗಿ ಅರಿತುಕೊಳ್ಳಬೇಕು. ಡೇಟಾಬೇಸ್ ನಿರ್ವಹಣೆ, ಪ್ರೋಗ್ರಾಮಿಂಗ್ ಭಾಷೆಗಳು, ಆಪರೇಟಿಂಗ್ ಸಿಸ್ಟಮ್ ಇತ್ಯಾದಿಗಳನ್ನು ಕಲಿಯುವುದರಿಂದ ತಾವು ಮುಂದೆ ಉತ್ತಮ ವೇತನದ ಉದ್ಯೋಗವನ್ನು ಪಡೆಯಬಹುದು. ಇಲ್ಲವೇ ತಾವೇ ಸ್ವತಃ ಉದ್ದಿಮೆದಾರರಾಗಬಹುದು. ಮಾರುಕಟ್ಟೆಯಲ್ಲಿ ಗಣಕ ವಿಜ್ಞಾನದ ಹಿನ್ನೆಲೆಯಿಂದ ಬಂದವರಿಗೆ ತುಂಬಾ ಬೇಡಿಕೆ ಇದೆ ಎಂದರು.

ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಎಸ್ ಎಸ್ ತೇರದಾಳ ಅವರು ಗಣಕ ವಿಜ್ಞಾನ ಕ್ಷೇತ್ರದಲ್ಲಿನ ಹೊಸ ಹೊಸ ಆವಿಷ್ಕಾರಗಳಿಗೆ ಜಗತ್ತು ಎದುರು ನೋಡುತ್ತಿದೆ. ಈ ವರ್ಷ ನಮ್ಮ ಮಹಾವಿದ್ಯಾಲಯದಲ್ಲಿ ಬಿ ಸಿ ಎ ಆರಂಭಿಸಿದ್ದೇವೆ. ಇನ್ನೂ ಮುಂದೆ ಇನ್ನಷ್ಟು ವೃತ್ತಿಪರ ಕೋರ್ಸ್‌ಗಳನ್ನು ಆರಂಭಿಸಲಿದ್ದೇವೆ. ವಿದ್ಯಾರ್ಥಿಗಳಿಗೆ ಈ ಮೂರು ವರ್ಷಗಳು ಅವರ ಉದ್ಯೋಗದ ದಿಕ್ಸೂಚಿಯಾಗಿರುತ್ತದೆ. ವಿದ್ಯಾರ್ಥಿಗಳು ಜ್ಞಾನ ಸಂಪಾದನೆ ಮಾಡಿಕೊಂಡು ಜ್ಞಾನದ ಮೂಲಕ ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕೆಂದು ಕಿವಿ ಮಾತು ಹೇಳಿದರು. ವಿದ್ಯಾರ್ಥಿನಿಯರಾದ ಗೀತಾ ಕೆ. ಪ್ರಾರ್ಥಿಸಿದರು. ಸ್ವಾತಿ ಕನಟ್ಟಿ ನಿರೂಪಿಸಿದರು. ಉಪನ್ಯಾಸಕರಾದ ಪ್ರವೀಣ್ ನಾಯ್ಕ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಡಾ. ಜ್ಯೋತಿ ಬಿರಾದಾರ ಸ್ವಾಗತಿಸಿದರು. ಡಾ. ನಮಿತಾ ಪೋತರಾಜ್ ಪರಿಚಯಿಸಿದರು. ಅರ್ಚನಾ ಮಗದುಮ್ ವಂದಿಸಿದರು. ಚೇತನ್ ಗಂಗಾಯಿ, ಅನುಷಾ ಡಿ. ಹಾಗೂ ಮಹಾವಿದ್ಯಾಲಯದ ಬೋಧಕ ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಉಪನ್ಯಾಸಕ ನಾಗರ್ಷ ಕೆ. ಎಂ ಗೆ ಡಾಕ್ಟರೇಟ್ ಪದವಿ




ಶಿವಮೊಗ್ಗ: ಶಿವಮೊಗ್ಗದ ಸರ್ಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿರುವ ನಾಗರ್ಷ ಕೆ.ಎಂ. ಇವರು ರಸಾಯನಶಾಸ್ತ್ರ ವಿಭಾಗದಲ್ಲಿ ವಿಶೇಷ ಸಂಶೋಧನೆ ನಡೆಸಿ "ಸಿಂಥೆಸಿಸ್, ಕ್ಯಾರಕ್ಟರೈಸೇಶನ್ ಆಫ್ ನ್ಯಾಫ್ತೊಫ್ಯೂರಾನ್ ಡಿರೈವೇಟಿವ್ಸ್ ಅಂಡ್ ದೇರ್ ಫಾರ್ಮಕೋಲಾಜಿಕಲ್ ಆಕ್ಟಿವಿಟೀಸ್" ಎಂಬ ವಿಷಯದ ಮೇಲೆ ಮಂಡಿಸಿದ್ದ ಮಹಾಪ್ರಬಂಧಕ್ಕೆ ಕುವೆಂಪು ವಿಶ್ವವಿದ್ಯಾಲಯವು ಡಾಕ್ಟರೇಟ್ ಪದವಿ ನೀಡಿ ಗೌರವಿಸಿದೆ. ಇವರಿಗೆ ಶಿವಮೊಗ್ಗದ ಸಹ್ಯಾದ್ರಿ ವಿಜ್ಞಾನ ಕಾಲೇಜಿನ ಪ್ರೊಫೆಸರ್ ಡಾ. ಲತಾ ಕೆ. ಪಿ. ಮಾರ್ಗದರ್ಶನ ಮಾಡಿರುತ್ತಾರೆ. ಮೂಲತಃ ಶಿವಮೊಗ್ಗ ತಾಲೂಕಿನ ಹಾರನಹಳ್ಳಿಯವರಾದ ಇವರು ಶಿವಮೊಗ್ಗ ಶರಾವತಿನಗರದ ನಿವಾಸಿ ಕಸೆಟ್ಟಿ ಮಂಜುನಾಥ ಮತ್ತು ಸುಮಂಗಳಾ ದಂಪತಿಗಳ ಪುತ್ರ.

# ಸಪ್ತರ್ಷಿಗಳ ತ್ಯಾಗ ಚಿರಸ್ಮರಣೀಯ: ಡಾ.ಎಚ್.ಎಸ್.ಮೇಲಿನಮನಿ ಅಭಿಮತ

ಲಿಂಗರಾಜ ಕಾಲೇಜಿನಲ್ಲಿ ಕೆಎಲ್‌ಇ ಸಂಸ್ಥಾಪನಾ ದಿನಾಚರಣೆ

ಬೆಳಗಾವಿ : ಸ್ವಾತಂತ್ರ್ಯ ಪೂರ್ವದಲ್ಲಿಯೇ ಶೈಕ್ಷಣಿಕ ಹಸಿವು ನೀಗಿಸಿದ ಶ್ರೇಯಸ್ಸುಕೆಎಲ್‌ಇ ಸಪ್ತರ್ಷಿಗಳಿಗೆ ಸಲ್ಲುತ್ತದೆ. ಅವರತ್ಯಾಗ ಶೈಕ್ಷಣಿಕ ಪ್ರೇಮ ಇಂದಿನವರಿಗೆ ದಾರಿದೀಪವೆನಿಸಿದೆ ಎಂದು ಲಿಂಗರಾಜಕಾಲೇಜಿನ ಪ್ರಾಚಾರ್ಯಡಾ. ಹನುಮಂತ ಮೇಲಿನಮನಿ ಹೇಳಿದರು. ಅವರುಕಾಲೇಜಿನ ಆಯೋಜಿಸಿದ್ದ 108ನೇ ಕೆಎಲ್‌ಇ ಸಂಸ್ಥಾಪನಾ ದಿನಾಚರಣೆಯಲ್ಲಿ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದರು. ಒಂದುಕಾಲದಲ್ಲಿ ಶೈಕ್ಷಣಿಕ ಹಸಿವಿನಿಂದ ಪರಿತಪಿಸುತ್ತಿದ್ದ ಘಟ್ಟದಲ್ಲಿದೂರದ ಊರುಗಳಿಗೆ ಹೋಗಿ ಶಿಕ್ಷಣವನ್ನು ಕಲಿಯಬೇಕಾದ ಅನಿವಾರ್ಯತೆಯನ್ನು ಅನುಭವಿಸಿದ್ದ ಏಳು ಜನ ಶಿಕ್ಷಕರು ಬೆಳಗಾವಿಯಲ್ಲಿ ಶಿಕ್ಷಣ ಸಂಸ್ಥೆಯನ್ನು ಹುಟ್ಟುಹಾಕಿ ಶಿಕ್ಷಣ ದಾಸೋಹವನ್ನುಗೈದರು.

1916ರಲ್ಲಿ ಆಂಗ್ಲೋ ವರ್ನ್ಯಾಕ್ಯುಲರ್ ಶಾಲೆಯನ್ನು ಬೆಳಗಾವಿ ಕಿಲ್ಲೆಯ ದಂಡುಮಂಡಳಿ ಪ್ರದೇಶದಲ್ಲಿ ಪ್ರಾರಂಭಿಸುವ ಮೂಲಕ ನೂತನ ಶೈಕ್ಷಣಿಕಕ್ರಾಂತಿಯನ್ನು ಮಾಡಿದರು. ಅನೇಕ ಕಷ್ಟಗಳನ್ನು ಪಟ್ಟರು. ಅವರ ಶ್ರಮ ಸಾರ್ಥಕವಾಯಿತು. ಬದುಕಿನಲ್ಲಿ ಹಣಕ್ಕಾಗಿ ಪರಿತಪಿಸದೆ



ಸಮಾಜಮುಖಿಯಾಗಿ ದುಡಿದರು ಕೆಎಲ್‌ಇ ಸಂಸ್ಥೆಯ ಜಾಗತಿಕವಾಗಿ ಡಾ.ಪ್ರಭಾಕರ ಕೋರೆಯವರ ಸಾರಥ್ಯದಲ್ಲಿ ವಿಸ್ತರಿಸುವಂತಾಗಿದೆ ಎಂದು ಹೇಳಿದರು.

ಕೆಎಲ್‌ಇ ಪ್ರಸಾರಾಂಗದ ನಿರ್ದೇಶಕರಾದ ಡಾ.ಮಹೇಶ ಗುರನಗೌಡರ ಅವರು ಉಪನ್ಯಾಸ ನೀಡುತ್ತಾ, ಅನೇಕ ಅಗ್ನಿದಿವ್ಯಗಳನ್ನು ಬದುಕಿನ ಎದುರಿಸಿ ಏಳುಜನ ಶಿಕ್ಷಕರು ಸಂಸ್ಥೆಯನ್ನು ಹುಟ್ಟುಹಾಕಿದರು. ಅವರಿಗೆ ಅರಟಾಳ ರುದ್ರಗೌಡರು, ರಾ.ಬ.ವಿ.ಜಿ. ಚಚಡಿ ದೇಸಾಯಿ, ರಾ.ಬ.ವೈಜಪ್ಪ ಅನಿಗೋಳರಂತಹ ಅನೇಕರ ಮಾರ್ಗದರ್ಶನ ಸಂಸ್ಥೆ ಸ್ಥಾಪನೆಗೆ ಭದ್ರಬುನಾದಿ ಹಾಕಿತು. ಅನೇಕ ದಾನಿಗಳು ಮಹಾದಾನಿಗಳಿಂದ ಸಂಸ್ಥೆಯನ್ನುಕಟ್ಟಿ ಬೆಳೆಸಿದರು. ಶಿಕ್ಷಣದ ಕನಸು ಕಂಡರುಅದನ್ನು ಸಾಕಾರಗೊಳಿಸಿದರು.

ಅವರ ನಿಸ್ವಾರ್ಥಸೇವೆ ಇಂದಿಗೂ ಅಮರವಾಗಿ. 1984ರಲ್ಲಿ ಸಂಸ್ಥೆಯಚುಕ್ಕಾಣಿ ಹಿಡಿದ ಡಾ.ಪ್ರಭಾಕರ ಕೋರೆಯವರು ಸಂಸ್ಥೆಯು ಜಾಗತಿಕವಾಗಿ ವಿಸ್ತರಿಸುವಲ್ಲಿ ಅಹರ್ನಿಶಿ ಶ್ರಮಿಸಿದರು. ಇಂದು ಸಂಸ್ಥೆ ಆರೋಗ್ಯ–ಶಿಕ್ಷಣ–ಸಂಶೋಧನಾಕ್ಷೇತ್ರದಲ್ಲಿ ಸಾಧಿಸಿರುವ ಸಾಧನೆ ವಿಸ್ಮಯವೆನಿಸಿದೆ. ದೇಶಕ್ಕೆ ನಾಡಿಗೆಕೆಎಲ್‌ಇ ಸಂಸ್ಥೆಯ ಕೊಡುಗೆ ಅನನ್ಯ ಅವಿಸ್ಮರಣೀಯವೆನಿಸಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಪ್ತರ್ಷಿಗಳ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು. ಪದವಿ ಪೂರ್ವಕಾಲೇಜಿನ ಪ್ರಾಚಾಯಗಿರಿಜಾ ಹಿರೇಮಠ, ಡಾ.ಸಿ.ಎಮ್.ಕಮತೆ, ಡಾ.ಜಿ.ಎನ್.ಶೀಲಿ, ಎನ್‌ಎಸ್‌ಎಸ್‌ಅಧಿಕಾರಿ ಡಾ.ಎಚ್.ಎಂ. ಚನ್ನಪ್ಪಗೋಳ, ದೈಹಿಕ ನಿರ್ದೇಶಕರಾದ ಡಾ.ಸಿ.ರಾಮ್‌ರಾವ್ ಸಿಬ್ಬಂದಿವರ್ಗದವರು ಉಪಸ್ಥಿತರಿದ್ದರು.

ಸಂಪುಟ: 4 ಸಂಚಿಕೆ: 238 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089